
ಡಾ|| ರಾಜ್‌ಕುಮಾರ್ ಅಕಾಡೆಮಿ
ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು



### ಸೆಪ್ಟೆಂಬರ್ 4ನೇ ವಾರ

22-09-2025 TO 27-09-2025

- 26ಕ್ಕೆ ಮಿಗ್–21ಗೆ ವಿದಾಯ
- 71ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳು
- 'ಅಗ್ನಿ ಪ್ರೈಮ್' ಕ್ಷಿಪಣಿ ಪರೀಕ್ಷೆ ಯಶಸ್ವಿ
- ಪರಿಷ್ಕೃತ ಜಿಎಸ್‌ಟಿ

| ವಾರದ ಪ್ರಚಲಿತ ಘಟನೆಗಳು - ಪ್ರಜಾವಾಣಿ | ದಿನಾಂಕ: 22ನೇ ಸೆಪ್ಟೆಂಬರ್– 27ನೇ ಸೆಪ್ಟೆಂಬರ್ 2025 |
|---|---|

## ❖ ಯದುವೀರ್ 11ನೇ ಖಾಸಗಿ ದರ್ಬಾರ್

**ಸಂದರ್ಭ:** ಇಲ್ಲಿನ ಅಂಬಾವಿಲಾಸ ಅರಮನೆಯ ದರ್ಬಾರ್ ಅಂಗಳದಲ್ಲಿ ಸಂಸದ ಹಾಗೂ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು 11ನೇ ಬಾರಿ ಖಾಸಗಿ ದರ್ಬಾರ್ ನಡೆಸಿದರು.

- ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ನೇತೃತ್ವದಲ್ಲಿ ಅರಮನೆಯಲ್ಲಿ ನವರಾತ್ರಿಯ ಪೂಜಾ ವಿಧಾನಗಳು ಮುಂಜಾನೆ 5.30ರಿಂದಲೇ ಆರಂಭವಾದವು. 5.30ರಿಂದ 5.45ರವರೆಗೆ ಸಿಂಹಾಸನಕ್ಕೆ ಸಿಂಹದ ಮೂರ್ತಿ ಜೋಡಿಸಲಾಯಿತು.
- ನಂತರ ಚಾಮುಂಡಿ ತೊಟ್ಟಿಯಲ್ಲಿ ಯದುವೀರ್ ಅವರಿಗೆ ಹಾಗೂ ವಾಣಿವಿಲಾಸ ದೇವರ ಮನೆಯಲ್ಲಿ ತ್ರಿಷಿಕಾ ಕುಮಾರಿ ದೇವಿ ಒಡೆಯರ್ ಅವರಿಗೆ ಬೆಳಿಗ್ಗೆ 9.55ರಿಂದ 10.15ರಲ್ಲಿ 'ಕಂಕಣ ಧಾರಣೆ' ಮಾಡಲಾಯಿತು.
- **ಪಟ್ಟದ ಆನೆ 'ಶ್ರೀಕಂಠ' , ನಿಶಾನೆ ಆನೆ 'ಏಕಲವ್ಯ' , ಪಟ್ಟದ ಕುದುರೆ, ಪಟ್ಟದ ಹಸು, ಪಟ್ಟದ ಒಂಟೆಗೆ ಕೋಡಿ ಸೋಮೇಶ್ವರ ದೇವಾಲಯದಲ್ಲಿ ಪೂಜೆ ಸಲ್ಲಿಸಿ ಆನೆ ಬಾಗಿಲಿಗೆ ಕರೆ ತರಲಾಯಿತು**. ನಂತರ ಅವುಗಳಿಗೆ ಸವಾರಿ ತೊಟ್ಟಿಯಲ್ಲಿ ಯದುವೀರ ಬೆಳಿಗ್ಗೆ 11.30ಕ್ಕೆ ಪೂಜೆ ಸಲ್ಲಿಸಿದರು.
- ಗಣಪತಿ, ಚಾಮುಂಡೇಶ್ವರಿ, ವಿಷ್ಣು, ಶಿವ, ಅಷ್ಟ ದಿಕ್ಪಾಲಕರ ಮತ್ತು ನವಗ್ರಹ ಪೂಜೆಯನ್ನು ನೆರವೇರಿಸಿದರು. ಕಳಶ ಪೂಜೆ ನಂತರ ಸಿಂಹಾಸನಕ್ಕೆ ಪೂಜೆ ಸಲ್ಲಿಸಲಾಯಿತು. ಸವಾರಿ ತೊಟ್ಟಿಯಿಂದ ಯದುವೀರ್ 'ಬಹುಪರಾಕ್' ಹೇಳಿ ಅವರನ್ನು ಸ್ವಾಗತಿಸಲಾಯಿತು.
- ಪರಕಾಲ ಮಠ, ಶೃಂಗೇರಿ ಮಠ, ಚಾಮುಂಡಿಬೆಟ್ಟದ ಚಾಮುಂಡೇಶ್ವರಿ, ನಂಜನಗೂಡು ಶ್ರೀಕಂಠೇಶ್ವರ, ಉತ್ತನಹಳ್ಳಿ ಜ್ವಾಲಾಮುಖಿ ತ್ರಿಪುರಸುಂದರಿ ಹಾಗೂ ಅರಮನೆ ಕೋಟೆಯೊಳಗಿನ ದೇವಾಲಯಗಳು ಸೇರಿದಂತೆ 23 ದೇವಾಲಯಗಳಿಂದ ತಂದಿದ್ದ ತೀರ್ಥವನ್ನು ಅರ್ಚಕರು ಯದುವೀರ್ ಅವರಿಗೆ ಪ್ರೋಕ್ಷಿಸಿದರು.
- ಮಧ್ಯಾಹ್ನ 12.42ರಿಂದ 12.58ರ ವರೆಗೆ ಯದುವೀರ್ ಸಿಂಹಾಸನಾರೋಹಣ ಮಾಡಿ ನಮಸ್ಕರಿಸಿದರು. ಸಂಸ್ಥಾನ ಗೀತೆ 'ಕಾಯೌ ಶ್ರೀ ಗೌರಿ' ವಾದ್ಯ ಸಂಗೀತ ನುಡಿಸಲಾಯಿತು.
- ಪ್ರಮೋದಾದೇವಿ ಒಡೆಯರ್ ಅವರಿಗೆ ಯದುವೀರ್ ತಲೆಬಾಗಿ ನಮಿಸಿದರು. ಬಳಿಕ ಯದುವೀರ್ ಅವರಿಗೆ ತ್ರಿಷಿಕಾ ಕುಮಾರಿ ಒಡೆಯರ್ ಆರತಿ ಬೆಳಗಿ, ಪಾದಪೂಜೆ ಸಲ್ಲಿಸಿದರು.

Dr. Rajkumar IAS/KAS Academy

## ❖ 22ರಿಂದಲೇ ಶುಲ್ಕ ನಿಯಮ ಜಾರಿ

**ಸಂದರ್ಭ:** 2026ನೇ ಆರ್ಥಿಕ ವರ್ಷದಲ್ಲಿ ವೀಸಾ ಪಡೆಯಲು ಅರ್ಜಿ ಸಲ್ಲಿಸಿರುವವರು ಸೇರಿದಂತೆ ಸೆಪ್ಟೆಂಬರ್ 21ರ ನಂತರ ಎಚ್-1ಬಿ ವೀಸಾಕ್ಕಾಗಿ ಅರ್ಜಿ ಸಲ್ಲಿಸುವವರು 1 ಲಕ್ಷ ಡಾಲರ್ (ಸುಮಾರು ₹88 ಲಕ್ಷ) ಶುಲ್ಕ ಪಾವತಿಸಬೇಕು ಎಂದು ಅಮೆರಿಕ ಸರ್ಕಾರ ತಿಳಿಸಿದೆ.

- ಎಚ್-1ಬಿ ವೀಸಾ ಕುರಿತ ಪ್ರಶ್ನಾವಳಿ ಮತ್ತು ಉತ್ತರ ಗಳಿರುವ ಮಾಹಿತಿಯನ್ನು ಡುಗಡೆ ಮಾಡಿದ್ದು, ಅದರಲ್ಲಿ ಅಮೆರಿಕ ಉದ್ಯೋಗಿಗಳ ರಕ್ಷಣೆ ನಿಟ್ಟಿನಲ್ಲಿ ಎಚ್-1ಬಿ ವೀಸಾ ಸುಧಾರಣೆ ಮಹತ್ವದ ಮತ್ತು ಆರಂಭಿಕ ಹೆಜ್ಜೆ ಎಂದು ಹೇಳಲಾಗಿದೆ.
- ಸೆ.22 ಪ್ರಾರಂಭವಾಗುವ ನಡುರಾತ್ರಿಯಿಂದ ನೂತನ ನಿಯಮವು ಅನ್ವಯವಾಗಲಿದೆ ಎಂದು ಅದು ತಿಳಿಸಿದೆ.
- **ಎಚ್1 ಬಿ ವೀಸಾದ ಶುಲ್ಕವನ್ನು 1 ಲಕ್ಷ ಡಾಲರ್‌ಗೆ ಹೆಚ್ಚಿಸಿರುವುದು ಹೊಸ ಅರ್ಜಿಗಳಿಗೆ ಮಾತ್ರ ಅನ್ವಯವಾಗಲಿದೆ ಎಂದು ಅಮೆರಿಕ ಪೌರತ್ವ ಮತ್ತು ವಲಸೆ ಸೇವೆ (ಯುಎಸ್‌ಸಿಐಎಸ್)**

**ಏಜೆನ್ಸಿಯು** ಹೇಳಿಕೆಯಲ್ಲಿ ತಿಳಿಸಿತ್ತು. ಆದರೆ ಯಾವ ದಿನಾಂಕದಿಂದ ನೂತನ ನಿಯಮ ಅನುಷ್ಠಾನಗೊಳ್ಳಲಿದೆ ಎಂದು ಸ್ಪಷ್ಟವಾಗಿ ತಿಳಿಸಿರಲಿಲ್ಲ.

## ❖ ಜನರ ಸಹಭಾಗಿತ್ವದಿಂದ 'ಕಲ್ಯಾಣ'

**ಸಂದರ್ಭ:** ಗ್ರಾಮೀಣ ಕುಟುಂಬಗಳಿಗೆ **ನೂರು ದಿನಗಳ ಉದ್ಯೋಗವನ್ನು ಖಾತರಿಪಡಿಸುವ 'ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ' ಜಾರಿಯಾಗಿ ಇಪ್ಪತ್ತು ವರ್ಷಗಳಾಗುತ್ತಿದೆ**. ಇದು **ವಿಶ್ವದ ಅತಿದೊಡ್ಡ ಉದ್ಯೋಗ ಯೋಜನೆ**. ಈ ಯೋಜನೆಯು ಕೋಟ್ಯಂತರ ಬಡ ಕುಟುಂಬಗಳಿಗೆ **ಸಂವಿಧಾನದ 41ನೇ ವಿಧಿಯ ಆರ್ಥಿಕ ನ್ಯಾಯದ ಆಶ್ವಾಸನೆಯನ್ನು ಭಾಗಶಃ ಆದರೂ ಈಡೇರಿಸಿದೆ.**

- ರಾಯಚೂರಿನಲ್ಲಿ 2023–24ರಲ್ಲಿ ನಕಲಿ ಹಾಜರಾತಿ ಮತ್ತು ಸರಬರಾಜು ಬಿಲ್‌ಗಳ ಮೂಲಕ ಕೋಟಿಗಟ್ಟಲೆ ಹಣವನ್ನು ಅಧಿಕಾರಿಗಳು ಲಪಟಾಯಿಸಿದ್ದು, ಯಾದಗಿರಿ- ಬಾಗಲಕೋಟೆ ಜಿಲ್ಲೆ ಗಳಲ್ಲಿ ಪುರುಷರು ಸೀರೆ ಉಟ್ಟು 'ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್' (ಎನ್‌ಎಂಎಂಎಸ್) ಆ್ಯಪ್ ಅನ್ನು ವಂಚಿಸಿದ್ದು, ಮತ್ತಿತರ ಹಗರಣಗಳನ್ನು ಗಮನಿಸಿದರೆ, ಭ್ರಷ್ಟಾಚಾರವು ಈ ಯೋಜನೆಯಲ್ಲಿ ಹಾಸುಹೊಕ್ಕಾಗಿರುವುದು ತಿಳಿಯುತ್ತದೆ.
- ಬಯೊಮೆಟ್ರಿಕ್ ದೃಢೀಕರಣ, ಜಿಯೋ-ಟ್ಯಾಗ್ ಮುಂತಾದ ತಂತ್ರಾಂಶಗಳು ಇದ್ದಾಗ್ಯೂ ಅಧಿಕಾರಿಗಳು, ಜನಪ್ರತಿನಿಧಿಗಳು ಮತ್ತು ಅವರಿಗೆ ಸಹಕರಿಸುವ ಒಂದಷ್ಟು ಕಾರ್ಮಿಕರು ಶಾಮೀಲಾದಾಗ, ತಾಂತ್ರಿಕ ವ್ಯವಸ್ಥೆಗಳು ವಿಫಲಗೊಂಡು ಭ್ರಷ್ಟಾಚಾರವನ್ನು ನಿಗ್ರಹಿಸಲು ಸೋತಿರುವುದು ಸ್ಪಷ್ಟವಾಗಿದೆ.
- **ಉದ್ಯೋಗ ಖಾತರಿ ಯೋಜನೆಯಲ್ಲಿ ಪ್ರಾರಂಭ ದಿಂದಲೂ ಇರುವ, ಆದರೆ ಬಹುತೇಕ ಜನರಿಗೆ ಗೊತ್ತಿರದ ಒಂದು ಪ್ರಮುಖ ಪ್ರಕ್ರಿಯೆ, ಸಾಮಾಜಿಕ ಲೆಕ್ಕ ಪರಿಶೋಧನೆ (ಸೋಷಿಯಲ್ ಆಡಿಟ್). ಸಮುದಾಯಗಳು ಸ್ವತಃ ಯೋಜನೆಯ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸುವ, ಸರಿತಪ್ಪುಗಳನ್ನು ಪಟ್ಟಿ ಮಾಡುವ ಪ್ರಕ್ರಿಯೆಯಿದು. ಇದರಿಂದಾಗಿ ಆಂಧ್ರಪ್ರದೇಶ, ತೆಲಂಗಾಣ, ಜಾರ್ಖಂಡ್ ಮುಂತಾದ ರಾಜ್ಯಗಳ ಹಲವೆಡೆ, ಕಾರ್ಮಿಕರು ತಮ್ಮ ಉದ್ಯೋಗದ ಹಕ್ಕುಗಳನ್ನು ಪಡೆದುಕೊಂಡು ಸ್ಥಳೀಯವಾಗಿ ಭ್ರಷ್ಟಾಚಾರ ತಡೆಗಟ್ಟುವಲ್ಲಿ ಯಶಸ್ವಿಯಾಗಿದ್ದಾರೆ.**
- ಸಾಮಾಜಿಕ ಲೆಕ್ಕ ಪರಿಶೋಧನೆಗಳ ಶಕ್ತಿಯ ಅರಿವಿದ್ದೂ ಹಲವು ರಾಜ್ಯಗಳು ಇದನ್ನು ನಾನಾ ಕಾರಣಗಳಿಂದ ಕಡೆಗಣಿಸಿವೆ. ತಳಹಂತದ ಕಾರ್ಮಿಕರ ಸಹಭಾಗಿತ್ವವಿಲ್ಲದೆ, ಡಿಜಿಟಲ್ ಪರಿಕರಗಳ ಮೂಲಕ ಯೋಜನೆಯ ಅನುಷ್ಠಾನವನ್ನು ನಿಯಂತ್ರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪ್ರಯತ್ನಿಸುತ್ತಿವೆ.
- 'ಪ್ಯಾಚಿಂಗ್ ಡೆವಲಪ್‌ಮೆಂಟ್' ಕೃತಿಯಲ್ಲಿ ಪ್ರೊ. ರಾಜೇಶ್ ವೀರರಾಘವನ್, ಆಂಧ್ರಪ್ರದೇಶ ಮತ್ತು ಬಿಹಾರದಲ್ಲಿ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನವನ್ನು ವಿಶ್ಲೇಷಿಸಿದ್ದಾರೆ. ಅವರು ಹೇಳುವಂತೆ, ಸಮುದಾಯಚಾಲಿತ ಹೊಣೆಗಾರಿಕೆ ಪ್ರಕ್ರಿಯೆಗಳು ಇಲ್ಲದಿದ್ದಲ್ಲಿ, ಅಧಿಕಾರಿ ಗಳು, ಸ್ಥಳೀಯ ರಾಜಕಾರಣಿಗಳು ಮತ್ತು ಪ್ರಬಲ ಜಾತಿಗಳ ಪಿತೂರಿಯಿಂದ ತಂತ್ರಜ್ಞಾನವು ಭ್ರಷ್ಟಾಚಾರಕ್ಕೆ ಕಡಿವಾಣ ಹಾಕುವ ಬದಲು, ಅದಕ್ಕೆ ಪೂರಕ ಸಾಧನವಾಗಿ ಬಳಕೆಯಾಗುತ್ತದೆ.
- ತಂತ್ರಜ್ಞಾನದ ದುರುಪಯೋಗದ ನಿದರ್ಶನ ಕರ್ನಾಟಕದಲ್ಲೂ ಸಿಗುತ್ತದೆ. ಉತ್ತರ ಕರ್ನಾಟಕದ ಒಂದು ಹಳ್ಳಿಯಲ್ಲಿ, ಉದ್ಯೋಗ ಖಾತರಿ ಯೋಜನೆಯ ಹತ್ತು 'ಮೇಟ್' ಗಳು (ಸ್ಥಳೀಯ ಕಾರ್ಮಿಕ ರಲ್ಲೇ ಒಬ್ಬರಾದ, ಕಾಮಗಾರಿ ಮಟ್ಟದಲ್ಲಿ ಹಾಜರಾತಿ ಮತ್ತಿತರ ಕೆಲಸಗಳನ್ನು ನಿರ್ವಹಿಸುವ ಮೇಲ್ವಿಚಾರಕರು) 200 ಕಾರ್ಮಿಕರ ಹಾಜರಾತಿ ಯನ್ನು 'ಎನ್‌ಎಂಎಂಎಸ್' ಆ್ಯಪ್ ಬಳಸಿ ನಿರ್ವಹಿಸುತ್ತಿದ್ದರು. ಇದ್ದಕ್ಕಿದ್ದಂತೆ ಅವರ ಆ್ಯಪ್ ಲಾಗಿನ್ ನಿರ್ಬಂಧಿಸಲಾಯಿತು.
- ಲಿಖಿತ ಹಾಜರಾತಿ ದಾಖಲೆಗಳನ್ನು ಬಳಸಿ ಗ್ರಾಮ ಪಂಚಾಯಿತಿ ಕೆಲಸ ಮುಂದುವರಿಸಿತು. ಆ್ಯಪ್ ಬಳಸದೇ ನಿಯಮ ಉಲ್ಲಂಘಿಸಿದ ಕಾರಣಕ್ಕೆ ತಾಲ್ಲೂಕು ಪಂಚಾಯಿತಿ ಅಧಿಕಾರಿಯು ಕಾಮಗಾರಿಗಳನ್ನು

Dr. Rajkumar IAS/KAS Academy


ನಿಲ್ಲಿಸಿದರು. ಸ್ಥಳೀಯ ವಾರ್ಡ್ ಸದಸ್ಯರೊಬ್ಬರು ಕೆಲಸದಲ್ಲಿ ಇತರ ಉಲ್ಲಂಘನೆಗಳೂ ನಡೆದಿವೆ ಎಂದು ವಾದಿಸಿದರು.

- ಈ ಆಪಾದನೆಗಳನ್ನು ವಿರೋಧಿಸಿದ ಮೇಟ್‌ಗಳಿಗೆ ಬೆದರಿಕೆ ಹಾಕಲಾಯಿತು. ಕೆಲಸವನ್ನು ಪುನರಾರಂಭಿಸಲು ಮೇಟ್‌ಗಳು ಅಧಿಕಾರಿಯನ್ನು ಕೋರಿದಾಗ, ಆ್ಯಪ್ ಬಳಕೆಯನ್ನು ಮತ್ತೆ ಸ್ಥಾಪಿಸಲು ಪ್ರತಿ ಮೇಟ್‌ಗೆ ₹30,000 ಲಂಚ ಕೇಳಿದರು. ಲಂಚ ಕೊಡಲು ನಿರಾಕರಿಸಿದ ಮೇಟ್‌ಗಳ ಲಾಗಿನ್‌ಗಳು ನಿರ್ಬಂಧಕ್ಕೊಳಗಾದವು. ಕಾರ್ಮಿಕರಿಗೆ ಸಮಯಕ್ಕೆ ಸರಿಯಾಗಿ ಕೆಲಸ ಮತ್ತು ವೇತನ ನೀಡಲು ಸಹಕಾರಿ ಆಗಬೇಕಾಗಿದ್ದ ತಂತ್ರಾಂಶವು, ಅದಕ್ಕೆ ವಿರುದ್ಧವಾಗಿ ಕಾರ್ಮಿಕರಿಗೆ ತೊಡರಾಗಿ ಬಳಕೆಯಾಯಿತು.
- **ಎಂಐಎಸ್ ಆಧಾರಿತ ಪಾವತಿಗಳು, ನೇರ ನಗದು ವರ್ಗಾವಣೆ, ಜಿಯೋ-ಟ್ಯಾಗಿಂಗ್, ಬಯೊಮೆಟ್ರಿಕ್ಸ್, ಎನ್‌ಎಂಎಂಎಸ್ ಹಾಜರಾತಿ ಅಪ್ಲಿಕೇಷನ್ ಬಳಸಿ ಅನುಷ್ಠಾನದಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆ ಯನ್ನು ಸಾಧಿಸುವ ಗುರಿ ಕೇಂದ್ರ ಸರ್ಕಾರದ್ದು. ಇಷ್ಟೆಲ್ಲಾ ಇದ್ದರೂ ಆಡಳಿತ ವ್ಯವಸ್ಥೆಯ ಮೇಲೆ ತಂತ್ರಜ್ಞಾನದ ಪರಿಣಾಮ ಅಷ್ಟಕ್ಕಷ್ಟೆ. ಕರ್ನಾಟಕದಲ್ಲಿ ನಕಲಿ ಹಾಜರಾತಿಗಳು ಮುಂದುವರಿದಿವೆ.**
- ಯಂತ್ರಗಳ ಬಳಕೆಯನ್ನು ಮಾನವ ಶ್ರಮದ ಲೆಕ್ಕದಲ್ಲಿ ತೋರಿಸಲಾಗುತ್ತಿದೆ; ಕಾರ್ಮಿಕರಿಗೆ ಕಡಿಮೆ ಕೆಲಸ, ಕಡಿಮೆ ವೇತನ ನೀಡಲಾಗುತ್ತಿದೆ.
- ತಕ್ಷಣದ ಜೀವನೋಪಾಯಕ್ಕಾಗಿ ಕಾರ್ಮಿಕರು ಇಂತಹ ವ್ಯವಸ್ಥೆಗೆ ಪರೋಕ್ಷವಾಗಿ ಒಪ್ಪಿಯೂ ಇದ್ದಾರೆ.
- **ಲಿಬ್‌ಟೆಕ್ ಇಂಡಿಯಾ ಸಂಸ್ಥೆಯ 2023ರ ಅಧ್ಯಯನದ ಪ್ರಕಾರ, ಉದ್ಯೋಗ ಖಾತರಿ ಯೋಜನೆ ಯಲ್ಲಿ ಕರ್ನಾಟಕದ ಶೇ 34ರಷ್ಟು ಕಾರ್ಮಿಕರಿಗೆ ವೇತನದಲ್ಲಿ 60 ದಿನಗಳಿಗಿಂತ ಹೆಚ್ಚು ವಿಳಂಬವಾಗಿತ್ತು.**
- ಕಾರ್ಮಿಕರು ಯೋಜನೆಯ ದಸ್ತಾವೇಜುಗಳನ್ನು ಪರಿಶೀಲಿಸಿ, ಅಧಿಕಾರಿಗಳನ್ನು ತಮ್ಮ ಜವಾಬ್ದಾರಿಗಳಿಗೆ ಹೊಣೆಗಾರರನ್ನಾಗಿ ಮಾಡಲು ಸಾಮಾಜಿಕ ಲೆಕ್ಕಪರಿಶೋಧನೆ ಒಂದು ಸಾರ್ವಜನಿಕ ವೇದಿಕೆಯನ್ನು ಕಟ್ಟಿಕೊಡುತ್ತದೆ. ಇದರಿಂದಾಗಿ ಹಲವು ರಾಜ್ಯಗಳಲ್ಲಿ ಬಡಕಾರ್ಮಿಕರು ಯೋಜನೆಯ ಪ್ರಮುಖ ಭಾಗೀದಾರರಾಗಿದ್ದಾರೆ. ಅವಿಭಜಿತ ಆಂಧ್ರಪ್ರದೇಶದ ಸಾಮಾಜಿಕ ಲೆಕ್ಕ ಪರಿಶೋಧನಾ ಪ್ರಕ್ರಿಯೆಗಳು ದೇಶಕ್ಕೇ ಮಾದರಿ ಎನ್ನಲಾಗಿದೆ.
- ರಾಜ್ಯದ ಹಳ್ಳಿಯೊಂದರಲ್ಲಿ, ಸ್ಥಳೀಯ ಎನ್‌ಜಿಒ ಸಹಯೋಗದಲ್ಲಿ ನಡೆದ ತಳಮಟ್ಟದ ಲೆಕ್ಕ ಪರಿಶೋಧನೆಯು ಕಾರ್ಮಿಕರಿಗೆ, ತಮ್ಮ ಹಳ್ಳಿಯಲ್ಲಿ ನಡೆದ ಅಕ್ರಮಗಳನ್ನು ಹುಡುಕಿ ದಾಖಲಿಸಲು ಸಹಕರಿಸಿತು. ಇದರಿಂದ ವಿಳಂಬವಾಗಿದ್ದ ₹10 ಲಕ್ಷ ವೇತನವನ್ನು ವಸೂಲಿ ಮಾಡಲಾಯಿತು ಮತ್ತು ಅಕ್ರಮ ಯಂತ್ರಗಳ ಬಳಕೆ ನಿಷೇಧಿಸಲಾಯಿತು. ನಿಧಾನವಾದರೂ, ಸಾಮಾಜಿಕ ಲೆಕ್ಕ ಪರಿಶೋಧನೆ ಗಳು ಪ್ರಜಾಪ್ರಭುತ್ವದ ಸ್ಥಳೀಯ ಪ್ರಕ್ರಿಯೆಗಳನ್ನು ಬಲಿಷ್ಠಗೊಳಿಸಿ ಉದ್ಯೋಗ ಖಾತರಿಯಂತಹ ಯೋಜನೆಗಳನ್ನು ಪರಿಣಾಮಕಾರಿ ಆಗಿಸುತ್ತವೆ.
- ಸಾಮಾಜಿಕ ಲೆಕ್ಕ ಪರಿಶೋಧನೆಗೆ ಮಿತಿಗಳು ಇಲ್ಲವೆಂದಲ್ಲ. ಇವು ಸ್ಥಳೀಯ ಪ್ರಭಾವಿಗಳಿಂದಾಗಿ ಸಾಂಕೇತಿಕವಾಗಿ ನಡೆಯುತ್ತವೆ. ದೊಡ್ಡ ಅಕ್ರಮಗಳನ್ನು ಬದಿಗಿರಿಸಿ ಸಣ್ಣ ತಪ್ಪುಗಳನ್ನು ಶೋಧಿಸಿ ಜನರನ್ನು ದಾರಿ ತಪ್ಪಿಸುವ ಕೆಲಸವೂ ನಡೆಯುತ್ತದೆ. ಕಾರ್ಮಿಕರು ಸಭೆಗಳಲ್ಲಿ ಮಾತನಾಡಲು ಹಿಂಜರಿಯುವುದರಿಂದ, ಬಹುಪಾಲು ಸಾಮಾಜಿಕ ಲೆಕ್ಕ ಪರಿಶೋಧನೆಗಳು ಕಾರ್ಮಿಕರ ಉದ್ಯೋಗದ ಹಕ್ಕನ್ನು ಖಾತರಿಪಡಿಸುವ ವೇದಿಕೆಗಳಾಗದೇ ಉಳಿದಿವೆ. ಆದರೂ, ನಾಗರಿಕ ಸಮಾಜದ ಬೆಂಬಲ ಸಿಕ್ಕಾಗ, ಸಾಮಾಜಿಕ ಲೆಕ್ಕ ಪರಿಶೋಧನೆಗಳು ವ್ಯವಸ್ಥೆಯನ್ನು ಪರಿವರ್ತಿಸಬಹುದು.
- **ಇತರ ರಾಜ್ಯಗಳಿಗೆ ಹೋಲಿಸಿದರೆ, ಕರ್ನಾಟಕದ ಗ್ರಾಮ ಪಂಚಾಯಿತಿಗಳು ಹೆಚ್ಚು ಸಂಪನ್ಮೂಲಗಳನ್ನು ಹೊಂದಿವೆ, ಹೆಚ್ಚು ಸೇವೆಗಳನ್ನು ಒದಗಿಸುತ್ತವೆ ಮತ್ತು ತಂತ್ರಾಂಶಗಳ ಮೇಲೆ ಹೆಚ್ಚು ಅವಲಂಬಿತವಾಗಿವೆ. ಆರ್ಥಿಕ ಸಂಪನ್ಮೂಲಗಳು ಹೆಚ್ಚಿದ್ದು, ಸಾಮಾಜಿಕ- ಆರ್ಥಿಕ ಅಸಮಾನತೆಗಳೂ ಇದ್ದಲ್ಲಿ, ಸಂಪನ್ಮೂಲಗಳು ಮತ್ತು ಯೋಜನೆಗಳ ಪ್ರಯೋಜನ ಪಡೆಯುವವರಲ್ಲಿ ಅಸಮತೋಲನದ ಸಂಭವವೂ ಹೆಚ್ಚು.**

Dr. Rajkumar IAS/KAS Academy

- ಗ್ರಾಮ ಪಂಚಾಯಿತಿಗಳ ಕಾರ್ಯಕ್ಷಮತೆ ಮೇಲೆ ಕಣ್ಣಿಡುವ ತಾಂತ್ರಿಕ ಮಾನಿಟರಿಂಗ್ ವ್ಯವಸ್ಥೆಯ ಜೊತೆ ಜೊತೆಗೆ, ಸ್ಥಳೀಯ ಸಮುದಾಯಗಳ ಸಹಭಾಗಿತ್ವದಲ್ಲಿ ಗ್ರಾಮ ಪಂಚಾಯಿತಿಗಳ ಕೆಲಸ ಕಾರ್ಯಕ್ರಮಗಳನ್ನು ಪರಿಶೀಲಿಸುವ ವ್ಯವಸ್ಥೆಯೂ ಗಟ್ಟಿಯಾಗಿದ್ದರೆ, ಸಮತೋಲನವನ್ನು ಕಾಪಾಡುವುದರ ಜೊತೆಗೆ, ಮೇಲ್ವಿಚಾರಣೆಯೂ ಪರಿಣಾಮಕಾರಿ ಆಗಬಲ್ಲದು. ರಾಯಚೂರಿನ ಹಗರಣದಿಂದ ಹಿಡಿದು ದುಡ್ಡಿಗಾಗಿ ಆ್ಯಪ್‌ಗಳ ನಿರ್ಬಂಧದವರೆಗೆ, ಉದ್ಯೋಗ ಖಾತರಿ ಯೋಜನೆಯ ವೈಫಲ್ಯಗಳು, ಡಿಜಿಟಲ್ ಪರಿಹಾರಗಳ ಮಿತಿಗಳನ್ನು ಬಹಿರಂಗಪಡಿಸುತ್ತವೆ.
- ಜನ ಸಹಭಾಗಿತ್ವದ ವ್ಯವಸ್ಥೆಗಳನ್ನು ಗಟ್ಟಿ ಗೊಳಿಸದೇ ಹೋದರೆ, ಕಲ್ಯಾಣ ಯೋಜನೆಗಳ ಕೋಟಿಗಟ್ಟಲೆ ವೆಚ್ಚಗಳು ಆರ್ಥಿಕ ಮತ್ತು ಸಾಮಾಜಿಕ ನ್ಯಾಯವನ್ನು ಜನತೆಗೆ ನೀಡಲು ಸಾಧ್ಯ ಆಗದಿರಬಹುದು. ಇಂದು ಹಲವು ಸರ್ಕಾರಿ ಯೋಜನೆಗಳಲ್ಲಿ ಅಧಿಕಾರಿಗಳ ಕಾರ್ಯಕ್ಷಮತೆ ಯನ್ನು ಡಿಜಿಟಲ್ ಡ್ಯಾಶ್-ಬೋರ್ಡ್ ಗಳಲ್ಲಿ ಬಿಂಬಿಸಲಾಗುತ್ತಿದೆ. ಪರ್ಯಾಯವಾಗಿ, ಅಧಿಕಾರಿಗಳು ತಾವು ಸೇವೆ ಸಲ್ಲಿಸುತ್ತಿರುವ ಸಮುದಾಯಗಳಿಗೆ ಉತ್ತರ ಹೇಳಬೇಕಾದ ಹೊಸ ಕರ್ನಾಟಕವನ್ನು ನಾವು ಗಟ್ಟಿಗೊಳಿಸಬೇಕಾಗಿದೆ. ಇದನ್ನು ಸಾಧಿಸಲು ತಮ್ಮ ಹಕ್ಕುಗಳನ್ನು ಆಗ್ರಹಿಸುವ ಜಾಗೃತ ಮತ್ತು ಸಂಘಟಿತ ಕಾರ್ಮಿಕರು ಬೇಕಾಗಿದ್ದಾರೆ.
- ತಂತ್ರಜ್ಞಾನವು ಅವರ ಶಕ್ತಿಯನ್ನು ವರ್ಧಿಸುವ ಕೆಲಸ ಮಾಡಬೇಕಾಗಿದೆ. ಸಾಮಾಜಿಕ ಲೆಕ್ಕ ಪರಿಶೋಧನೆಗಳನ್ನು ಪ್ರಜಾಸತ್ತಾತ್ಮಕವಾಗಿ ಬಲಿಷ್ಠಗೊಳಿಸಿ ಉದ್ಯೋಗ ಖಾತರಿಯ ಸಮಾನತೆಯ ಆಶಯವನ್ನು ನಿಜವಾಗಿಸಬೇಕಾಗಿದೆ. ಇವೆಲ್ಲ ಸಾಧ್ಯವಾದಾಗ ಮಾತ್ರ, ಮೈಮುರಿದು ದುಡಿಯುವ ಕಾರ್ಮಿಕರಿಗೆ ನ್ಯಾಯಯುತ ವೇತನ ಮತ್ತು ಘನತೆಯ ಜೀವನದ ಕನಸು ನನಸಾದೀತು. ಇವರ ಕನಸುಗಳಸಾಕಾರಕ್ಕೆ ಕರ್ನಾಟಕ ತಯಾರಾಗಿದೆಯೇ?

IAS/KAS Academy



## ❖ ಎಸ್‌ಟಿ ಸ್ಥಾನಮಾನ ಪ್ರಕ್ರಿಯೆ ಹೇಗೆ?: ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡ ಪಟ್ಟಿಗೆ ಸೇರಿಸುವ ಪ್ರಸ್ತಾವ

# ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡ ಪಟ್ಟಿಗೆ ಸೇರಿಸುವ ಪ್ರಸ್ತಾವ

# ಎಸ್‌ಟಿ ಸ್ಥಾನಮಾನ ಪ್ರಕ್ರಿಯೆ ಹೇಗೆ?

**ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು 2023ರಲ್ಲಿ ಕೇಂದ್ರಕ್ಕೆ ಶಿಫಾರಸು ಮಾಡಿದ್ದ ರಾಜ್ಯ ಸರ್ಕಾರವು, ಈ ಸಂಬಂಧ ಮತ್ತೊಮ್ಮೆ ಕೇಂದ್ರಕ್ಕೆ ಪ್ರಸ್ತಾವ ಸಲ್ಲಿಸಲು ಚಿಂತನೆ ನಡೆಸುತ್ತಿದೆ. ಬೀದರ್, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಕುರುಬರು ಗೊಂಡ ಬುಡಕಟ್ಟಿನೊಂದಿಗೆ ಹೊಂದಿರುವ ಸಾಮ್ಯತೆಯನ್ನು ಗುರುತಿಸುವ, ಅದರ ಆಧಾರದಲ್ಲಿ ಕುರುಬರನ್ನು ಎಸ್‌ಟಿ ಪಟ್ಟಿಗೆ ಸೇರಿಸುವ ಬಗ್ಗೆಯೂ ಸರ್ಕಾರ ಪ್ರಯತ್ನ ನಡೆಸುತ್ತಿದೆ. ಯಾವುದೇ ಜಾತಿಯನ್ನು ಎಸ್‌ಟಿ ಪಟ್ಟಿಗೆ ಸೇರಿಸಲು ಇಲ್ಲವೇ ಪಟ್ಟಿಯಿಂದ ತೆಗೆಯಲು ದೀರ್ಘ ಪ್ರಕ್ರಿಯೆಯನ್ನು ಅನುಸರಿಸಬೇಕಾಗುತ್ತದೆ; ರಾಷ್ಟ್ರಪತಿಯವರ 1950ರ ಸಾಂವಿಧಾನಿಕ ಆದೇಶವನ್ನು ತಿದ್ದುಪಡಿ ಮಾಡಬೇಕಾಗುತ್ತದೆ. ಈ ಪ್ರಕ್ರಿಯೆಯಲ್ಲಿ ಕೇಂದ್ರ ಸರ್ಕಾರದ ಪಾತ್ರವು ನಿರ್ಣಾಯಕವಾಗಿರುತ್ತದೆ**

ಪ್ರಜಾವಾಣಿ ವಾರ್ತೆ

**• ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿರುವ ಸಮುದಾಯಗಳ ಸಾಮಾಜಿಕ ನೆಲೆ ಏನು?**

ಸಂವಿಧಾನದ 342ನೇ ವಿಧಿಯ ಅನ್ವಯ ಪರಿಶಿಷ್ಟ ಪಂಗಡವನ್ನು ರೂಪಿಸಲಾಗಿದ್ದು, ಪ್ರಸ್ತುತ ರಾಜ್ಯದ ಈ ಪಟ್ಟಿಯಲ್ಲಿ 50 ಜಾತಿಗಳು ಸ್ಥಾನ ಪಡೆದಿವೆ. ಶ್ರೇಣೀಕೃತ ಜಾತಿ ವ್ಯವಸ್ಥೆಯಲ್ಲಿ ಪರಿಶಿಷ್ಟ ಜಾತಿಗಳಂತೆಯೇ (ಎಸ್‌ಸಿ) ಪರಿಶಿಷ್ಟ ಪಂಗಡಗಳೂ (ಎಸ್‌ಟಿ) ಸಾಮಾಜಿಕವಾಗಿ, ಆರ್ಥಿಕವಾಗಿ ಸವಲತ್ತುಗಳಿಂದ ವಂಚಿತವಾಗಿದ್ದು, ಆ ಸಮುದಾಯಗಳನ್ನು ಸಶಕ್ತಗೊಳಿಸುವ ದಿಸೆಯಲ್ಲಿ ಹಲವು ಕ್ರಮಗಳನ್ನು ಅನುಸರಿಸಲಾಗುತ್ತಿದೆ. ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಎಸ್‌ಸಿಗಳಂತೆ ಎಸ್‌ಟಿ ಸಮುದಾಯಗಳಿಗೂ ಮೀಸಲಾತಿ ಸೌಲಭ್ಯ ಕಲ್ಪಿಸಿರುವುದು ಅದರಲ್ಲಿ ಪ್ರಮುಖವಾದುದು.

**• ಸಂವಿಧಾನ ಏನು ಹೇಳುತ್ತದೆ?**

ಸಂವಿಧಾನದ 342ನೇ ವಿಧಿಯು ಯಾವುದೇ ರಾಜ್ಯ ಅಥವಾ ಕೇಂದ್ರಾಡಳಿತ ಪ್ರದೇಶದಲ್ಲಿ ಅಲ್ಲಿನ ರಾಜ್ಯಪಾಲರ ಸಲಹೆ ಪಡೆದು ನಿರ್ದಿಷ್ಟ ಸಮುದಾಯ ಅಥವಾ ಜಾತಿಯನ್ನು ಪರಿಶಿಷ್ಟ ಪಂಗಡ ಎಂದು ಅಧಿಸೂಚನೆ ಹೊರಡಿಸುವ ಅಧಿಕಾರವನ್ನು ರಾಷ್ಟ್ರಪತಿಯವರಿಗೆ ನೀಡುತ್ತದೆ.

ಸಂವಿಧಾನದ 366ನೇ ವಿಧಿಯ 25ನೇ ಕಲಂ ಪರಿಶಿಷ್ಟ ಪಂಗಡಕ್ಕೆ ಸೇರಿದವರು ಯಾರು ಎಂಬುದನ್ನು ವಿವರಿಸುವಾಗ, ಸಂವಿಧಾನದ 342ನೇ ವಿಧಿಯನ್ನೇ ಉಲ್ಲೇಖಿಸುತ್ತದೆ. ಎಸ್‌ಟಿ ಎಂದು ಗುರುತಿಸಲಾದ ಎಲ್ಲ ಸಮುದಾಯಗಳನ್ನು 1950ರ ರಾಷ್ಟ್ರಪತಿಯವರ (ಪರಿಶಿಷ್ಟ ಪಂಗಡಗಳು) ಆದೇಶದಲ್ಲಿ ಪಟ್ಟಿ ಮಾಡಲಾಗಿದೆ. ಈ ಸಮುದಾಯಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿದವು ಎಂದು ಸಂವಿಧಾನದ ಪ್ರಕಾರವೇ ಪರಿಗಣಿಸಲಾಗುತ್ತದೆ.

ಸಂಸತ್ತು, ಹೊಸ ಕಾನೂನು ರೂಪಿಸುವುದರ ಮೂಲಕ ಪರಿಶಿಷ್ಟ ವರ್ಗಗಳ ವ್ಯಾಪ್ತಿಗೆ ಹೊಸ ಜಾತಿಯನ್ನು ಸೇರಿಸಬಹುದು ಇಲ್ಲವೇ, ಜಾತಿ ಹೆಸರನ್ನು ತೆಗೆದು ಹಾಕಬಹುದು.

**• ಎಸ್‌ಟಿ ಪಟ್ಟಿ ಸೇರ್ಪಡೆಗೆ ಮಾನದಂಡವೇನು?**

ದೇಶದಲ್ಲಿ 1931ರಲ್ಲಿ ನಡೆದಿದ್ದ ಕೊನೆಯ ಜಾತಿಗಣತಿಯಲ್ಲಿ 'ಆದಿವಾಸಿ ಬುಡಕಟ್ಟು' (ಪ್ರಿಮಿಟಿವ್ ಟ್ರೈಬ್ಸ್) ಸಮುದಾಯಗಳನ್ನು ಪಟ್ಟಿ ಮಾಡಲಾಗಿತ್ತು. ನಂತರ 1935ರ ಭಾರತ ಸರ್ಕಾರ ಕಾಯ್ದೆಯಲ್ಲಿ 'ಹಿಂದುಳಿದ ಬುಡಕಟ್ಟು' ಸಮುದಾಯಗಳ ಪಟ್ಟಿಯನ್ನು ರೂಪಿಸಿ, ಎಸ್‌ಟಿ ಜಾತಿಗಳ ಪಟ್ಟಿಗೆ ಸೇರ್ಪಡೆಗೊಳಿಸಲಾಗಿತ್ತು. ದೇಶದ ಸಂವಿಧಾನವು ನಿರ್ದಿಷ್ಟ ಸಮುದಾಯವನ್ನು ಎಸ್‌ಟಿ ಎಂದು ಗುರುತಿಸುವ ಮಾನದಂಡವನ್ನು ವ್ಯಾಖ್ಯಾನಿಸದೇ ಇರುವುದರಿಂದ 1950ರ ರಾಷ್ಟ್ರಪತಿಯವರ ಸಾಂವಿಧಾನಿಕ ಆದೇಶವನ್ನೇ ಪರಿಗಣಿಸಲಾಗುತ್ತದೆ.

1950ರ ಆದೇಶದಲ್ಲಿ ಪರಿಶಿಷ್ಟ ಪಂಗಡಗಳ ಅಡಿಯಲ್ಲಿ ಬರುವ ಜಾತಿಗಳನ್ನು ಪಟ್ಟಿ ಮಾಡುವಾಗ ಸಮುದಾಯಗಳ ಆದಿಮ ಸ್ವರೂಪ ಮತ್ತು ತೀರಾ ಹಿಂದುಳಿದಿರುವಿಕೆ– ಈ ಎರಡು ಅಂಶಗಳನ್ನು ಪ್ರಮುಖವಾಗಿ ಪರಿಗಣಿಸಲಾಗಿತ್ತು. ಪರಿಶಿಷ್ಟ ಜಾತಿಗಳಂತೆ ಪರಿಶಿಷ್ಟ ವರ್ಗಗಳ ಅಡಿಯಲ್ಲಿ ಬರುವ ಸಮುದಾಯಗಳು ಧರ್ಮ ಆಧಾರಿತವಲ್ಲ.

**• ಪರಿಶಿಷ್ಟ ಪಂಗಡದ ಪಟ್ಟಿ ಸೇರ್ಪಡೆಯ ಮಾನದಂಡ ಬದಲಾಗಿರುವ ಇತಿಹಾಸವಿದೆಯೇ?**

1950 ಮತ್ತು 1960ರ ದಶಕಗಳಲ್ಲಿ ಭಾಷೆಗಳ ಆಧಾರದಲ್ಲಿ ಪ್ರತ್ಯೇಕ ರಾಜ್ಯಗಳನ್ನು ರೂಪುಗೊಳಿಸಲಾಯಿತು. ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಹಲವು ರೀತಿಯ ವ್ಯತ್ಯಾಸಗಳು, ಸಮಸ್ಯೆಗಳು ಕಾಣಿಸಿಕೊಂಡವು. ಉದಾಹರಣೆಗೆ, ಬ್ರಿಟಿಷರ ಕಾಲದಲ್ಲಿ ಅಪರಾಧ ಬುಡಕಟ್ಟು ಎಂದು ಪರಿಗಣಿತವಾಗಿದ್ದ ಪಾರ್ಧಿ ಸಮುದಾಯವನ್ನು ಮಹಾರಾಷ್ಟ್ರ ಮತ್ತು ಮಧ್ಯಪ್ರದೇಶದಲ್ಲಿ ಎಸ್‌ಟಿ ಪಟ್ಟಿಗೆ ಸೇರಿಸಲಾಗಿತ್ತು. ಆದರೆ, ಅದೇ ಸಮುದಾಯವನ್ನು ರಾಜಸ್ಥಾನದಲ್ಲಿ ಎಸ್‌ಸಿ ಪಟ್ಟಿಗೆ ಸೇರಿಸಲಾಗಿತ್ತು. ಈ ದಿಸೆಯಲ್ಲಿ ಕೇಂದ್ರ ಸರ್ಕಾರವು 1965ರಲ್ಲಿ ಆಗ ಕಾನೂನು ಕಾರ್ಯದರ್ಶಿಯಾಗಿದ್ದ ಪಿ.ಬಿ.ಲೋಕೂರ್ ಅವರ ನೇತೃತ್ವದಲ್ಲಿ ಸಮಿತಿ ರಚಿಸಿ, ಪರಿಶಿಷ್ಟ ಪಂಗಡ ಎನ್ನುವುದನ್ನು ಸೂಕ್ತವಾಗಿ ವ್ಯಾಖ್ಯಾನಿಸಲು, ಎಸ್‌ಟಿ ಪಟ್ಟಿಯಲ್ಲಿ ಜಾತಿಗಳನ್ನು ಸೇರಿಸಲು ಮಾನದಂಡಗಳನ್ನು ನಿಗದಿಪಡಿಸುವಂತೆ ಸೂಚಿಸಿತು.

**• ಎಸ್‌ಟಿ ಪಟ್ಟಿಯಲ್ಲಿ ಬದಲಾವಣೆ ಮಾಡಲು ಯಾವ ಪ್ರಕ್ರಿಯೆಯನ್ನು ಅನುಸರಿಸಬೇಕು?**

ಪರಿಶಿಷ್ಟ ಪಂಗಡಕ್ಕೆ ಸಂಬಂಧಿಸಿದ ರಾಷ್ಟ್ರಪತಿಯವರ 1950ರ ಆದೇಶವನ್ನು ಬದಲಾಯಿಸಿ, ನಿರ್ದಿಷ್ಟ ಜಾತಿಯನ್ನು ಪಟ್ಟಿಗೆ ಸೇರಿಸುವಂತೆ ಅಥವಾ ನಿರ್ದಿಷ್ಟ ಜಾತಿಯನ್ನು ಪಟ್ಟಿಯಿಂದ ಕೈಬಿಡುವಂತೆ ಪ್ರಸ್ತಾವವನ್ನು ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವಾಲಯಕ್ಕೆ ಕಳುಹಿಸಲಾಗುತ್ತದೆ. ನಂತರ, ಆ ಪ್ರಸ್ತಾವವನ್ನು ಪರಿಶಿಷ್ಟ ಪಂಗಡಗಳ ರಾಷ್ಟ್ರೀಯ ಆಯೋಗ ಮತ್ತು ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾಕ್ಕೆ (ಆರ್‌ಜಿಐ) ಕಳುಹಿಸಿ, ಅವರ ಅಭಿಪ್ರಾಯ ಮತ್ತು ಸಲಹೆ ಕೇಳಲಾಗುತ್ತದೆ. ಆರ್‌ಜಿಐನವರು ಆಂಥ್ರೊಪೊಲಾಜಿಕಲ್ ಸರ್ವೆ ಆಫ್ ಇಂಡಿಯಾ ಸೇರಿದಂತೆ ಹಲವು ಸಂಸ್ಥೆಗಳ, ತಜ್ಞರ ಅಭಿಪ್ರಾಯ ಪಡೆಯುತ್ತಾರೆ; ಪ್ರಸ್ತಾವವು ಲೋಕೂರ್ ಸಮಿತಿ ನಿಗದಿಪಡಿಸಿರುವ ಮಾನದಂಡಗಳಿಗೆ ಅನುಗುಣವಾಗಿದೆಯೇ ಎನ್ನುವುದನ್ನು ಪರಿಶೀಲಿಸುತ್ತಾರೆ.

**• ಎಸ್‌ಟಿ ಪಟ್ಟಿ ಬದಲಾವಣೆ ಮಾಡುವ ದಿಸೆಯಲ್ಲಿ ಲೋಕಸಭೆಯಲ್ಲಿ ಯಾವ ಪ್ರಕ್ರಿಯೆ ನಡೆಯುತ್ತದೆ?**

ಆರ್‌ಜಿಐ ಮತ್ತು ಪರಿಶಿಷ್ಟ ಪಂಗಡಗಳ ರಾಷ್ಟ್ರೀಯ ಆಯೋಗದ ಸಲಹೆಗಳ ಆಧಾರದಲ್ಲಿ ಪರಿಶಿಷ್ಟ ಪಂಗಡಗಳ ಪಟ್ಟಿಯನ್ನು ಬದಲಾಯಿಸುವ ದಿಸೆಯಲ್ಲಿ ತಿದ್ದುಪಡಿ ಮಸೂದೆಯನ್ನು ಸಂಸತ್‌ನಲ್ಲಿ ಮಂಡಿಸುತ್ತದೆ. ಆ ಮಸೂದೆಯು ವಿಶೇಷ ಬಹುಮತದೊಂದಿಗೆ ಸಂಸತ್‌ನ ಉಭಯ ಸದನಗಳಲ್ಲಿ ಅಂಗೀಕಾರವಾಗಬೇಕು; ಮೂರನೇ ಎರಡರಷ್ಟು ಸದಸ್ಯರು ಸದನದಲ್ಲಿ ಹಾಜರಿರಬೇಕು ಮತ್ತು ಮತ ಚಲಾಯಿಸಬೇಕು. ಆ ಸಂಖ್ಯೆಯು ಸಂಸತ್‌ನ ಒಟ್ಟು ಬಲದಲ್ಲಿ ಶೇ 50ಕ್ಕಿಂತ ಹೆಚ್ಚಿರಬೇಕು.

**ಆಧಾರ:** ಲೋಕೂರ್ ಸಮಿತಿಯ ವರದಿ, ಮಾಧ್ಯಮ ವರದಿಗಳು



## ಕುರುಬ ಸಮುದಾಯದ ಬೇಡಿಕೆ

ಕುರುಬರನ್ನು ಎಸ್‌ಟಿ ಪಟ್ಟಿಗೆ ಸೇರಿಸಬೇಕು ಎನ್ನುವ ಒತ್ತಾಯ ಹಿಂದಿನಿಂದಲೂ ಕೇಳಿಬರುತ್ತಿದೆ. ಪ್ರಸ್ತುತ ಕುರುಬ ಸಮುದಾಯವು ಹಿಂದುಳಿದ 'ಎ' ಪಟ್ಟಿಯಲ್ಲಿದ್ದು, ಅದೇ ಪಟ್ಟಿಯಲ್ಲಿರುವ ಇತರೆ 102 ಜಾತಿಗಳೊಂದಿಗೆ ಶೇ 15ರ ಮೀಸಲಾತಿಯನ್ನು ಹಂಚಿಕೊಳ್ಳುತ್ತಿದೆ. ಕುರುಬ ಸಮುದಾಯವನ್ನು ಎಸ್‌ಟಿ ಪಟ್ಟಿಗೆ ಸೇರಿಸುವಂತೆ 2023ರಲ್ಲೇ ರಾಜ್ಯ ಸರ್ಕಾರವು ಕೇಂದ್ರಕ್ಕೆ ಶಿಫಾರಸು ಮಾಡಿತ್ತು. ಈ ಸಂಬಂಧ ಮೈಸೂರಿನ ಬುಡಕಟ್ಟು ಸಂಶೋಧನಾ ಸಂಸ್ಥೆ ನಡೆಸಿದ ಕುಲಶಾಸ್ತ್ರೀಯ ಅಧ್ಯಯನದ ವರದಿಯನ್ನೂ ಲಗತ್ತಿಸಲಾಗಿತ್ತು. ಆದರೆ, ಪ್ರಸ್ತಾವವನ್ನು ಕೇಂದ್ರವು ವಾಪಸ್ ಕಳುಹಿಸಿತ್ತು.

ಕುರುಬರು, ಭಾರತದ ಮೂಲನಿವಾಸಿಗಳಾಗಿದ್ದು, ಸಮುದಾಯವನ್ನು 1868 ಮತ್ತು 1901ರ ಜನಗಣತಿಯ ಸಂದರ್ಭದಲ್ಲಿ ಪರಿಶಿಷ್ಟ ಪಂಗಡ ಎಂದೇ ಗುರುತಿಸಲಾಗಿತ್ತು. ಸ್ವಾತಂತ್ರ್ಯಾನಂತರ ಪಟ್ಟಿಯಿಂದ ಕೈಬಿಡಲಾಗಿತ್ತು. ದೇವರಾಜ ಅರಸರು ಕಾಡು ಕುರುಬ ಮತ್ತು ಜೇನು ಕುರುಬರನ್ನು ಎಸ್‌ಟಿ ಪಟ್ಟಿಗೆ ಸೇರಿಸಿದರು. ಆಂಧ್ರಪ್ರದೇಶ ಮತ್ತು ತಮಿಳುನಾಡಿನಲ್ಲಿ ಕುರುಬರನ್ನು ಎಸ್‌ಟಿ ಎಂದು ಪರಿಗಣಿಸಲಾಗುತ್ತಿದೆ ಎನ್ನುವುದು ಸಮುದಾಯದ ಮುಖಂಡರ ವಾದ. ಆದರೆ, ಕುರುಬ ಸಮುದಾಯವನ್ನು ಎಸ್‌ಟಿ ಪಟ್ಟಿಗೆ ಸೇರಿಸುವುದಕ್ಕೆ ವಾಲ್ಮೀಕಿ ಮಹಾಸಭಾ ಸೇರಿದಂತೆ ಹಲವು ಸಂಘಟನೆಗಳು, ಸಮುದಾಯಗಳು ವಿರೋಧ ವ್ಯಕ್ತಪಡಿಸಿವೆ.

## ಲೋಕೂರ್ ಸಮಿತಿಯ ವರದಿಯಲ್ಲೇನಿತ್ತು?

ಪರಿಶಿಷ್ಟ ಪಂಗಡಗಳ ವ್ಯಾಪ್ತಿಗೆ ಬರುವ ಸಮುದಾಯಗಳ ಪಟ್ಟಿಯನ್ನು ಪರಿಷ್ಕರಿಸುವುದಕ್ಕಾಗಿ ಸಮಿತಿಯು ಆದಿವಾಸಿಗಳ ಗುಣಲಕ್ಷಣಗಳನ್ನು ಹೊಂದಿರುವುದು, ವಿಭಿನ್ನ ಸಂಸ್ಕೃತಿ, ಭೌಗೋಳಿಕವಾಗಿ ಪ್ರತ್ಯೇಕವಾಗಿ ವಾಸ ಇರುವುದು, ಇತರ ಸಮುದಾಯಗಳೊಂದಿಗೆ ಸಂಪರ್ಕ ಸಾಧಿಸಲು ಮತ್ತು ಬೆರೆಯಲು ಸಂಕೋಚ ಪಡುವುದು ಮತ್ತು ತೀರಾ ಹಿಂದುಳಿದಿರುವಿಕೆಗಳನ್ನು ಪ್ರಮುಖ ಮಾನದಂಡಗಳನ್ನಾಗಿ ಪರಿಗಣಿಸಿತ್ತು. ಯಾವುದೇ ಬುಡಕಟ್ಟು ಸಮುದಾಯಕ್ಕೆ ಸೇರಿದ ಜನರು ಮುಖ್ಯವಾಹಿನಿ ಜನರೊಂದಿಗೆ ಬೆರೆತಿದ್ದರೆ, ಅಂತಹವರು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಲು ಅರ್ಹರಲ್ಲ ಎಂದೂ ಸಮಿತಿ ಪ್ರತಿಪಾದಿಸಿತ್ತು. 'ಕೆಲವು ರಾಜ್ಯಗಳಲ್ಲಿ ಒಂದೇ ಹೆಸರಿನ ಎರಡು ಭಿನ್ನ ಸಮುದಾಯಗಳಿವೆ. ಆದರೆ, ಅವುಗಳಲ್ಲಿ ಒಂದು ಸಮುದಾಯ ಮಾತ್ರ ಎಸ್‌ಟಿ ಪಟ್ಟಿಗೆ ಸೇರಲು ಅರ್ಹವಾಗಿರುವುದು ಕಂಡು ಬಂದಿದೆ. ಬುಡಕಟ್ಟು ಸಮುದಾಯಗಳಿಗೆ ಸೇರಿದ ಜನರು ರಾಜ್ಯವೊಂದರ ನಿರ್ದಿಷ್ಟ ಪ್ರದೇಶಗಳಲ್ಲಿ ನೆಲಸಿರುವ ಮತ್ತು ಅದೇ ಸಮುದಾಯದ ಮತ್ತೂ ಕೆಲವರು ರಾಜ್ಯದ ಉಳಿದ ಪ್ರದೇಶಗಳಲ್ಲಿ ವಾಸಿಸುತ್ತಿರುವ ಕೆಲವು ಉದಾಹರಣೆಗಳು ಕಂಡುಬಂದಿವೆ. ಇವರಲ್ಲಿ ನಿರ್ದಿಷ್ಟ ಪ್ರದೇಶಗಳಲ್ಲಿ ವಾಸಿಸುತ್ತಿರುವವರನ್ನು ಎಸ್‌ಟಿ ಪಟ್ಟಿಗೆ ಸೇರಿಸುವ ಅಗತ್ಯವಿದೆ. ಉಳಿದ ಕಡೆಗಳಲ್ಲಿ ನೆಲಸಿರುವವರು ಈ ಪಟ್ಟಿಗೆ ಸೇರುವ ಅರ್ಹತೆ ಪಡೆದಿಲ್ಲ' ಎಂದು ಸಮಿತಿಯು ತನ್ನ ವರದಿಯಲ್ಲಿ ತಿಳಿಸಿತ್ತು.

ಆದರೆ, ನಂತರದ ವರ್ಷಗಳಲ್ಲಿ ಕೇಂದ್ರ ಸರ್ಕಾರವು ಪಟ್ಟಿಗೆ ಜಾತಿಗಳನ್ನು ಸೇರ್ಪಡೆಯಾಗಲು ಅಥವಾ ಪಟ್ಟಿಯಿಂದ ತೆಗೆದು ಹಾಕಲು ಇರಬೇಕಾದ ವಿಧಾನಗಳನ್ನು ಬದಲಾಯಿಸಿತು.

## ಅತ್ಯಲ್ಪ ಯಶಸ್ಸು



ಕರ್ನಾಟಕದಲ್ಲಿ ಹಲವು ಜಾತಿಗಳನ್ನು ಅವುಗಳ ಸ್ಥಿತಿಗತಿ ಆಧರಿಸಿ ಎಸ್‌ಟಿ ಪಟ್ಟಿಗೆ ಸೇರಿಸುವ ಸಂಬಂಧ ಹಿಂದಿನಿಂದಲೂ ಪ್ರಸ್ತಾವಗಳನ್ನು ಕಳುಹಿಸುವುದು ನಡೆದೇ ಇದೆ. ಕಾಡುಗೊಲ್ಲರನ್ನು ಎಸ್‌ಟಿ ಪಟ್ಟಿಗೆ ಸೇರಿಸಬೇಕೆನ್ನುವ ಬೇಡಿಕೆ ಬಹಳ ಕಾಲದಿಂದಲೂ ಇದೆ. ಈ ಸಂಬಂಧ ರಾಜ್ಯದಿಂದ ಹಿಂದೆಯೇ ಶಿಫಾರಸು ಮಾಡಲಾಗಿತ್ತು. ಇದೇ ರೀತಿ ಗಂಗಾಮತ ಮತ್ತು ಅದರ ಉಪಜಾತಿಗಾಳದ ಕೋಲಿ, ಕಬ್ಬಲಿಗ, ಬೆಸ್ತ, ಬಾರಿಕ, ಅಂಬಿಗ ಇವುಗಳನ್ನು ಎಸ್‌ಟಿ ಪಟ್ಟಿಗೆ ಸೇರಿಸಬೇಕು ಎನ್ನುವ ಒತ್ತಾಯ ಇದೆ. ಬಹಳ ಹಿಂದಿನಿಂದಲೂ ಈ ಬೇಡಿಕೆ ಇದ್ದು, ಮೂರು ಬಾರಿ ಶಿಫಾರಸು ಮಾಡಲಾಗಿತ್ತು. ಮೂರು ಬಾರಿಯೂ ಪ್ರಸ್ತಾವವನ್ನು ವಾಪಸ್ ಕಳುಹಿಸಲಾಗಿದೆ. ರಾಜ್ಯದ ಇಂಥ ಪ್ರಯತ್ನಗಳ ಪೈಕಿ ಯಶ ಕಂಡಿರುವುದು ಕೆಲವು ಮಾತ್ರ. ರಾಜ್ಯ ಸರ್ಕಾರದ ಶಿಫಾರಸು ಆಧರಿಸಿ ಮೇದಾರ, ತಳವಾರರನ್ನು ಎಸ್‌ಟಿ ಪಟ್ಟಿಗೆ ಸೇರಿಸಲಾಗಿದೆ. ಇದೇ ರೀತಿ ಕೆಲವು ಜಿಲ್ಲೆಗಳಲ್ಲಿರುವ ಸಿದ್ದಿ ಸಮುದಾಯವನ್ನೂ ಎಸ್‌ಟಿ ಪಟ್ಟಿಗೆ ಸೇರಿಸಲಾಗಿದೆ. ಆದರೆ, ರಾಜ್ಯದ ಪ್ರಯತ್ನಗಳಿಗೆ ಸಿಕ್ಕಿರುವ ಯಶಸ್ಸು ಅತ್ಯಲ್ಪ.

2025ರ ಸೆಪ್ಟೆಂಬರ್ 16ರಂದು ಕರೆದಿದ್ದ ಸಭೆಯಲ್ಲಿ ಕುರುಬರನ್ನು ಎಸ್‌ಟಿ ಪಟ್ಟಿಗೆ ಸೇರಿಸುವ ವಿಚಾರದ ಜತೆಗೆ ಗಂಗಾಮತಸ್ಥರನ್ನು ಎಸ್‌ಟಿ ಪಟ್ಟಿಗೆ ಸೇರಿಸುವ ಪ್ರಸ್ತಾವದ ಬಗ್ಗೆಯೂ ಚರ್ಚಿಸಬೇಕಾಗಿತ್ತು. ಆದರೆ, ನಂತರ ಆ ಸಭೆ ಮುಂದೂಡಲಾಯಿತು.

## ❖ ಫಿಡೆ ವಿಶ್ವಕಪ್: ದಿವ್ಯಾ ದೇಶಮುಖ್‌ಗೆ ವೈಲ್ಡ್‌ಕಾರ್ಡ್

**ಸಂದರ್ಭ:** ಫಿಡೆ ಮಹಿಳಾ ವಿಶ್ವಕಪ್ ವಿಜೇತೆ ಗ್ರ್ಯಾಂಡ್ ಮಾಸ್ಟರ್ ದಿವ್ಯಾ ದೇಶಮುಖ್ ಅವರು **ಗೋವಾದಲ್ಲಿ ನಡೆಯಲಿರುವ 2025ರ ಆವೃತ್ತಿಯ ಫಿಡೆ ವಿಶ್ವಕಪ್‌ಗೆ** ವೈಲ್ಡ್‌ಕಾರ್ಡ್ ಪ್ರವೇಶ ಪಡೆದಿದ್ದಾರೆ.

- ವಿಶ್ವಕಪ್ ಟೂರ್ನಿಯು ಅಕ್ಟೋಬರ್ 31ರಿಂದ ನವೆಂಬರ್ 27ರ ತನಕ ನಡೆಯಲಿದೆ. ಒಬ್ಬ ಸ್ಪರ್ಧಿಯು ಕೊನೆಯ ಕ್ಷಣದಲ್ಲಿ ಹಿಂದೆ ಸರಿದ ಕಾರಣ 19 ವರ್ಷದ ದಿವ್ಯಾ ಅವರಿಗೆ ಅವಕಾಶ ದೊರಕಿದೆ.
- **ಫಿಡೆ ವಿಶ್ವಕಪ್ ಪ್ರತಿ ಎರಡು ವರ್ಷ ಗಳಿಗೊಮ್ಮೆ ನಡೆಯುತ್ತದೆ**. ವಿಶ್ವದ 206 ಚೆಸ್‌ಪಟುಗಳು ಕಣಕ್ಕೆ ಇಳಿಯಲಿದ್ದಾರೆ.
- **20 ಆಟಗಾರರನ್ನು ಒಳಗೊಂಡ ಭಾರತದ ಸವಾಲನ್ನು ವಿಶ್ವ ಚಾಂಪಿಯನ್ ಡಿ. ಗುಕೇಶ್ ಮುನ್ನಡೆಸಲಿದ್ದಾರೆ.**

## ❖ ಜಿಎಸ್‌ಟಿ: ನಿತ್ಯದ ವೆಚ್ಚ ಶೇ 13ರಷ್ಟು ಇಳಿಕೆ

**ಸಂದರ್ಭ:** ಜಿಎಸ್‌ಟಿ ದರದಲ್ಲಿ ಆಗಿರುವ ಪರಿಷ್ಕರಣೆಯು ದಿನಸಿ ವಸ್ತುಗಳು ಹಾಗೂ ನಿತ್ಯದ ಬಳಕೆಯ ಇತರ ವಸ್ತುಗಳಿಗೆ ಮಾಡುವ ವೆಚ್ಚದಲ್ಲಿ ಶೇಕಡ 13ರಷ್ಟು ಉಳಿತಾಯಕ್ಕೆ ಕಾರಣವಾಗುತ್ತದೆ ಎಂದು ಕೇಂದ್ರ ಸರ್ಕಾರ ಅಂದಾಜು ಮಾಡಿದೆ.

- ಪರಿಷ್ಕೃತ ದರವು ಜಾರಿಗೆ ಬಂದಿದೆ. ಸಣ್ಣ ಕಾರು ಖರೀದಿಸಲು ಮುಂದಾಗುವವರು ಅಂದಾಜು ₹70 ಸಾವಿರ ಉಳಿತಾಯ ಮಾಡಲು ಸಾಧ್ಯವಿದೆ.
- **ಸ್ಟೇಷನರಿ, ಬಟ್ಟೆ, ಪಾದರಕ್ಷೆ ಮತ್ತು ಔಷಧಗಳ ಖರೀದಿ ಸಂದರ್ಭದಲ್ಲಿ ಶೇ 7ರಿಂದ ಶೇ 12ರವರೆಗೆ ಉಳಿತಾಯ ಆಗಲಿದೆ** ಎಂದು ಸರ್ಕಾರವು ಅಂದಾಜಿ ಸಿದೆ.
- **ವೈಯಕ್ತಿಕ ಆರೋಗ್ಯ ವಿಮೆ ಹಾಗೂ ಜೀವ ವಿಮಾ ಪಾಲಿಸಿಗಳ ಪ್ರೀಮಿಯಂ ಮೇಲಿನ ಉಳಿತಾಯವು ಶೇ 18ರಷ್ಟು ಇರಲಿದೆ.**
- ದಿನಸಿ ಉತ್ಪನ್ನಗಳು, ಕೃಷಿ ಉಪಕರಣಗಳು, ಬಟ್ಟೆ, ಔಷಧಗಳು ಮತ್ತು ವಾಹನಗಳು ಸೇರಿದಂತೆ ಒಟ್ಟು 375 ಉತ್ಪನ್ನಗಳ ಮೇಲಿನ ಜಿಎಸ್‌ಟಿ ದರ ಪರಿಷ್ಕರಣೆ ಆಗಿದೆ. ಜಿಎಸ್‌ಟಿ ಸುಧಾರಣೆ ಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು 'ಜಿಎಸ್‌ಟಿ ಉಳಿತಾಯ ಉತ್ಸವ' ಎಂದು ಕರೆದಿದ್ದಾರೆ.
- 1,800 ಸಿ.ಸಿ.ವರೆಗಿನ ಎಂಜಿನ್ ಸಾಮರ್ಥ್ಯದ ಟ್ರ್ಯಾಕ್ಟರ್ ಖರೀದಿಸುವವರಿಗೆ ₹40 ಸಾವಿರದವರೆಗೆ ಉಳಿತಾಯ ಆಗಲಿದೆ. 350 ಸಿ.ಸಿ.ವರೆಗಿನ ಎಂಜಿನ್ ಸಾಮರ್ಥ್ಯದ ದ್ವಿಚಕ್ರ ವಾಹನ ಖರೀದಿಸುವವರಿಗೆ ₹8,000ದಷ್ಟು, 32 ಇಂಚುಗಳಿಗಿಂತ ಹೆಚ್ಚು ದೊಡ್ಡದಾದ ಟಿ.ವಿ. ಖರೀದಿಸುವವರಿಗೆ ₹3,500ರಷ್ಟು, ಹವಾನಿಯಂತ್ರಕ ಖರೀದಿ ಸಮಯದಲ್ಲಿ ₹2,800ರಷ್ಟು ಉಳಿತಾಯ ಆಗಲಿದೆ.

## ❖ ಮೂಲಸೌಕರ್ಯ ವಲಯದ ಬೆಳವಣಿಗೆ 13 ತಿಂಗಳ ಗರಿಷ್ಠ

**ಸಂದರ್ಭ:** ದೇಶದ ಪ್ರಮುಖ ಎಂಟು ಮೂಲಸೌಕರ್ಯ ವಲಯಗಳ ಬೆಳವಣಿಗೆ ಆಗಸ್ಟ್‌ನಲ್ಲಿ 13 ತಿಂಗಳ ಗರಿಷ್ಠ ಮಟ್ಟಕ್ಕೆ ಏರಿಕೆ ಆಗಿದ್ದು, ಶೇ 6.3ರಷ್ಟು ದಾಖಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

- **ಕಲ್ಲಿದ್ದಲು, ಉಕ್ಕು, ಸಿಮೆಂಟ್ ಉತ್ಪಾದನೆ**ಯಲ್ಲಿನ ಹೆಚ್ಚಳದಿಂದಾಗಿ ಈ ಬೆಳವಣಿಗೆ ಸಾಧ್ಯವಾಗಿದೆ ಎಂದು ತಿಳಿಸಿದೆ.
- ಜುಲೈನಲ್ಲಿ ವಲಯದ ಉತ್ಪಾದನೆ ಶೇ 3.7ರಷ್ಟಿತ್ತು. ಕಳೆದ ವರ್ಷದ ಆಗಸ್ಟ್‌ನಲ್ಲಿ ಬೆಳವಣಿಗೆ ಶೇ (–) 1.5 ದಾಖಲಾಗಿತ್ತು.
- ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್ ನಿಂದ ಆಗಸ್ಟ್‌ವರೆಗಿನ ಅವಧಿಯಲ್ಲಿ ವಲಯದ ಪ್ರಗತಿ ಶೇ 2.8ರಷ್ಟಾಗಿದೆ ಎಂದು ಕೇಂದ್ರ ತಿಳಿಸಿದೆ. ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ ಇದು ಶೇ 4.6ರಷ್ಟಿತ್ತು.

Dr. Rajkumar IAS/KAS Academy

- **ಕಲ್ಲಿದ್ದಲು (ಶೇ 11.4), ಉಕ್ಕು (ಶೇ 14.2), ಸಿಮೆಂಟ್ (ಶೇ 6.1), ಸಂಸ್ಕರಿ ಸಿದ ಉತ್ಪನ್ನಗಳು (ಶೇ 3), ರಸಗೊಬ್ಬರ (ಶೇ 4.6), ವಿದ್ಯುತ್ (ಶೇ 3.1ರಷ್ಟು) ಉತ್ಪಾದನೆ ಹೆಚ್ಚಳ ವಾಗಿದೆ.** ಕಚ್ಚಾ ತೈಲ, ನೈಸರ್ಗಿಕ ಅನಿಲ ಉತ್ಪಾದನೆ ಇಳಿಕೆ ಆಗಿದೆ ಎಂದು ತಿಳಿಸಿದೆ.

## ❖ ₹1 ಸಾವಿರ ಕೋಟಿ ವೆಚ್ಚದಲ್ಲಿ 'ಎಲ್‌ಇಎಪಿ'

**ಸಂದರ್ಭ**: 'ತಂತ್ರಜ್ಞಾನ ಕ್ಷೇತ್ರವನ್ನು ಬೆಂಗಳೂರಿನ ಹೊರಗೆ ವಿಸ್ತರಿಸುವ ಉದ್ದೇಶ ಹೊಂದಿರುವ ಎಲ್ ಇಎಪಿ (ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮ- ಲೀಪ್) ಕಾರ್ಯಕ್ರಮಕ್ಕೆ ₹1,000 ಕೋಟಿ ಮೀಸಲಿಡಲಾಗಿದೆ. ಇದರಿಂದ ಸ್ಥಳೀಯವಾಗಿ 5 ಲಕ್ಷ ಉದ್ಯೋಗ ಸೃಷ್ಟಿ ಆಗಲಿದೆ' ಎಂದು ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.


- ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ತಂತ್ರಜ್ಞಾನ, ನಾವೀನ್ಯ ಮತ್ತು ಆರ್ಥಿಕ ಅಭಿವೃದ್ಧಿ ಯಲ್ಲಿ ಸಹಕಾರ ಬಲಪಡಿಸಲು ಕರ್ನಾಟಕ ಸರ್ಕಾರವು ನ್ಯೂಜೆರ್ಸಿ ರಾಜ್ಯದ ಜೊತೆ ಮೂರು ವರ್ಷಗಳ ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿದೆ' ಎಂದರು.
- 'ಈ ಒಪ್ಪಂದದಿಂದ ಪರಿಸರ ವ್ಯವಸ್ಥೆ ಹಾಗೂ ಮಾನವ ಸಂಪನ್ಮೂಲಕ್ಕೂ ಹೆಚ್ಚು ಒತ್ತು ಸಿಗಲಿದೆ. ಜೀವವಿಜ್ಞಾನ (ಅಲೈಡ್ ಹೆಲ್ತ್ ಸೈನ್ಸ್), ಡೀಪ್ ಟೆಕ್ನಾಲಜಿ (ಸೈಬರ್ ಸೆಕ್ಯುರಿಟಿ ಮತ್ತು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್) ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ಗಳಲ್ಲಿ ಜಂಟಿಯಾಗಿ ಯೋಜನೆಗಳನ್ನು ರೂಪಿಸಲಾಗುವುದು. ಕೌಶಲ ಸುಧಾರಣೆ ಗಮನದಲ್ಲಿ ಇಟ್ಟುಕೊಂಡು ಈ ಒಪ್ಪಂದ ಮಾಡಿಕೊಳ್ಳಲಾಗಿದೆ. ಎಲ್‌ಇಎಪಿ ಕಾರ್ಯಕ್ರಮವನ್ನು ಅನುಷ್ಠಾನಕ್ಕೆ ತಂದು ತುಮಕೂರು, ಶಿವಮೊಗ್ಗ ಮತ್ತು ಕಲಬುರಗಿಯಲ್ಲಿ ಮಾಹಿತಿ ತಂತ್ರಜ್ಞಾನದ ಕ್ಲಸ್ಟರ್ ಅಭಿ ವೃದ್ಧಿಪಡಿಸಲಾಗುವುದು' ಎಂದರು.
- 'ಬೆಂಗಳೂರಿನಲ್ಲಿ ಎಲ್ಲ ಭಾಗ ದವರು ಕೆಲಸ ಮಾಡುತ್ತಾರೆ. ಅವರನ್ನು ಸ್ಥಳೀಯವಾಗಿ ಬಳಸಿಕೊಳ್ಳುವ ಯೋಚನೆ ಇದೆ. ಬೇರೆ ಸ್ಥಳ ಗಳಲ್ಲೂ ಸರ್ಕಾರಿ, ಖಾಸಗಿ ಸಹಭಾಗಿತ್ವದಲ್ಲಿ ಮಾಹಿತಿ ತಂತ್ರಜ್ಞಾನ ಅಭಿವೃದ್ಧಿ ಪಡಿಸಲಾಗುವುದು' ಎಂದರು.

Dr. Rajkumar IAS/KAS Academy

## ❖ ಪರಿಷ್ಕೃತ ಜಿಎಸ್‌ಟಿ ಇಂದಿನಿಂದ

**ಸಂದರ್ಭ:** ನಿತ್ಯ ಬಳಕೆಯ ಉತ್ಪನ್ನಗಳು, ಆಹಾರ ಉತ್ಪನ್ನಗಳು, ವಾಹನಗಳು ಸೇರಿದಂತೆ ಸರಿಸುಮಾರು 375 ಉತ್ಪನ್ನಗಳ ಬೆಲೆಯು ಕಡಿಮೆ ಆಗಲಿವೆ.

- ವಿವಿಧ ಉತ್ಪನ್ನಗಳು ಹಾಗೂ ಸೇವೆಗಳ ಮೇಲಿನ ತೆರಿಗೆ ಪ್ರಮಾಣವನ್ನು ಜಿಎಸ್‌ಟಿ ಮಂಡಳಿ ಪರಿಷ್ಕರಿಸಿದ್ದು, ಪರಿಷ್ಕೃತ ದರಗಳು ಜಾರಿಗೆ ಬರುತ್ತಿವೆ. ಇದರ ಪ್ರಯೋಜನ ವನ್ನು ಬಹುತೇಕ ಕಂಪನಿಗಳು ಗ್ರಾಹಕರಿಗೆ ವರ್ಗಾವಣೆ ಮಾಡಿವೆ.




- ಇಷ್ಟು ವರ್ಷ ಜಿಎಸ್‌ಟಿ ವ್ಯವಸ್ಥೆಯ ಅಡಿಯಲ್ಲಿ ನಾಲ್ಕು ತೆರಿಗೆ ಹಂತಗಳು (ಶೇ 5, 12, 18 ಮತ್ತು 28) ಇದ್ದವು. ಆದರೆ ಇನ್ನು ಮುಂದೆ ಜಿಎಸ್‌ಟಿ ವ್ಯವಸ್ಥೆಯ ಅಡಿಯಲ್ಲಿ ಎರಡು ತೆರಿಗೆ ಹಂತಗಳು (ಶೇ 5 ಮತ್ತು 18) ಇರಲಿವೆ. ಐಷಾರಾಮಿ ಉತ್ಪನ್ನಗಳು ಹಾಗೂ ತಂಬಾಕಿನ ಉತ್ಪನ್ನಗಳಿಗೆ ಶೇ 40ರಷ್ಟು ತೆರಿಗೆ ಇರಲಿದೆ. ಈ ಬದಲಾವಣೆಗಳ ಪರಿಣಾಮವಾಗಿ ದೇಶದ ಮಾರುಕಟ್ಟೆಯಲ್ಲಿ ಮುಂದಿನ ದಿನಗಳಲ್ಲಿ ಬೇಡಿಕೆ ಹೆಚ್ಚಾಗಲಿದೆ ಎಂದು ನಿರೀಕ್ಷಿಸಲಾಗಿದೆ.
- ತ್ವರಿತವಾಗಿ ಬಿಕರಿಯಾಗುವ ಗ್ರಾಹಕ ಬಳಕೆ ಉತ್ಪನ್ನಗಳನ್ನು (ಎಫ್‌ಎಂಸಿಜಿ) ತಯಾರಿಸುವ ಕಂಪನಿಗಳು ಪರಿಷ್ಕೃತ ದರವನ್ನು ಪ್ರಕಟಿಸಿವೆ. ಸೋಪು, ಶಾಂಪೂ, ಟೂತ್‌ಪೇಸ್ಟ್ ಸೇರಿದಂತೆ ತಮ್ಮ ಹತ್ತು ಹಲವು ಉತ್ಪನ್ನಗಳ ಮೇಲೆ ಹೊಸ ಎಂಆರ್‌ಪಿ ನಮೂದಿಸಿವೆ.
- ಕುರುಕಲು, ಕಾಫಿ ಮತ್ತು ಚಹಾ ಪುಡಿ, ಐಸ್‌ಕ್ರೀಂ, ಚಾಕೊಲೇಟ್ ಹಾಗೂ ಇತರ ಆಹಾರ ವಸ್ತುಗಳ ತಯಾರಿಕಾ ಕಂಪನಿಗಳು ಕೂಡ ತೆರಿಗೆ ಇಳಿಕೆಯ ಪ್ರಯೋಜನವನ್ನು ಗ್ರಾಹಕರಿಗೆ ವರ್ಗಾಯಿಸಲು ಸಜ್ಜಾಗಿವೆ.
- ಈ ಕಂಪನಿಗಳು ಪರಿಷ್ಕೃತ ಎಂಆರ್‌ಪಿ ಇರುವ ಉತ್ಪನ್ನಗಳನ್ನು ವಿತರಕರಿಗೆ, ಇ-ವಾಣಿಜ್ಯ ಕಂಪನಿಗಳ ಗೋದಾಮುಗಳಿಗೆ, ಸಾಂಪ್ರದಾಯಿಕ ಕಿರಾಣಿ ಅಂಗಡಿಗಳಿಗೆ ರವಾನಿಸಿರುವುದಾಗಿ ಹೇಳಿವೆ. ಈಗಾಗಲೇ ಮಾರುಕಟ್ಟೆಯಲ್ಲಿ ಇರುವ ಉತ್ಪನ್ನಗಳ ಬೆಲೆಯನ್ನು ವಿಶೇಷವಾದ ರಿಯಾಯಿತಿಗಳ ಮೂಲಕ ಸರಿಹೊಂದಿಸಲಾಗಿದೆ ಎಂದು ಹೇಳಿವೆ.
- ಡಾಬರ್, ಐಟಿಸಿ, ಪ್ರಾಕ್ಟರ್ ಆ್ಯಂಡ್ ಗ್ಯಾಂಬಲ್, ಇಮಾಮಿ, ನೆಸ್ಲೆ, ಆರ್‌ಸಿಪಿಎಲ್, ಅಮೂಲ್, ಎಚ್‌ಯುಎಲ್‌ನಂತಹ ಪ್ರಮುಖ ಕಂಪನಿಗಳು ಪರಿಷ್ಕೃತ ದರದ ಪಟ್ಟಿಯನ್ನು ತಮ್ಮ ವಿತರಕರಿಗೆ ರವಾನಿಸಿವೆ. ಅಲ್ಲದೆ, ತಮ್ಮ ವೆಬ್‌ಸೈಟ್‌ಗಳ ಮೂಲಕ ಹೊಸ ದರವನ್ನು ಗ್ರಾಹಕರಿಗೂ ತಿಳಿಸಿವೆ.

## ❖ ಕೆಐಒಸಿಎಲ್ ವಿರುದ್ಧ ಗ್ರಾಮಸಭೆ ನಿರ್ಣಯ

**ಸಂದರ್ಭ:** ಕುದುರೆಮುಖ ಕಬ್ಬಿಣದ ಅದಿರು ಕಂಪನಿಯ (ಕೆಐಒಸಿಎಲ್) ಉದ್ದೇಶಿತ ದೇವದಾರಿ ಗಣಿಗೆ ಮತ್ತೊಂದು ಅಡ್ಡಿ ಎದುರಾಗಿದೆ. ಗಣಿಯ ವಿರುದ್ಧ ಸ್ಥಳೀಯ ಗ್ರಾಮ ಪಂಚಾಯಿತಿಯ ವಿಶೇಷ ಗ್ರಾಮಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ.

- ದೇವದಾರಿ ಗಣಿಗೆ ಸಂಬಂಧಿಸಿ ಕೆಐಒಸಿಎಲ್ ಮತ್ತು ಅರಣ್ಯ ಇಲಾಖೆ ನಡುವಿನ ನ್ಯಾಯಾಂಗ ಹೋರಾಟದಲ್ಲಿ ಕೋರ್ಟ್ ಕೆಐಒಸಿಎಲ್ ಪರ ಇತ್ತೀಚೆಗೆ ಆದೇಶ ನೀಡಿದೆ. ಈ ಮಧ್ಯೆ ಸಂಡೂರು ತಾಲ್ಲೂಕಿನ ನರಸಿಂಗಪುರ ಗ್ರಾಮ ಪಂಚಾಯಿತಿಯ ವಿಶೇಷ ಗ್ರಾಮ ಸಭೆ ಜರುಗಿತು.

- ಸಭೆಯಲ್ಲಿ ಕೆಐಒಸಿಎಲ್‌ಗೆ ವಿರೋಧ ವ್ಯಕ್ತವಾಗಿದೆ. 'ಅರಣ್ಯ ಪ್ರದೇಶ, ಮಳೆ, ಪರಿಸರ ಹಿತದೃಷ್ಟಿಯಿಂದ ಕುದುರೆಮುಖ ಗಣಿಗಾರಿಕೆಯನ್ನು ಸ್ಥಗಿತಗೊಳಿಸಲು ಗ್ರಾಮಸ್ಥರು ತೀರ್ಮಾನಿಸಿದರು. ಕಂಪನಿಯು ಕೆಲ ಬೇಡಿಕೆಗಳನ್ನು ಈಡೇರಿಸಿದರೆ ಮಾತ್ರ ಇದಕ್ಕೆ ಅನುಮತಿ ನೀಡಬೇಕು ಎಂದು ಗ್ರಾಮಸ್ಥರೊಬ್ಬರು ಸಭೆಯಲ್ಲಿ ತಿಳಿಸಿದರು. ಮುಂದಿನ ಕ್ರಮಕ್ಕಾಗಿ ಸಂಡೂರು ತಹಶೀಲ್ದಾರರಿಗೆ ಪತ್ರ ಕಳುಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು' ಎಂದು ಗ್ರಾಮ ಪಂಚಾಯಿತಿ ನಿರ್ಣಯ ಪಟ್ಟಿಯಲ್ಲಿ ಉಲ್ಲೇಖಿಸಲಾಗಿದೆ.
- ನಿರ್ಣಯಕ್ಕೆ ಮಾನ್ಯತೆಯುಂಟೇ?: ಗ್ರಾಮ ಸಭೆಯ ನಿರ್ಣಯಗಳಿಗೆ ಮಾನ್ಯತೆ ಇರುತ್ತದೆ. ಆದರೆ, ಇದು ಮುಖ್ಯ ಖನಿಜಕ್ಕೆ (ಮೇಜರ್ ಮಿನರಲ್) ಸಂಬಂಧಿಸಿದ ವಿಷಯ. ರಾಷ್ಟ್ರೀಯ ಅಭಿವೃದ್ಧಿಯಲ್ಲಿ ಮುಖ್ಯ ಖನಿಜಗಳು ನಿರ್ಣಾಯಕ ಪಾತ್ರ ವಹಿಸುತ್ತವೆ. ಆದ್ದರಿಂದ ಈ ವಿಷಯದಲ್ಲಿ ಗ್ರಾಮಸಭೆ ನಿರ್ಣಯಕ್ಕೆ ಮಾನ್ಯತೆ ಇಲ್ಲ ಎಂಬ ಅಭಿಪ್ರಾಯ ಅಧಿಕಾರಿಗಳಿಂದ ವ್ಯಕ್ತವಾಗಿದೆ.
- 'ಗ್ರಾಮ ಪಂಚಾಯಿತಿ ಎಂಬುದು ಸ್ಥಳೀಯ ಸರ್ಕಾರ. ನಮ್ಮ ನಿರ್ಧಾರಕ್ಕೆ ಮಾನ್ಯತೆ ಇದೆ. ಗಣಿ ಲಾರಿಗಳ ಓಡಾಟದಿಂದ ನಮ್ಮ ಗ್ರಾಮಗಳು ದೂಳಿನಲ್ಲಿ ಮುಳುಗಿವೆ. ನಾವೆಲ್ಲರೂ ಶಾಪಗ್ರಸ್ತರಾಗಿದ್ದೇವೆ. ಹೊಸ ಗಣಿ ಬರುವುದಕ್ಕೆ ನಮ್ಮ ವಿರೋಧವಿದೆ' ಎಂದು ಗ್ರಾಮಸ್ಥರು ಹೇಳಿದ್ದಾರೆ.
- **ಸಂಡೂರು ತಾಲ್ಲೂಕಿನ ಸ್ವಾಮಿಮಲೈ ಅರಣ್ಯದ 401.57 ಹೆಕ್ಟೇರ್ ಪ್ರದೇಶದಲ್ಲಿ ಕೆಐಒಸಿಎಲ್ 'ದೇವದಾರಿ' ಗಣಿಗಾರಿಕೆ ನಡೆಸಲು ಯೋಜನೆ ರೂಪಿಸಿದೆ.** ಆದರೆ, ಅರಣ್ಯ ತೀರುವಳಿ ಪತ್ರ ಇನ್ನೂ ಸಿಕ್ಕಿಲ್ಲ. ಗಣಿಗೆ ಒಂದು ಲಕ್ಷ ಮರಗಳನ್ನು ಕಡಿಯುವ ಅಗತ್ಯವಿದೆ ಎಂದು ಈಗಾಗಲೇ ಅರಣ್ಯ ಇಲಾಖೆ ಹೇಳಿದ್ದು, ಜತೆಗೆ ಆಕ್ಷೇಪವನ್ನೂ ವ್ಯಕ್ತಪಡಿಸಿದೆ.

## ❖ ಭಾರತ್‌ಜೆನ್ ಎ.ಐ ಮಾದರಿಗೆ ಹಣಕಾಸಿನ ನೆರವು: ವೈಷ್ಣವ್

**ಸಂದರ್ಭ:** ಕೇಂದ್ರ ಸರ್ಕಾರದ ಬೆಂಬಲವಿರುವ ಕೃತಕ ಬುದ್ಧಿಮತ್ತೆಯ (ಎ.ಐ) ಪ್ರಮುಖ ಯೋಜನೆ 'ಭಾರತ್ ಜೆನ್' ಗೆ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ₹988.6 ಕೋಟಿ ಧನಸಹಾಯವನ್ನು ನೀಡಿದೆ ಎಂದು ಕೇಂದ್ರ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಅವರು ಹೇಳಿದ್ದಾರೆ.

- ₹1,500 ಕೋಟಿ ಮೊತ್ತದ 'ಇಂಡಿಯಾ ಎ.ಐ ಮಿಷನ್ 2025' ಅಡಿಯಲ್ಲಿ ಭಾರತದ ಸರ್ಕಾರಿ ಎ.ಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವಲ್ಲಿ ಭಾರತ್‌ಜೆನ್‌ನ ವಹಿಸಬಹುದಾದ ಪಾತ್ರವನ್ನು ಈ ಧನಸಹಾಯವು ತೋರಿಸುತ್ತದೆ.
- ಶಕ್ತಿಯುತ ಎ.ಐ ಮಾದರಿಗಳನ್ನು ರಚಿಸಲು ಭಾರತ್‌ಜೆನ್‌ಗೆ ಈ ಧನಸಹಾಯವು ನೆರವು ನೀಡುತ್ತದೆ. ಇದು ಧ್ವನಿಯನ್ನು ಅಕ್ಷರಗಳಿಗೆ ಪರಿವರ್ತಿಸುವ, ಅಕ್ಷರಗಳನ್ನು ಓದಿಹೇಳುವ ತಂತ್ರಜ್ಞಾನಗಳ ಅಭಿವೃದ್ಧಿಯನ್ನು ಉತ್ತೇಜಿಸುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ❖ ಆನಂದ ಸಂಕೇಶ್ವರಗೆ 'ಸೌತ್ ಇಂಡಿಯಾ ಬ್ಯುಸಿನೆಸ್' ಪ್ರಶಸ್ತಿ

**ಸಂದರ್ಭ:** ವಿಆರ್‌ಎಲ್ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕ ಆನಂದ ಸಂಕೇಶ್ವರ ಅವರಿಗೆ 'ಸೌತ್ ಇಂಡಿಯಾ ಬ್ಯುಸಿನೆಸ್ ಪ್ರಶಸ್ತಿ' (ಎಸ್‌ಐಬಿಎ) ಸಂದಿದೆ.

- ದುಬೈನಲ್ಲಿ ಈಚೆಗೆ ನಡೆದ ಕಾರ್ಯಕ್ರಮದಲ್ಲಿ ಭಾರತದಲ್ಲಿ ಯುಎಇ ರಾಯಭಾರಿ ಆಗಿದ್ದ ಅಹ್ಮದ್ ಅಬ್ದುಲ್ ರೆಹಮಾನ್ ಅಲ್ಬನ್ನಾ ಅವರು ಆನಂದ ಸಂಕೇಶ್ವರ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು. ಉದ್ಯಮ, ಸಂಸ್ಕೃತಿ ಮತ್ತು ವಾಣಿಜ್ಯ ವಲಯದಲ್ಲಿ ಜಾಗತಿಕವಾಗಿ ಪ್ರಭಾವ ಬೀರಿರುವವರನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತದೆ.
- ವಿಆರ್‌ಎಲ್ ಸಂಸ್ಥೆಯನ್ನು ದೇಶದ ದೊಡ್ಡ ಸಾರಿಗೆ ಕಂಪನಿಯಾಗಿ, ಕಾರ್ಯಾ ಚರಣೆ ದಕ್ಷತೆಯಲ್ಲಿ ವಿಶ್ವಾಸಾರ್ಹತೆಯನ್ನು ಉಳಿಸಿಕೊಂಡು ಬೆಳೆಸುವಲ್ಲಿ ಆನಂದ ಸಂಕೇಶ್ವರ ಕೊಡುಗೆ ನೀಡಿದ್ದಾರೆ ಎಂದು ಕಾರ್ಯಕ್ರಮದ ಸಂಘಟಕರು ಹೇಳಿರು ವುದಾಗಿ ಪ್ರಕಟಣೆ ತಿಳಿಸಿದೆ.

## ❖ ಎಚ್-1ಬಿ ವೀಸಾ: ಕ್ರಮಕ್ಕೆ ಒತ್ತಾಯ

**ಸಂದರ್ಭ:** 'ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಎಚ್‌-1ಬಿ ವೀಸಾ ಅರ್ಜಿಯ ವಾರ್ಷಿಕ ಶುಲ್ಕವನ್ನು ಹೆಚ್ಚಿಸಿರುವುದರ ವಿರುದ್ಧ ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಯುದ್ಧೋಪಾದಿಯಲ್ಲಿ ಕ್ರಮ ತೆಗೆದುಕೊಳ್ಳಬೇಕು ' ಎಂದು ತೆಲಂಗಾಣ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಆಗ್ರಹಿಸಿದ್ದಾರೆ.

- 'ಎಚ್‌-1ಬಿ ವೀಸಾ ಅರ್ಜಿಯ ವಾರ್ಷಿಕ ಶುಲ್ಕ ಹೆಚ್ಚಳದಿಂದ ತೆಲುಗು ಐಟಿ ವೃತ್ತಿಪರರಿಗೆ ಆಗಿರುವ ನೋವನ್ನು ಊಹಿಸಲೂ ಸಾಧ್ಯವಿಲ್ಲ. ಈ ಸಮಸ್ಯೆಯನ್ನು ಸೌಹಾರ್ದದಿಂದ ಪರಿಹರಿಸಬೇಕು' ಎಂದು ಅವರು 'ಎಕ್ಸ್' ನಲ್ಲಿ ಪೋಸ್ಟ್ ಮಾಡಿದ್ದಾರೆ.
- 'ಶುಲ್ಕ ಹೆಚ್ಚಿಸುವ ಟ್ರಂಪ್ ಅವರ ಆದೇಶವು ಆಘಾತಕಾರಿಯಾಗಿದೆ. ಭಾರತ-ಅಮೆರಿಕ ನಡುವಿನ ಐತಿಹಾಸಿಕ ಸಂಬಂಧದ ಹಿನ್ನೆಲೆಯಲ್ಲಿ ಈ ಕ್ರಮವು ಸ್ವೀಕಾರಾರ್ಹವಲ್ಲ' ಎಂದೂ ಅವರು ಹೇಳಿದ್ದಾರೆ.
- 'ಅಮೆರಿಕಕ್ಕಾಗಿ ವರ್ಷಗಳಿಂದ ಕೆಲಸ ಮಾಡುತ್ತಿರುವ ನಮ್ಮ ದೇಶದ ಅಪಾರ ಸಂಖ್ಯೆಯ ಐಟಿ ವೃತ್ತಿಪರರು, ಕೌಶಲ ಆಧಾರಿತ ನೌಕರರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಕ್ರಮ ಕೈಗೊಳ್ಳಬೇಕು ' ಎಂದು ಮನವಿ ಮಾಡಿದ್ದಾರೆ.
- ಎಚ್‌-1ಬಿ ವೀಸಾದ ದುರ್ಬಳಕೆಯು ರಾಷ್ಟ್ರೀಯ ಭದ್ರತೆಗೆ ಆತಂಕಕಾರಿ ಎಂದಿರುವ ಟ್ರಂಪ್, ಅರ್ಜಿಗೆ ಸಂಬಂಧಿಸಿದ ವಾರ್ಷಿಕ ಶುಲ್ಕವನ್ನು 1 ಲಕ್ಷ ಡಾಲರ್‌ಗೆ (ಅಂದಾಜು ₹88 ಲಕ್ಷ) ಹೆಚ್ಚಿಸುವ ಆದೇಶಕ್ಕೆ ಶುಕ್ರವಾರ ಸಹಿ ಹಾಕಿದ್ದರು. ಅಮೆರಿಕಕ್ಕೆ ವಲಸೆಯೇತರ ಕಾರ್ಮಿಕರ ಪ್ರವೇಶದ ಮೇಲೆ ನಿರ್ಬಂಧ ಹೇರಲು ಶುಲ್ಕ ಹೆಚ್ಚಳ ಮಾಡುತ್ತಿರುವುದಾಗಿ ಹೇಳಿದ್ದರು.

**'ಅಮೆರಿಕದಿಂದ ಬಲವಂತದ ತಂತ್ರ'**

- 'ಅಮೆರಿಕವು ತನ್ನ ವ್ಯಾಪಾರ ಹಿತಾಸಕ್ತಿ ರಕ್ಷಿಸಿಕೊಳ್ಳಲು ಭಾರತದ ಮೇಲೆ ಬಲವಂತದ ತಂತ್ರಗಳನ್ನು ಅನುಸರಿಸುತ್ತಿದೆ. ಕೇಂದ್ರ ಸರ್ಕಾರವು ಈ ಅನ್ಯಾಯದ ವಿರುದ್ಧ ದೃಢ ನಿಲುವು ತೆಗೆದುಕೊಳ್ಳಬೇಕು' ಎಂದು ಸಿಪಿಎಂ ಪಾಲಿಟ್‌ಬ್ಯೂರೊ ಆಗ್ರಹಿಸಿದೆ.
- ಅಮೆರಿಕದ ಶೇ 50 ಸುಂಕ ನೀತಿಗೆ ಭಾರತ ಮಣಿಯುವಂತೆ ಮಾಡಲು ಎಚ್‌-1ಬಿ ವೀಸಾ ಅರ್ಜಿಯ ಶುಲ್ಕ ಹೆಚ್ಚಳದಂತಹ ಬಲವಂತದ ಕ್ರಮಗಳನ್ನು ಕೈ ಗೊಳ್ಳಲಾಗುತ್ತಿದೆ. ಈ ವಿಚಾರದಲ್ಲಿ ಕೇಂದ್ರ ಸರ್ಕಾರದ ಪ್ರತಿಕ್ರಿಯೆನ್ನು ಎಡಪಕ್ಷಗಳು ಬಯಸುತ್ತವೆ ಎಂದಿದೆ.

## ❖ ಪವನ್‌ಕುಮಾರ್ ಭಜಂತ್ರಿ ಪಟ್ನಾ ಹೈಕೋರ್ಟ್ ಸಿಜೆ

**ಸಂದರ್ಭ:** ಕರ್ನಾಟಕದ ಪವನ್‌ಕುಮಾರ್ ಭೀಮಪ್ಪ ಭಜಂತ್ರಿ ಅವರು ಬಿಹಾರದ ಪಟ್ನಾ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

- ಬಿಹಾರ ರಾಜ್ಯಪಾಲರಾದ ಆರೀಫ್ ಮೊಹಮ್ಮದ್ ಖಾನ್ ಅವರು ರಾಜಭವನದಲ್ಲಿ ಪವನ್‌ಕುಮಾರ್ ಅವರಿಗೆ ಪ್ರಮಾಣ ವಚನ ಬೋಧಿಸಿದರು. ಮುಖ್ಯಮಂತ್ರಿ ನಿತೀಶ್ ಕುಮಾರ್ ಹಾಗೂ ಉಪ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಕಾರ್ಯಕ್ರಮದಲ್ಲಿ ಹಾಜರಿದ್ದರು.
- 1990ರಲ್ಲಿ ವಕೀಲರಾಗಿ ವೃತ್ತಿ ಆರಂಭಿಸಿದ ಪವನ್‌ಕುಮಾರ್ ಅವರು, 2015ರಲ್ಲಿ ಕರ್ನಾಟಕ ಹೈಕೋರ್ಟ್ ನಲ್ಲಿ ಹೆಚ್ಚುವರಿ ನ್ಯಾಯಮೂರ್ತಿಗಳಾಗಿ ನೇಮಕಗೊಂಡರು. ನಂತರ ಪಂಜಾಬ್, ಹರಿಯಾಣ ಹೈಕೋರ್ಟ್‌ನಲ್ಲಿ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿ, 2018ರಲ್ಲಿ ಮತ್ತೆ ಕರ್ನಾಟಕ ಹೈ ಕೋರ್ಟ್ ನ್ಯಾಯಮೂರ್ತಿಯಾಗಿ ನೇಮಕಗೊಂಡರು. 2021ರಿಂದ ಪಟ್ನಾ ಹೈಕೋರ್ಟ್‌ನಲ್ಲಿ ನ್ಯಾಯಮೂರ್ತಿಗಳಾಗಿ ಸೇವೆ ಸಲ್ಲಿಸಿದ್ದಾರೆ.

Dr Rajkumar IAS/KAS Academy

## ❖ ಸಾತ್ವಿಕ್-ಚಿರಾಗ್ ಮತ್ತೆ ರನ್ನರ್ಸ್ ಅಪ್

**ಸಂದರ್ಭ:** ಭಾರತದ ಅಗ್ರಮಾನ್ಯ ಡಬಲ್ಸ್ ಜೋಡಿ ಸಾತ್ವಿಕ್ ಸಾಯಿರಾಜ್ ರಣಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಅವರು ಚೀನಾ ಮಾಸ್ಟರ್ಸ್ ಸೂಪರ್ 750 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ರನ್ನರ್ಸ್ ಅಪ್‌ನೊಂದಿಗೆ ಅಭಿಯಾನ ಮುಗಿಸಿದರು.

- ಎಂಟನೇ ಕ್ರಮಾಂಕದ ಭಾರತದ ಆಟಗಾರರು ಪುರುಷರ ಡಬಲ್ಸ್ ಫೈನಲ್‌ನಲ್ಲಿ 19-21, 15-21ರಿಂದ ವಿಶ್ವದ ಅಗ್ರಮಾನ್ಯ ಜೋಡಿ ಕಿಮ್ ವಾನ್ ಹೋ ಮತ್ತು ಸಿಯೋ ಸೆಯುಂಗ್ ಜೇ ಅವರಿಗೆ ಮಣಿದರು. ದಕ್ಷಿಣ ಕೊರಿಯಾದ ಈ ಆಟಗಾರರು 45 ನಿಮಿಷದಲ್ಲಿ ನೇರ ಗೇಮ್‌ಗಳಿಂದ ಮೇಲುಗೈ ಸಾಧಿಸಿದರು.



ಪದಕ ಪಟ್ಟಿ

| ದೇಶ | ಚಿನ್ನ | ಬೆಳ್ಳಿ | ಕಂಚು | ಒಟ್ಟು |
|---|---|---|---|---|
| ಅಮೆರಿಕ | 16 | 5 | 5 | 26 |
| ಕೆನ್ಯಾ | 7 | 2 | 2 | 11 |
| ಕೆನಡಾ | 3 | 1 | 1 | 5 |
| ನೆದರ್ಲೆಂಡ್ಸ್ | 2 | 2 | 2 | 6 |

ಹೈಜಂಪ್ ಚಿನ್ನ ಗೆದ್ದ ನಿಕೋಲಾ

ಗೆದ್ದಿತು. ಗಡಿಯಾರದಲ್ಲಿ ಎರಡೂ

- ಏಷ್ಯನ್ ಗೇಮ್ಸ್ ಚಾಂಪಿಯನ್ ಜೋಡಿ ಈ ಟೂರ್ನಿಯ ಮೂಲಕ ತಮ್ಮ ಪ್ರಶಸ್ತಿ ಬರವನ್ನು ನೀಗಿಸಿಕೊಳ್ಳುವ ಛಲದಲ್ಲಿದ್ದರು. ಹೋದ ತಿಂಗಳು ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಎರಡನೇ ಕಂಚಿನ ಪದಕ ಮತ್ತು ಹೋದ ವಾರ ಹಾಂಗ್‌ಕಾಂಗ್ ಓಪನ್‌ನಲ್ಲಿ ರನ್ನರ್ಸ್ ಅಪ್ ಆಗಿದ್ದ ಸಾತ್ವಿಕ್-ಚಿರಾಗ್ ಇಲ್ಲಿ ಒಂದೂ ಗೇಮ್ ಬಿಟ್ಟುಕೊಡದೆ ಪ್ರಶಸ್ತಿ ಸುತ್ತು ತಲುಪಿ, ಭರವಸೆ ಮೂಡಿಸಿದ್ದರು.
- ಇತರ ಜೊತೆಗಾರರೊಂದಿಗೆ ಪ್ರಯೋಗ ಮಾಡಿ ಮತ್ತೆ ಈ ಋತುವಿನಲ್ಲಿ ಒಂದಾದ ಕಿಮ್ ಮತ್ತು ಸಿಯೋ ಅವರು 2025ರಲ್ಲಿ ಒಂಬತ್ತನೇ ಟೂರ್ನಿಯಲ್ಲಿ ಫೈನಲ್ ಸ್ಪರ್ಧಿಸಿದ್ದಾರೆ. ಆ ಪೈಕಿ ಪ್ಯಾರಿಸ್‌ನಲ್ಲಿ ನಡೆದ ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಚಿನ್ನ, ಆಲ್ ಇಂಗ್ಲೆಂಡ್ ಮತ್ತು ಇಂಡೋನೇಷ್ಯಾ ಓಪನ್ ಸೇರಿದಂತೆ ಆರು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದ್ದಾರೆ.

## ❖ ಪ್ಯಾರಾ ಬ್ಯಾಡ್ಮಿಂಟನ್: ಪ್ರಮೋದ್‌ಗೆ ಚಿನ್ನ, ಕೃಷ್ಣ, ಸುಕಾಂತ್‌ಗೆ ಬೆಳ್ಳಿ

**ಸಂದರ್ಭ:** ಭಾರತದ ಪ್ರಮೋದ್ ಭಗತ್ ಅವರು ಬೀಜಿಂಗ್‌ನಲ್ಲಿ ಭಾನುವಾರ ನಡೆದ ಚೀನಾ ಪ್ಯಾರಾ ಬ್ಯಾಡ್ಮಿಂಟನ್ ಇಂಟರ್‌ನ್ಯಾಷನಲ್ ಟೂರ್ನಿಯಲ್ಲಿ ಚಿನ್ನ ಗೆದರೆ, ಸುಕಾಂತ ಕದಂ ಮತ್ತು ಕೃಷ್ಣ ನಗರ್ ಬೆಳ್ಳಿ ಪದಕಗಳನ್ನು ಗೆದ್ದುಕೊಂಡಿದ್ದಾರೆ.

- ಅನುಭವಿ ಪ್ರಮೋದ್ ಭಾಗವತ್ ಅವರು 18 ತಿಂಗಳ ಅಮಾನತಿನ ನಂತರ ಆಟಕ್ಕೆ ಸ್ಮರಣೀಯ ಪುನರಾಗಮನ ಮಾಡಿದ್ದು, ಪುರುಷರ ಎಸ್‌ಎಲ್3 ವಿಭಾಗದ ಸಿಂಗಲ್ಸ್‌ನಲ್ಲಿ ಚಿನ್ನದ ಗೆದ್ದುಕೊಂಡರು. ಪ್ರಮೋದ್, ಉತ್ತಮ ಹೋರಾಟ ಕಂಡ ಫೈನಲ್‌ನಲ್ಲಿ ಇಂಡೊನೇಷ್ಯಾದ ಮುಹ ಅಲ್ ಇಮ್ರಾನ್ ಎದುರು ಮೊದಲ ಸೆಟ್ ಸೋತರೂ ನಂತರ 21–19, 21–16 ರಲ್ಲಿ ಜಯಗಳಿಸಿದರು.


## ❖ ಪುರುಷರ ರಿಲೆ: ಚಿನ್ನ ಕಸಿದ ಬೋಟ್ಸ್‌ವಾನಾ


**ಸಂದರ್ಭ:** ರೋಮಾಂಚಕ ಹಣಾಹಣಿಯಲ್ಲಿ ಅಮೆರಿಕ ತಂಡವನ್ನು ಕೊನೆಯ ಲೆಗ್‌ನಲ್ಲಿ ಹಿಂದೆಹಾಕಿದ ಬೋಟ್ಸ್‌ವಾನಾ ತಂಡವು ವಿಶ್ವ ಅಥ್ಲೆಟಿಕ್ ಚಾಂಪಿಯನ್‌ಷಿಪ್‌ನ 4x400 ಮೀಟರ್ಸ್ ರಿಲೆ ಚಿನ್ನವನ್ನು ಬಾಚಿಕೊಂಡಿತು. ಈ ಓಟದಲ್ಲಿ ಚಿನ್ನ ಗೆದ್ದ ಆಫ್ರಿಕಾದ ಮೊದಲ ತಂಡವೆಂಬ ಹೆಗ್ಗಳಿಕೆಗೂ ಪಾತ್ರವಾಯಿತು.

- ಭಾನುವಾರ ಮಳೆ ಜೋರಾಗಿದ್ದು ಸ್ಪರ್ಧೆಗಳ ವೇಳಾಪಟ್ಟಿ ಏರುಪೇರಾಯಿತು. ಬೆಳಿಗ್ಗೆ ರನ್‌ಆಫ್‌ನಲ್ಲಿ ಕೆನ್ಯಾ ತಂಡವನ್ನು ಹಿಂದೆಹಾಕಿ ಫೈನಲ್ ತಲುಪಿದ್ದ ಪ್ರಬಲ ಅಮೆರಿಕವು ಚಿನ್ನ ಗೆಲ್ಲುವ ನೆಚ್ಚಿನ ತಂಡವಾಗಿತ್ತು. ಅಂತಿಮ ಲೆಗ್ ಇರುವಾಗ ಅಮೆರಿಕ ಮುಂದಿತ್ತು. ಆದರೆ 400 ಮೀ. ಓಟದಲ್ಲಿ ವೈಯಕ್ತಿಕ ಚಿನ್ನ ಗೆದ್ದಿದ್ದ, ಕಾಲಿನ್ ಕೆಬಿನಾಟ್ಸಿಪಿ ಅವರು ಮಳೆಯ ನಡುವೆ ಅತ್ಯಮೋಘವಾಗಿ ಅಂತಿಮ ಲೆಗ್ ಓಡಿ ಬೋಟ್ಸ್‌ವಾನಾಕ್ಕೆ ಐತಿಹಾಸಿಕ ಚಿನ್ನ ತಂದುಕೊಟ್ಟರು. ಈ ತಂಡ 2ನಿಮಿಷ 57.56 ಸೆಕೆಂಡುಗಳಲ್ಲಿ ಗುರಿತಲುಪಿತು.

Dr. Rajkumar IAS/KAS Academy

- ನಿಕೋಲಾಗೆ ಚಿನ್ನ: ಆಸ್ಟ್ರೇಲಿಯಾದ ನಿಕೋಲಾ ಒಲಿಸ್ಲೇಗರ್ಸ್ ಅವರು ಮಹಿಳೆಯರ ಹೈಜಂಪ್ ಚಿನ್ನ ಗೆದ್ದರು. ಮಳೆಯಿಂದ ಈ ಸ್ಪರ್ಧೆಯ ಕೊನೆಯ ಸುತ್ತಿನ ಯತ್ನಕ್ಕೆ ಸ್ಪರ್ಧಿಗಳು ಸಾಕಷ್ಟು ಕಾಯಬೇಕಾಯಿತು.
- ಎರಡು ಬಾರಿಯ ಒಲಿಂಪಿಕ್ ಬೆಳ್ಳಿ ವಿಜೇತೆ ನಿಕೋಲಾ 2.00 ಮೀ. ಜಿಗಿದು ಮೊದಲಿಗರಾದರು. ವಿಶ್ವದಾಖಲೆ ಹೊಂದಿರುವ ಉಕ್ರೇನ್‌ನ ಯರೊಸ್ಲಾವಾ ಮಹುಚಿಕಿ 2.02 ಮೀ. ಎತ್ತರಕ್ಕೆ ಜಿಗಿಯಲು ಉದ್ದೇಶಿಸಿದರೂ ವಿಫಲರಾದರು. ಪೋಲೆಂಡ್‌ನ ಮರಿಯಾ ಜೋಡ್ಜಿಕ್ (2.00) ಬೆಳ್ಳಿ ಗೆದ್ದರು. ಮಹುಚಿಕಿ ಅಂತಿಮವಾಗಿ ಸರ್ಬಿಯಾದ ಆ್ಯಂಜೆಲಿನಾ ಟೋಪಿಕ್ ಅವರೊಂದಿಗೆ 1.97 ಮೀ. ಜಿಗಿದು ಕಂಚಿನ ಪದಕ ಹಂಚಿಕೊಂಡರು.




## ❖ 'ನಾಡಹಬ್ಬ' ಕ್ಕೆ ಬಾನು ಚಾಲನೆ ಇಂದು

**ಸಂದರ್ಭ:** ರಾಜ್ಯದ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆ ಸಾರುವ ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಕ್ಷಣಗಣನೆ ಅರಂಭವಾಗಿದೆ.

- ಅಂತರರಾಷ್ಟ್ರೀಯ 'ಬುಕರ್' ಪ್ರಶಸ್ತಿ ಪುರಸ್ಕೃತರಾದ ಬಾನು ಮುಷ್ತಾಕ್ (ಸೆ.22 to ಅ.2 ರವರೆಗೆ ನಡೆಯುವ ಉತ್ಸವಕ್ಕೆ ಚಾಲನೆ ನೀಡ ಲಿದ್ದಾರೆ
- **ಇದೇ ಮೊದಲು: ಮೈಸೂರು ದಸರಾ ಉದ್ಘಾಟನೆಗೆ ಮುಸ್ಲಿಂ ಮಹಿಳೆಯನ್ನು ಆಯ್ಕೆ ಮಾಡಿರುವುದು ಇದೇ ಮೊದಲು.**

**ರಾಜವಂಶಸ್ಥರಿಂದ 'ಖಾಸಗಿ ದರ್ಬಾರ್'**

- **ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ರತ್ನಖಚಿತ ಸಿಂಹಾಸನದಲ್ಲಿ ಕುಳಿತು 11ನೇ ವರ್ಷದ 'ಖಾಸಗಿ ದರ್ಬಾರ್' ನಡೆಸಲಿದ್ದಾರೆ.**
- **ಗಜಪಡೆಯ ನಾಯಕ 'ಅಭಿಮನ್ಯು' ಆನೆ ಹೊರಲಿರುವ 750 ಕೆ.ಜಿ. ತೂಕದ ಚಿನ್ನದ ಅಂಬಾರಿಯಲ್ಲಿ** ಅಲಂಕೃತ ಚಾಮುಂಡೇಶ್ವರಿ ಉತ್ಸವ ಮೂರ್ತಿಗೆ ಮುಖ್ಯಮಂತ್ರಿ ಪುಷ್ಪಾರ್ಚನೆ ಮಾಡಿ ಉದ್ಘಾಟಿಸಲಿದ್ದಾರೆ.

## ❖ ಯುವ ಕನಸು ನುಚ್ಚು ನೂರು?: ಎಚ್‌-–1ಬಿ ವೀಸಾ ಶುಲ್ಕ ಹೆಚ್ಚಳ: ಸ್ಪಷ್ಟನೆಯಿಂದ ಭಾರತೀಯರು ಕೊಂಚ ನಿರಾಳ

**ಸಂದರ್ಭ:** ಅಮೆರಿಕದ ಐಟಿ ಉದ್ಯೋಗಿಗಳಾಗಿರುವ ಕೆಲವು ಭಾರತೀಯರು ತವರಿಗೆ ಬರುವುದಕ್ಕಾಗಿ ಸ್ಯಾನ್ ಫ್ರಾನ್ಸಿಸ್ಕೊ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಮಾನವನ್ನು ಏರಿದ್ದರು. ಸ್ವಲ್ಪ ಹೊತ್ತಿನಲ್ಲಿ ವಿಮಾನ ಹೊರಡುವುದಿತ್ತು. ಅಷ್ಟು ಹೊತ್ತಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಎಚ್‌-1ಬಿ ವೀಸಾದ ಅರ್ಜಿ ಶುಲ್ಕವನ್ನು 1 ಲಕ್ಷ ಡಾಲರ್‌ಗೆ (ಸುಮಾರು ₹88 ಲಕ್ಷ) ಏರಿಸುವ ಕಾರ್ಯಾದೇಶಕ್ಕೆ ಸಹಿ ಹಾಕಿದರು.

- ವಿಮಾನದಲ್ಲಿದ್ದ ಭಾರತೀಯರಿಗೆ ಈ ಸುದ್ದಿ ಸಿಕ್ಕಿದ್ದೇ ತಡ, ಆತಂಕಗೊಂಡರು. ತಮ್ಮನ್ನು ವಿಮಾನದಿಂದ ಕೆಳಗಿಳಿಸುವಂತೆ ವಿಮಾನದ ಸಿಬ್ಬಂದಿಗೆ ಕೇಳಿಕೊಂಡರು. **ಟಿಕೆಟ್‌ಗಳಿಗೆ ಮಾತ್ರವಲ್ಲ, ಅವರನ್ನು**

**ನೇಮಿಸಿಕೊಂಡಿರುವ ಮೆಟಾ, ಮೈಕ್ರೊಸಾಫ್ಟ್, ಗೂಗಲ್‌ನಂತಹ ತಂತ್ರಜ್ಞಾನ ಕ್ಷೇತ್ರದ ಬೃಹತ್ ಕಂಪನಿಗಳೂ ಈ ಆದೇಶದಿಂದ ಗಾಬರಿಗೊಂಡು ಈ ವೀಸಾದ ಅಡಿಯಲ್ಲಿ ಕೆಲಸ ಮಾಡುತ್ತಿರುವ ತಮ್ಮೆಲ್ಲಾ ಸಿಬ್ಬಂದಿಗೆ ದೇಶ ತೊರೆಯದಂತೆ ಸೂಚಿಸಿದವು.**

- **'ಅಮೆರಿಕವೇ ಮೊದಲು'** ಎಂದು ಹೇಳುತ್ತಿರುವ ಟ್ರಂಪ್ ಆಡಳಿತದ ನಿರ್ಧಾರ ಭಾರತದಲ್ಲಿ ಅದರಲ್ಲೂ ವಿಶೇಷವಾಗಿ ಮಾಹಿತಿ ತಂತ್ರಜ್ಞಾನ ವಲಯದಲ್ಲಿ ತಲ್ಲಣ ಸೃಷ್ಟಿಸಿದೆ.
- ಅಮೆರಿಕದ ನಿರ್ಧಾರವು ಭಾರತೀಯರ 'ಕುಟುಂಬಗಳನ್ನು ಗಲಿಬಿಲಿಗೊಳಿಸಲಿದೆ' ಎಂಬ ಭಾರತದ ವಿದೇಶಾಂಗ ಸಚಿವಾಲಯದ ಪ್ರತಿಕ್ರಿಯೆ ಕೂಡ ಟ್ರಂಪ್ ಆದೇಶದಿಂದ ಭಾರತೀಯರ ಮೇಲಾಗಲಿರುವ ಪರಿಣಾಮವನ್ನು ಒತ್ತಿ ಹೇಳುತ್ತದೆ. ಅದಕ್ಕೆ ಕಾರಣವೂ ಇದೆ.
- ಈ ವೀಸಾ ಯೋಜನೆಯ ಅತಿ ಹೆಚ್ಚು ಫಲಾನುಭವಿಗಳು ಭಾರತೀಯ ಯುವ ಜನರು. ಅಮೆರಿಕದಲ್ಲಿ ದುಡಿದು ಹಣ ಸಂಪಾದಿಸಬೇಕು ಎಂಬ ಅವರ ಕನಸನ್ನು ನನಸು ಮಾಡಿದ್ದು ಇದೇ ಎಚ್-1ಬಿ ವೀಸಾ. ಈ ವೀಸಾದ ಮೂಲಕ ಅಲ್ಲಿಗೆ ತೆರಳಿ ಒಂದಷ್ಟು ವರ್ಷ ಕೆಲಸ ಮಾಡಿ, ನಂತರ ಪೌರತ್ವ ಪಡೆದು ಅಲ್ಲಿಯೇ ನೆಲಸಿದ ಭಾರತೀಯರ ಸಂಖ್ಯೆ ದೊಡ್ಡದಿದೆ.
- ಹೀಗಿರುವಾಗ 2,000 ಡಾಲರ್‌ನಿಂದ 5,000 ಡಾಲರ್‌ವರೆಗೆ ಇದ್ದ ವೀಸಾ ಶುಲ್ಕವನ್ನು ದಿಢೀರ್ ಒಂದು ಲಕ್ಷ ಡಾಲರ್‌ಗೆ ಏರಿಸಿರುವುದು ಅಮೆರಿಕದಲ್ಲಿ ಕೆಲಸ ಮಾಡಬೇಕು, ನಂತರ ಅಲ್ಲಿಯೇ ನೆಲಸಬೇಕು ಎನ್ನುವ ದೇಶದ ಲಕ್ಷಾಂತರ ಯುವಕ-ಯುವತಿಯರ ಕನಸಿಗೆ ತಣ್ಣೀರು ಎರಚಿದೆ.
- ಈ ವೀಸಾದ ಅಡಿಯಲ್ಲಿ ಅಮೆರಿಕದಲ್ಲಿ ಈಗ ಕೆಲಸ ಮಾಡುತ್ತಿರುವವರೂ ಶನಿವಾರ ಆದೇಶ ಹೊರಬಿದ್ದ ತಕ್ಷಣ ಆತಂಕಗೊಂಡಿದ್ದರು. ತಮ್ಮನ್ನು ನೇಮಕ ಮಾಡಿಕೊಂಡ ಕಂಪನಿಗಳು ಲಕ್ಷ ಡಾಲರ್ ಶುಲ್ಕ ಭರಿಸದೇ ಇದ್ದರೆ, ಕೆಲಸ ಕಳೆದುಕೊಂಡು ಭಾರತಕ್ಕೆ ಮರಳಬೇಕಾದೀತು ಎಂಬ ಕಳವಳ ಅವರನ್ನು ಕಾಡಿತ್ತು. ಆದರೆ, ಶ್ವೇತಭವನದಿಂದ ಸ್ಪಷ್ಟನೆ ಹೊರಬಿದ್ದ ಬಳಿಕ ಅವರು ಕೊಂಚ ನಿರಾಳರಾಗಿದ್ದಾರೆ.
- ಶ್ವೇತ ಭವನದ ಆಡಳಿತ ನೀಡಿರುವ ಸ್ಪಷ್ಟನೆಯ ಪ್ರಕಾರ, ಹೊಸ ಶುಲ್ಕ ಹೊಸ ಅರ್ಜಿಗಳಿಗಷ್ಟೇ ಅನ್ವಯವಾಗುತ್ತದೆ (ಮುಂದಿನ ಲಾಟರಿ ಸೈಕಲ್‌ಗೆ). ಈ ವೀಸಾದಡಿ ಈಗ ಕೆಲಸ ಮಾಡುತ್ತಿರುವವರು ಹೊಸ ಶುಲ್ಕ ಪಾವತಿಸಬೇಕಾಗಿಲ್ಲ. ಅಲ್ಲದೇ ವೀಸಾ ಅವಧಿ ಮುಕ್ತಾಯಗೊಂಡ ನಂತರ ಸಲ್ಲಿಸಲಾಗುವ ನವೀಕರಣ ಅರ್ಜಿಗೂ ಇದು ಅನ್ವಯವಾಗುವುದಿಲ್ಲ. ಹಾಲಿ ವೀಸಾ ಹೊಂದಿರುವವರು ಈಗಿನಂತೆ ಹೊರ ದೇಶಗಳಿಗೆ ಹೋಗಬಹುದು, ಅಮೆರಿಕಕ್ಕೆ ಬರಬಹುದು. ಅದೇ ರೀತಿ, ಎಚ್-1ಬಿ ವೀಸಾಕ್ಕಾಗಿ ಪ್ರತಿ ವರ್ಷ ಲಕ್ಷ ಡಾಲರ್ ಶುಲ್ಕ ಪಾವತಿಸಬೇಕಾಗುತ್ತದೆ ಎಂದು ಆರಂಭದಲ್ಲಿ ವರದಿಯಾಗಿತ್ತು. ಆದರೆ, ಇದಕ್ಕೂ ಸ್ಪಷ್ಟನೆ ನೀಡಿರುವ ಅಧಿಕಾರಿಗಳು, ಈ ಶುಲ್ಕವು ವೀಸಾದ ಪೂರ್ಣ ಅವಧಿಗೆ ಅನ್ವಯವಾಗುತ್ತದೆ ಎಂದು ಹೇಳಿದ್ದಾರೆ.
- ಕಡಿಮೆಯಾಗಲಿದೆ ಅವಕಾಶ: ಹೊರದೇಶಗಳ ಕೌಶಲಯುಕ್ತ ವೃತ್ತಿಪರರನ್ನು ನೇಮಿಸಿಕೊಳ್ಳುವ ಕಂಪನಿಗಳು ಈ ವೀಸಾಕ್ಕಾಗಿ ಅರ್ಜಿ ಸಲ್ಲಿಸುತ್ತವೆ. ಶುಲ್ಕವನ್ನು ಭರಿಸುವುದೂ ಅವುಗಳೇ. ಶುಲ್ಕ ಹೆಚ್ಚಾಗಿರುವುದು ಕಂಪನಿಗಳಿಗೆ ಹೊರೆಯಾಗುವುದು ಖಂಡಿತ. ಹಾಗಾಗಿ, ವಿದೇಶ ವೃತ್ತಿಪರರನ್ನು ನೇಮಿಸುವುದಕ್ಕಾಗಿ ಅಷ್ಟು ಮೊತ್ತದ ಶುಲ್ಕ ನೀಡಲು ಅವುಗಳು ಹಿಂದೇಟು ಹಾಕಬಹುದು. ಇಲ್ಲವೇ ಹೆಚ್ಚು ಪರಿಣತಿ ಇರುವ ನಿರ್ದಿಷ್ಟ ವ್ಯಕ್ತಿಯನ್ನು ನೇಮಕ ಮಾಡಿಕೊಳ್ಳಲೇ ಬೇಕು ಎಂಬಂತಹ ಅನಿವಾರ್ಯ ಸನ್ನಿವೇಶದಲ್ಲಿ ಮಾತ್ರ ಈ ವೀಸಾದಡಿ ಕಂಪನಿಗಳು ನೇಮಕಾತಿಗೆ ಮುಂದಾಗಬಹುದು. ನೇಮಕ ಮಾಡಿದರೂ, ಉದ್ಯೋಗಿಗಳ ಸಂಖ್ಯೆ ತುಂಬಾ ಕಡಿಮೆ ಇರಬಹುದು. ವೀಸಾ ನವೀಕರಣಕ್ಕೆ ಹೊಸ ಶುಲ್ಕ ಅನ್ವಯವಾಗುವುದಿಲ್ಲ ಎಂದು ಸ್ಪಷ್ಟನೆ ನೀಡಿರುವುದು ಸಮಾಧಾನಕರ ಸಂಗತಿ. ನವೀಕರಣಕ್ಕೆ ಈ ಶುಲ್ಕ ಅನ್ವಯವಾಗಿದ್ದರೆ ಸಾವಿರಾರು ಭಾರತೀಯರು ಕೆಲಸ ಕಳೆದುಕೊಳ್ಳುತ್ತಿದ್ದರು ಎಂಬುದು ತಜ್ಞರ ಅಭಿಪ್ರಾಯ.

**<u>ಭಾರತೀಯರೇ ಫಲಾನುಭವಿಗಳು</u>**

- 'ಎಚ್1–ಬಿ' ಯು ವಲಸೆಯೇತರ ವೀಸಾ. ಹೊರದೇಶಗಳ ಪರಿಣತ ವೃತ್ತಿಪರರಿಗೆ ಅಮೆರಿಕದಲ್ಲಿ ಕೆಲಸ ನೀಡಲು ಅಲ್ಲಿನ ಕಂಪನಿಗಳಿಗೆ ಇದು ಅವಕಾಶ ನೀಡುತ್ತದೆ. ಇದು ತಾತ್ಕಾಲಿಕ ವೀಸಾ ಆಗಿದ್ದು, ಇದಕ್ಕೆ ಮೂರರಿಂದ ಆರು ವರ್ಷಗಳ ಅವಧಿ ಇರುತ್ತದೆ.
- ಈ ವೀಸಾದ ಅಡಿಯಲ್ಲಿ ಅಮೆರಿಕಕ್ಕೆ ತೆರಳುವವರಲ್ಲಿ ಭಾರತೀಯರೇ ಮುಂದೆ ಇದ್ದಾರೆ. ಭಾರತದ ಎಂಜಿನಿಯರ್‌ಗಳು ಹಾಗೂ ಇತರ ಕ್ಷೇತ್ರಗಳ ತಜ್ಞರನ್ನು ತಂತ್ರಜ್ಞಾನ ಹಾಗೂ ಇತರ ಕಂಪನಿಗಳು ಕರೆಸಿಕೊಳ್ಳುತ್ತವೆ. ಅಮೆರಿಕ ಸರ್ಕಾರ ವಿತರಿಸುವ ಬಹುಪಾಲು ವೀಸಾಗಳ ಫಲಾನುಭವಿಗಳು ತಂತ್ರಜ್ಞಾನ ಕಂಪನಿಗಳು. ಕಂಪ್ಯೂಟರ್‌ಗೆ ಸಂಬಂಧಿಸಿದ ಉದ್ಯೋಗದಲ್ಲಿರುವ ಶೇ 65ರಷ್ಟು ಮಂದಿ ಈ ವೀಸಾದ ಫಲಾನುಭವಿಗಳು.
- **ಪ್ಯೂ ರಿಸರ್ಚ್ ವರದಿ ಪ್ರಕಾರ 2023ರಲ್ಲಿ ಎಚ್1– ಬಿ ವೀಸಾಗಳಲ್ಲಿ ಶೇ 73ರಷ್ಟು ಭಾರತೀಯರು ಪಡೆದಿದ್ದರು. ಚೀನಾದ ನಾಗರಿಕರ ಪಾಲು ಶೇ 12. ಉಳಿದ ಎಲ್ಲ ದೇಶಗಳ ನಾಗರಿಕರಿಗೆ ಸಿಕ್ಕಿದ್ದು ಶೇ 15ರಷ್ಟು ವೀಸಾಗಳು.**

**<u>ಶುಲ್ಕ ಹೆಚ್ಚಳ: ಟ್ರಂಪ್ ವಾದವೇನು?</u>**

- ಟ್ರಂಪ್ ಅವರು ತಮ್ಮ ಕಾರ್ಯಾದೇಶದಲ್ಲಿ, ಎಚ್-1ಬಿ ವೀಸಾ ಅರ್ಜಿ ಶುಲ್ಕ ಹೆಚ್ಚಿಸುವುದಕ್ಕೆ ಏನು ಕಾರಣ ಎಂಬುದನ್ನೂ ವಿವರಿಸಿದ್ದಾರೆ. ಕಂಪನಿಗಳು ಈ ವೀಸಾ ಯೋಜನೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿವೆ ಎಂದು ಅವರು ಆರೋಪಿಸಿದ್ದಾರೆ. ಸ್ಥಳೀಯರಿಗೆ ಹೆಚ್ಚು ಸಂಬಳ ನೀಡಬೇಕಾಗುತ್ತದೆ ಎಂಬ ಕಾರಣಕ್ಕೆ ಅವರಿಗೆ ಅವಕಾಶ ನೀಡದೆ, ಹೊರದೇಶಗಳಿಂದ ಕಡಿಮೆ ಸಂಬಳಕ್ಕೆ ವೃತ್ತಿಪರರನ್ನು ಕರೆಸಿಕೊಂಡು ಉದ್ಯೋಗ ನೀಡಲಾಗುತ್ತದೆ ಎಂದು ಅವರು ಹೇಳಿದ್ದಾರೆ.
- **ವಿಜ್ಞಾನ, ತಂತ್ರಜ್ಞಾನ ಎಂಜಿನಿಯರಿಂಗ್ ಮತ್ತು ಗಣಿತ ಕ್ಷೇತ್ರದಲ್ಲಿ (ಸ್ಟೆಮ್) ದುಡಿಯುತ್ತಿರುವ ವಿದೇಶಿ ಉದ್ಯೋಗಿಗಳ ಸಂಖ್ಯೆ 2000 ಮತ್ತು 2019ರ ನಡುವೆ ದುಪ್ಪಟ್ಟಾಗಿದೆ. ಐಟಿ ಕಂಪನಿಗಳು ಈ ವೀಸಾ ಯೋಜನೆಯನ್ನು ಅತಿ ಹೆಚ್ಚು ದುರ್ಬಳಕೆ ಮಾಡಿಕೊಂಡಿವೆ. ಕಳೆದ ಐದು ವರ್ಷಗಳಲ್ಲಿ ಕಂಪನಿಗಳು ಎಚ್-1ಬಿ ವೀಸಾ ಪಡೆಯುವ ಪ್ರಮಾಣ ಶೇ 65ರಷ್ಟು ಹೆಚ್ಚಾಗಿದೆ ಎಂದು ಟ್ರಂಪ್ ಅವರು ಆದೇಶದಲ್ಲಿ ವಿವರಿಸಿದ್ದಾರೆ.**
- ಕಂಪನಿಗಳು ವರ್ಷದಿಂದ ವರ್ಷಕ್ಕೆ ಹೆಚ್ಚೆಚ್ಚು ಎಚ್-1ಬಿ ವೀಸಾಕ್ಕೆ ಅರ್ಜಿ ಸಲ್ಲಿಸಿ ವಿದೇಶದವರಿಗೆ ಉದ್ಯೋಗ ನೀಡುತ್ತಿವೆ. ಅದೇ ಸಮಯದಲ್ಲಿ ಹೆಚ್ಚು ಸಂಬಳದ ಕಾರಣಕ್ಕೆ ಅಮೆರಿಕದವರನ್ನು ಕೆಲಸದಿಂದ ತೆಗೆಯುತ್ತಿವೆ. ಎಂದು ಆರೋಪಿಸಿರುವ ಅವರು, ಇದಕ್ಕೆ ಹಲವು ಉದಾಹರಣೆಗಳನ್ನೂ ನೀಡಿದ್ದಾರೆ. ವೀಸಾ ಯೋಜನೆಯ ದುರ್ಬಳಕೆ ತಡೆಯಲು ಮತ್ತು ಸ್ಥಳೀಯರಿಗೆ ಉದ್ಯೋಗ ಸಿಗುವಂತೆ ಮಾಡಲು ವೀಸಾ ಅರ್ಜಿ ಶುಲ್ಕ ಹೆಚ್ಚಿಸುವುದು ಅನಿವಾರ್ಯ ಎಂದು ಟ್ರಂಪ್ ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ.
- ಈ ಆದೇಶ ಒಂದು ವರ್ಷ (ಸೆ.21 2026) ಜಾರಿಯಲ್ಲಿರಲಿದೆ ಎಂದು ಕಾರ್ಯಾದೇಶದಲ್ಲಿ ಹೇಳಲಾಗಿದೆ. ಒಂದು ವೇಳೆ, ಅದರ ಒಳಗಾಗಿ ಅವಧಿಯನ್ನು ವಿಸ್ತರಿಸದೇ ಇದ್ದರೆ ಆದೇಶ ಅನೂರ್ಜಿತ ಗೊಳ್ಳಲಿದೆ.

**ಸದ್ಬಳಕೆಗೆ ಅವಕಾಶ**

- ಟ್ರಂಪ್ ಅವರ ಈ ಕ್ರಮವನ್ನು ಸದ್ಬಳಕೆ ಮಾಡುವುದಕ್ಕೆ ಭಾರತಕ್ಕೆ ಅವಕಾಶ ಇದೆ. ಅಮೆರಿಕದಲ್ಲಿನ ಕಂಪನಿಗಳು ಪರಿಣತ ವೃತ್ತಿಪರರನ್ನು ನೇಮಕ ಮಾಡಿಕೊಳ್ಳದೇ ಇದ್ದರೆ, ಅವರು ಭಾರತದಲ್ಲೇ ಉಳಿಯಲಿದ್ದಾರೆ. ಅವರಿಗೆ ಇಲ್ಲೇ ಉತ್ತಮ ಅವಕಾಶ ಸಿಕ್ಕಿದರೆ ದೇಶದಲ್ಲಿ ಉದ್ಯಮಗಳು ಬೆಳೆಯುತ್ತವೆ. ಇದು ದೇಶದ ಅಭಿವೃದ್ಧಿಗೂ ಅನುಕೂಲ ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ.
- 'ಅಮೆರಿಕದಿಂದ ವಾಪಸ್ ಆಗುವ ಮತ್ತು ದೇಶದಲ್ಲಿರುವ ತಜ್ಞ ಪ್ರತಿಭೆಗಳನ್ನು ದೇಶದ ಸಾಫ್ಟ್‌ವೇರ್, ಕ್ಲೌಡ್ ಮತ್ತು ಸೈಬರ್‌ಭದ್ರತೆ ಸೇರಿದಂತೆ ಇನ್ನಿತರ ಕ್ಷೇತ್ರಗಳಲ್ಲಿ ಬಳಸಿಕೊಂಡು ಲಾಭ ಪಡೆಯುವ ಯೋಜನೆಯನ್ನು ಭಾರತ ರೂಪಿಸಬೇಕು. ಆ ಮೂಲಕ 'ಡಿಜಿಟಲ್ ಸ್ವರಾಜ್ ಮಿಷನ್' ಗೆ ಉತ್ತೇಜನ ನೀಡಬೇಕು' ಎಂದು ಜಿಟಿಆರ್‌ಐ ಸಂಸ್ಥಾಪಕ ಅಜಯ್ ಶ್ರೀವಾಸ್ತವ ಹೇಳಿದ್ದಾರೆ.

Dr. Rajkumar IAS/KAS Academy

**‘ಅಮೆರಿಕಕ್ಕೇ ನಷ್ಟ’**

- ಟ್ರಂಪ್ ಅವರ ಈ ನಿರ್ಧಾರದಿಂದ ಭಾರತಕ್ಕಿಂತಲೂ ಅಮೆರಿಕಕ್ಕೆ ಹೆಚ್ಚು ನಷ್ಟ ಆಗಬಹುದು ಎಂದು ಚಿಂತಕರ ಚಾವಡಿ ಜಿಟಿಆರ್‌ಐ ಹೇಳಿದೆ.
- ‘ಅಮೆರಿಕದಲ್ಲಿ ಭಾರತದ ಐಟಿ ಕಂಪನಿಗಳು ಈಗಾಗಲೇ ಶೇ 50ರಿಂದ ಶೇ 80ರಷ್ಟು ಸ್ಥಳೀಯರನ್ನೇ ನೇಮಕ ಮಾಡಿಕೊಂಡಿವೆ. ಟ್ರಂಪ್ ಕ್ರಮವು ಹೆಚ್ಚಿನ ಸಂಖ್ಯೆಯಲ್ಲಿ ಹೊಸ ಉದ್ಯೋಗಗಳನ್ನು ಸೃಷ್ಟಿಸದು. ಭಾರತೀಯರನ್ನು ನೇಮಕ ಮಾಡಿಕೊಳ್ಳುವುದಕ್ಕೆ ಕಂಪನಿಗಳು ಹೆಚ್ಚು ಖರ್ಚು ಮಾಡಬೇಕಾಗುತ್ತದೆ. ಇದನ್ನು ತಪ್ಪಿಸಲು ಕಂಪನಿಗಳು, ಹೊರದೇಶಗಳಿಂದಲೇ ತಮ್ಮ ಕಂಪನಿಗಳ ಕಾರ್ಯಾಚರಣೆಯನ್ನು ತೀವ್ರಗೊಳಿಸಬಹುದು. ಉದಾಹರಣೆಗೆ, ತಮ್ಮ ಉದ್ಯೋಗಿಗಳ ಮೂಲಕ ಭಾರತದಿಂದಲೇ ಕಾರ್ಯಾಚರಣೆಯನ್ನು ಹೆಚ್ಚಿಸಬಹುದು’ ಎಂದು ಅದು ಅಭಿಪ್ರಾಯಪಟ್ಟಿದೆ.
- ಟ್ರಂಪ್ ನೀತಿಯಿಂದಾಗಿ ಭಾರತದ ಐಟಿ ವಲಯವು ಅಮೆರಿಕದ ಪ್ರಾಜೆಕ್ಟ್‌ಗಳಿಗಾಗಿ ತನ್ನ ಕಾರ್ಯಾಚರಣೆಯನ್ನು ಸಂಪೂರ್ಣವಾಗಿ ಬದಲಾಯಿಸಬೇಕಾಗಬಹುದು ಎಂದು ತಜ್ಞರು ವಿಶ್ಲೇಷಿಸಿದ್ದಾರೆ.
- ಭಾರತದ ಐಟಿ ವಲಯವು ತನ್ನ ಒಟ್ಟಾರೆ ಆದಾಯದಲ್ಲಿ ಅಮೆರಿಕದಿಂದಲೇ ಶೇ 57ರಷ್ಟು ಆದಾಯ ಪಡೆಯುತ್ತದೆ.

## ❖ ಏಷ್ಯಾದ ಮೊದಲ ಮಹಿಳಾ ರೈಲು ಚಾಲಕಿ ಸುರೇಖಾ ನಿವೃತ್ತಿ

**ಸಂದರ್ಭ:** ಇದು ಮಹಿಳೆಯರ ಕೈಲಾಗುವಂಥ ಕೆಲಸವಲ್ಲ ಎನ್ನುತ್ತಿದ್ದ ಕಾಲದಲ್ಲಿಯೇ ರೈಲು ಎಂಜಿನಿಯರ್ ಆಗಿ ಉದ್ಯೋಗ ಪಡೆದವರು ಸುರೇಖಾ ಯಾದವ್. ಮಹಿಳೆಯೊಬ್ಬರು ರೈಲು ಚಲಾಯಿಸಿದ ಏಷ್ಯಾದ ಮೊದಲಿಗರಿವರು. 36 ವರ್ಷದ ವೃತ್ತಿ ಜೀವನ ಮುಗಿಸಿದ ಸುರೇಖಾ ಅವರು ಇದೇ 30ರಂದು ನಿವೃತ್ತಿಯಾಗಲಿದ್ದಾರೆ.

- **1988ರಲ್ಲಿ ಇವರು ರೈಲು ಎಂಜಿನಿಯರ್ ಆಗಿ ತಮ್ಮ ವೃತ್ತಿ ಆರಂಭಿಸಿ ದರು. ಗುರಿ ಸಾಧನೆ, ಹಿಡಿದ ಛಲ ಬಿಡದಿರುವುದು ಮತ್ತು ಅತ್ಯಂತ ಸವಾಲಿನ ವೃತ್ತಿರಂಗದಲ್ಲಿನ ಲಿಂಗ ತಾರ ತಮ್ಯದ ಅಡೆತಡೆಗಳನ್ನು ಮೀರಿದ ಇವರ ಜೀವನಗಾಥೆಯೇ ಅಸಾಧಾರಣ ವಾದುದು**. ಅವರಿಗೀಗ 60 ವರ್ಷ.
- ಗೂಡ್ಸ್ ರೈಲಿನ ಚಾಲಕಿಯಾಗಿ ಅವರು ತಮ್ಮ ವೃತ್ತಿ ಆರಂಭಿಸಿದರು. ಬಳಿಕ, ಮುಂಬೈನ ಲೋಕಲ್ ರೈಲುಗಳಲ್ಲಿ ಕಾರ್ಯನಿರ್ವಹಿಸಿದರು. ಪ್ರತಿಷ್ಠಿತ ‘ಡೆಕ್ಕನ್ ಕ್ವೀನ್’ ನನ್ನೂ ಇವರು ಚಲಾಯಿಸಿದ್ದಾರೆ. ಆಧುನಿಕ ಕಾಲದ ವಂದೇ ಭಾರತ್ ಎಕ್ಸ್‌ಪ್ರೆಸ್ ಅನ್ನು ಚಲಾಯಿಸಿದ್ದಾರೆ. ವಿಶೇಷವೆಂದರೆ, ಇಷ್ಟೊಂದು ವೈವಿಧ್ಯಮಯ ರೈಲುಗಳನ್ನು ಚಲಾಯಿಸಿದ ಮೊದಲ ಮಹಿಳೆಯೂ ಇವರೇ ಆಗಿದ್ದಾರೆ.
- ‘ಈ ವೃತ್ತಿ ಆಯ್ಕೆ ಮಾಡಿಕೊಳ್ಳಲು ಪೋಷಕರು ನನಗೆ ಬೇಡ ಎನ್ನಲೇ ಇಲ್ಲ’ ಎನ್ನುವ ಸುರೇಖಾ ಅವರು ಹುಟ್ಟಿದ್ದು ಮಹಾರಾಷ್ಟ್ರದ ಸತಾರ ಜಿಲ್ಲೆಯಲ್ಲಿ. ಹೈಸ್ಕೂಲ್ ಮುಗಿಸಿದ ಬಳಿಕ ಇವರು ಎಲೆಕ್ಟ್ರಿಕಲ್ ಎಂಜಿನಿಯರಿಂಗ್‌ನಲ್ಲಿ ಡಿಪ್ಲೊಮಾ ಮುಗಿಸಿದರು. ಸುರೇಖಾ ಅವರ ಪತಿ ಪೊಲೀಸ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇವರ ಇಬ್ಬರು ಮಕ್ಕಳು ಎಂಜಿನಿಯರ್‌ಗಳು.
- **ಸುರೇಖಾ ಹಲವು ಮೊದಲುಗಳಿಗೆ ಹೆಸರಾದವರು. 1989ರಲ್ಲಿ ಇವರ ಸಹಾಯಕ ಲೋಕೋ ಚಾಲಕಿಯಾದರು. 1996ರಲ್ಲಿ ಗೂಡ್ಸ್ ರೈಲು ಚಾಲಕಿಯಾದರು. 2000ರಲ್ಲಿ ರೈಲು ಚಾಲಕಿಯಾದರು. 2010ರಲ್ಲಿ ಘಾಟ್ ಡ್ರೈವರ್ ಆದರು. 2023ರಲ್ಲಿ ವಂದೇ ಭಾರತ್ ಎಕ್ಸ್‌ಪ್ರೆಸ್ ಚಲಾಯಿಸಿದರು.**
- ಮೋದಿ ಅವರು ಮೂರನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ ಸಮಾರಂಭಕ್ಕೆ ಸುರೇಖಾ ಅವರನ್ನು ಮುಖ್ಯ ಅತಿಥಿಯಾಗಿ ಆಹ್ವಾನಿಸಲಾಗಿತ್ತು.

**‘ಸೇವೆ ಅಜರಾಮರ’**



Dr. Rajkumar Academy

- ತಮಗೆ ಎದುರಾದ ಎಲ್ಲ ಅಡೆತಡೆಗಳನ್ನು ದಾಟಿದವರು. ಅಸಂಖ್ಯ ಮಹಿಳೆಯರಿಗೆ ಸ್ಫೂರ್ತಿದಾಯಕರು. ಯಾವುದೇ ಕನಸನ್ನೂ ನನಸು ಮಾಡಿಕೊಳ್ಳುವುದು ಸಾಧ್ಯ ಎಂದು ತೋರಿಸಿಕೊಟ್ಟವರು. ಭಾರತೀಯ ರೈಲ್ವೆಯಲ್ಲಿ ಮಹಿಳಾ ಸಬಲೀಕರಣದ ರೂಪಕವಾಗಿ ಸುರೇಖಾ ಅವರ ವೃತ್ತಿ ಜೀವನವು ಅಜರಾಮರ


**ಒಮ್ಮೆಲೆ ಹೆಚ್ಚಿಸಿದರೆ ಹೊರೆ**

- ಐದು-ಹತ್ತು ವರ್ಷಗಳಿಗೊಮ್ಮೆ ಟಿಕೆಟ್ ದರ ಒಮ್ಮೆಲೇ ಹೆಚ್ಚಿಸಿದರೆ ಪ್ರಯಾಣಿಕರಿಗೂ ಹೊರೆಯಾಗುತ್ತದೆ. ಕಾಲಕಾಲಕ್ಕೆ ಅಲ್ಪ ಪ್ರಮಾಣದಲ್ಲಿ ವೈಜ್ಞಾನಿಕವಾಗಿ ದರ ಏರಿಕೆ ಮಾಡಿದಾಗ ಹೊರೆಯಾಗುವುದು ತಪ್ಪಲಿದೆ. ಅಲ್ಲದೇ ರಾಜಕೀಯ ಹಿತಾಸಕ್ತಿಗಳಿಂದ ದೂರ ಇದ್ದು, ಸ್ವತಂತ್ರವಾಗಿ ಸಮಿತಿಯು ಕಾರ್ಯನಿರ್ವಹಿಸುವುದರಿಂದ ಸಂಸ್ಥೆಗಳಿಗೂ ಒಳಿತಾಗಲಿದೆ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

## ❖ ನೌಕರರ ಆರೋಗ್ಯಕ್ಕೆ 'ಸಂಜೀವಿನಿ'

ಸಂದರ್ಭ: ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ಚಿಕಿತ್ಸೆ ಒದಗಿಸುವ 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ' (ಕೆಎಎಸ್‌ಎಸ್) ಅ.1ರಿಂದ ಅಧಿಕೃತವಾಗಿ ಜಾರಿಯಾಗಲಿದೆ.

- ಹಲವು ವರ್ಷಗಳ ಹಿಂದೆಯೇ ಯೋಜನೆ ರೂಪಿಸಲಾಗಿತ್ತಾದರೂ ಕೆಲ ತಾಂತ್ರಿಕ ಕಾರಣಗಳಿಂದ ಅನುಷ್ಠಾನ ವಿಳಂಬವಾಗಿತ್ತು.
- ರಾಜ್ಯದ ಸುಮಾರು 5.20 ಲಕ್ಷ ಸರ್ಕಾರಿ ನೌಕರರು, ನಿಗಮ, ಮಂಡಳಿ, ಅನುದಾನಿತ ಸಂಸ್ಥೆಗಳ 3 ಲಕ್ಷ ಸಿಬ್ಬಂದಿ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ಪ್ರಯೋಜನ ಸಿಗಲಿದೆ.




- **ಜ್ಯೋತಿ ಸಂಜೀವಿನಿ ಯೋಜನೆಯಲ್ಲಿ ಪುರುಷ ನೌಕರರ ತಂದೆ-ತಾಯಿಗೆ ಮಾತ್ರ ಸಿಗುತ್ತಿದ್ದ ಆರೋಗ್ಯ ಸೌಲಭ್ಯವನ್ನು ಈ ಬಾರಿ ಮಹಿಳಾ ನೌಕರರ ತಂದೆ-ತಾಯಿಗೂ ವಿಸ್ತರಿಸಲಾಗಿದೆ.**
- **ಸುವರ್ಣ ಕರ್ನಾಟಕ ಆರೋಗ್ಯ ಸುರಕ್ಷಾ ಟ್ರಸ್ಟ್ (ಎಸ್‌ಎಎಸ್‌ಟಿ) ಯೋಜನೆಯ ಅನುಷ್ಠಾನದ ಸಂಸ್ಥೆಯಾಗಿ** ಹೊಣೆ ನಿರ್ವಹಿಸಲಿದ್ದು, ಎಲ್ಲ ವರ್ಗದ ನೌಕರರು **ಪ್ರತಿ ತಿಂಗಳು** ತಮ್ಮ ಪಾಲಿನ ಕಂತು ಪಾವತಿಸಬೇಕಿದೆ. ಯೋಜನೆ ವ್ಯಾಪ್ತಿಗೆ ಒಳಪಡಿಸಲು ಇಚ್ಛಿಸದವರು ಅ.18ರ ಒಳಗೆ ತಮ್ಮ ಮೇಲಧಿಕಾರಿಗಳ ಮೂಲಕ ಲಿಖಿತ ಆಕ್ಷೇಪ ಸಲ್ಲಿಸಬೇಕು ಎಂದು ಆದೇಶದಲ್ಲಿ ವಿವರಿಸಲಾಗಿದೆ.

## ❖ 71ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳು



ನವದೆಹಲಿಯಲ್ಲಿ ಮಂಗಳವಾರ ನಡೆದ 71ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಲಯಾಳ ಭಾಷೆಯ ಖ್ಯಾತ ನಟ ಮೋಹನ್ ಲಾಲ್ (ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪುರಸ್ಕೃತ) ಅವರನ್ನು ಶ್ರೇಷ್ಠ ನಟ ಪ್ರಶಸ್ತಿ ಪಡೆದ ಶಾರುಕ್ ಖಾನ್ ಅವರು ಆಲಂಗಿಸಿದರು. ಶ್ರೇಷ್ಠ ನಟಿ ಪ್ರಶಸ್ತಿ ಪುರಸ್ಕೃತೆ ರಾಣಿ ಮುಖರ್ಜಿ ಅವರೂ ಇದ್ದರು (ಎಡ ಚಿತ್ರ) –ಪಿಟಿಐ ಚಿತ್ರ. 'ಕಂದೀಲು' ಚಿತ್ರಕ್ಕಾಗಿ 'ಅತ್ಯುತ್ತಮ ಕನ್ನಡ ಸಿನಿಮಾ ಪ್ರಶಸ್ತಿ'ಯನ್ನು ನಿರ್ದೇಶಕಿ ಯಶೋದ ಪ್ರಕಾಶ್ ಕೊಟ್ಟುಕತ್ತೀರ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು

### ಖಾಸಗಿ ವಲಯದ ಉದ್ಯೋಗಿಗಳ ದೀರ್ಘಾವಧಿಯ ಸಮಸ್ಯೆ ನಿವಾರಣೆ

# ಇಪಿಎಫ್ ವಿಮೆ: ನಿಯಮ ಸರಳ

**ಖಾಸಗಿ ವಲಯದಲ್ಲಿ ಕೆಲಸ ಮಾಡುವ ಉದ್ಯೋಗಿಗಳಿಗೂ ಜೀವ ವಿಮೆಯ ಸೌಲಭ್ಯ ಕಲ್ಪಿಸುವುದಕ್ಕಾಗಿ ಜಾರಿಗೆ ತರಲಾಗಿರುವ ಉದ್ಯೋಗಿಗಳ ಭವಿಷ್ಯ ನಿಧಿ (ಇಪಿಎಫ್) ಠೇವಣಿ ಆಧಾರಿತ ವಿಮಾ ಯೋಜನೆಯ (ಇಡಿಎಲ್ಐ) ನಿಯಮಗಳನ್ನು ಸರಳೀಕರಿಸಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಇತ್ತೀಚೆಗೆ ಅಧಿಸೂಚನೆ ಹೊರಡಿಸಿದೆ. ಯೋಜನೆಗೆ ಸಂಬಂಧಿಸಿದ ಕೆಲವು ಷರತ್ತುಗಳನ್ನು ತೆಗೆದುಹಾಕಿರುವುದರಿಂದ ಕಡಿಮೆ ವೇತನ ಹೊಂದಿರುವ ಮತ್ತು ಪದೇ ಪದೇ ಕೆಲಸ ಬದಲಾಯಿಸುವ ಉದ್ಯೋಗಿಗಳಿಗೆ ನೆರವಾಗಲಿದೆ**

• ಕೆ.ಎಚ್.ಓಬಳೇಶ್

ಕುಟುಂಬದಲ್ಲಿ ದುಡಿಯುವ ವ್ಯಕ್ತಿ ಆಕಸ್ಮಿಕವಾಗಿ ಮೃತಪಟ್ಟರೆ ಆ ಕುಟುಂಬ ಎದುರಿಸಬೇಕಾಗುವ ಸವಾಲುಗಳು ಒಂದೆರಡಲ್ಲ. ಇಡೀ ಕುಟುಂಬ ಆರ್ಥಿಕ ಮುಗ್ಗಟ್ಟಿಗೆ ಸಿಲುಕುತ್ತದೆ. ಅವಲಂಬಿತರು ಬದುಕಿನ ಬಂಡಿ ಎಳೆಯಲು ಕಷ್ಟಪಡುತ್ತಾರೆ. ಜೀವನದ ಅಂಥ ಅನಿರೀಕ್ಷಿತ ಅವಘಡಗಳಿಂದ ರಕ್ಷಣೆ ನೀಡುವುದು ವಿಮಾ ಸೌಲಭ್ಯ. ದೇಶದಲ್ಲಿ ಖಾಸಗಿ ವಲಯದಲ್ಲಿ ದುಡಿಯುವವರ ಸಂಖ್ಯೆ ಹೆಚ್ಚಿದೆ. ಆದರೆ, ಇಂದಿನ ಧಾವಂತದ ಬದುಕಿನಲ್ಲಿ ವಿಮೆಗೆ ಆದ್ಯತೆ ನೀಡುವವರು ಕಡಿಮೆ. ಬಹುತೇಕರ ಆದ್ಯತೆಯ ಪಟ್ಟಿಯಲ್ಲಿ ವಿಮೆಯದ್ದು ಕೊನೆಯ ಸ್ಥಾನ.

ಸರ್ಕಾರಿ ನೌಕರರಿಗೆ ಹೋಲಿಸಿದರೆ ಖಾಸಗಿ ವಲಯದ ಉದ್ಯೋಗಿಗಳಿಗೆ ಸಾಮಾಜಿಕ ಭದ್ರತಾ ಸೌಲಭ್ಯ ಅತ್ಯಲ್ಪ. ಹಾಗಾಗಿಯೇ, ಖಾಸಗಿ ವಲಯದ ಸಂಬಳ ಪಡೆಯುವ ಉದ್ಯೋಗಿಗಳಿಗೆ ಜೀವ ವಿಮೆಯ ಸೌಲಭ್ಯ ಕಲ್ಪಿಸಲು ಕೇಂದ್ರ ಸರ್ಕಾರವು 1976ರಲ್ಲಿ ಉದ್ಯೋಗಿಯ ಠೇವಣಿ ಆಧಾರಿತ ವಿಮಾ ಯೋಜನೆಯನ್ನು (ಇಡಿಎಲ್ಐ- ಎಂಪ್ಲಾಯೀಸ್ ಡೆಪಾಸಿಟ್ ಲಿಂಕ್ಡ್ ಇನ್ಶೂರೆನ್ಸ್ ಸ್ಕೀಮ್) ಪರಿಚಯಿಸಿತು. ನೌಕರರ ಭವಿಷ್ಯ ನಿಧಿ ಸಂಘಟನೆಯು (ಇಪಿಎಫ್‌ಒ) ಇಪಿಎಫ್ ಖಾತೆದಾರರಿಗೆ ಒದಗಿಸುವ ವಿಮಾ ರಕ್ಷಣೆ ಇದಾಗಿದೆ. ಸೇವಾವಧಿಯಲ್ಲಿ ವಿಮೆಗೆ ಒಳಪಟ್ಟ ವ್ಯಕ್ತಿಯು (ಉದ್ಯೋಗಿ) ಮೃತಪಟ್ಟ ಸಂದರ್ಭದಲ್ಲಿ, ಅವರ ಕುಟುಂಬಕ್ಕೆ ವಿಮಾ ಮೊತ್ತ ಸಿಗಲಿದೆ.

**ಸರಳಗೊಂಡ ನಿಯಮಗಳು:** ಸದ್ಯ ಈ ವಿಮೆ ಪಡೆಯಲು ನಿಗದಿಪಡಿಸಿದ್ದ ಷರತ್ತುಗಳನ್ನು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಸಡಿಲಗೊಳಿಸಿದೆ. ಇದು ಉದ್ಯೋಗಿಗಳ ಪಾಲಿಗೆ ವರದಾನವಾಗಿದೆ.

1. ಈ ಮೊದಲು ಉದ್ಯೋಗಿ ಮೃತಪಟ್ಟ ನಂತರ ಅವರ ಭವಿಷ್ಯ ನಿಧಿ (ಪಿ.ಎಫ್) ಖಾತೆಯಲ್ಲಿರುವ ಮೊತ್ತ ಆಧರಿಸಿ ಸಂತ್ರಸ್ತ ಕುಟುಂಬಕ್ಕೆ ಸಿಗಬೇಕಾದ ವಿಮಾ ಪರಿಹಾರವನ್ನು ಲೆಕ್ಕ ಹಾಕಲಾಗುತ್ತಿತ್ತು. ಪ್ರಸ್ತುತ ಆ ನಿಯಮವನ್ನು ತೆಗೆದುಹಾಕಲಾಗಿದೆ.

ಇನ್ನು ಮುಂದೆ ಇಪಿಎಫ್‌ಒ ಚಂದಾದಾರರಾದ ಯಾವುದೇ ಉದ್ಯೋಗಿ ಕೆಲಸದಲ್ಲಿ ಇರುವಾಗ ಮೃತಪಟ್ಟರೆ ಅವರ ಪಿ.ಎಫ್. ಖಾತೆಯಲ್ಲಿ ₹50 ಸಾವಿರಕ್ಕಿಂತ ಕಡಿಮೆ ಮೊತ್ತವಿದ್ದರೂ ಅವರ ಕುಟುಂಬಕ್ಕೆ ಕನಿಷ್ಠ ₹50 ಸಾವಿರ ಪರಿಹಾರ ಸಿಗಲಿದೆ. ದೇಶದಲ್ಲಿ ಪ್ರತಿವರ್ಷ 5 ಸಾವಿರಕ್ಕೂ ಹೆಚ್ಚು ಕಾರ್ಮಿಕ ಕುಟುಂಬಗಳಿಗೆ ಈ ಹೊಸ ನಿಯಮ ಊರುಗೋಲಾಗಲಿದೆ ಎಂದು ಸಚಿವಾಲಯ ತಿಳಿಸಿದೆ.

2. ಉದ್ಯೋಗಿಗಳು ವೈಯಕ್ತಿಕ ಹಾಗೂ ಇತರ ಕಾರಣಗಳಿಗೆ ಕಂಪನಿ ಬದಲಿಸುವುದು ಸಾಮಾನ್ಯ. ಈ ಹಿಂದೆ, ಉದ್ಯೋಗಿಯ 12 ತಿಂಗಳ ನಿರಂತರ ಕೆಲಸವನ್ನು ಲೆಕ್ಕ ಹಾಕಿ ವಿಮಾ ಪರಿಹಾರ ನೀಡಲಾಗುತ್ತಿತ್ತು. ಇದರಿಂದ ಒಂದು ಕಂಪನಿಯಿಂದ ಕೆಲಸ ಬಿಟ್ಟು, ಮತ್ತೊಂದು ಕಂಪನಿಗೆ ಸೇರಿಕೊಳ್ಳುವ ಉದ್ಯೋಗಿಗಳು ಮರಣ ಹೊಂದಿದರೆ ಅವರ ಕುಟುಂಬಗಳು ಇಡಿಎಲ್ಐ ಪ್ರಯೋಜನ ಪಡೆಯಲು ತೊಡಕಾಗುತ್ತಿತ್ತು. ಈಗ, ಈ ನಿಯಮವನ್ನೂ ಪರಿಷ್ಕರಿಸಲಾಗಿದೆ. ಉದ್ಯೋಗಿಯು ಒಂದು ಕಂಪನಿ ತೊರೆದು ಮತ್ತೊಂದು ಕಂಪನಿಗೆ ಸೇರಿಕೊಳ್ಳಲು 60 ದಿನಗಳಾದರೂ ಅದನ್ನು ಈಗ ಪರಿಗಣಿಸುವುದಿಲ್ಲ. ಹಳೆಯ ಮತ್ತು ಹೊಸ ಕೆಲಸದ ಅವಧಿಯನ್ನು ಒಟ್ಟಿಗೆ ಸೇರಿಸಿ, 'ನಿರಂತರ ಕೆಲಸ' ಎಂದು ಪರಿಗಣಿಸಲಾಗುತ್ತದೆ.

3. ಪಿ.ಎಫ್ ಖಾತೆಗೆ ಕೊನೆಯ ಕೊಡುಗೆ ನೀಡಿದ ಆರು ತಿಂಗಳ ಒಳಗಾಗಿ ಉದ್ಯೋಗಿ ಮೃತಪಟ್ಟು, ಅವರ ಹೆಸರು ಕಂಪನಿ/ಸಂಸ್ಥೆಯ ವೇತನದಾರರ ಪಟ್ಟಿಯಲ್ಲಿದ್ದರೆ ಇಡಿಎಲ್ಐ ಪ್ರಯೋಜನಕ್ಕೆ ಅರ್ಹ ಎಂದು ಹೊಸ ನಿಯಮದಲ್ಲಿ ಸ್ಪಷ್ಟಪಡಿಸಲಾಗಿದೆ.

ನಿಯಮಗಳ ಸರಳೀಕರಣದಿಂದಾಗಿ ಆಗಾಗ್ಗೆ ಉದ್ಯೋಗ ಬದಲಾಯಿಸುವ, ಮಾಸಿಕ ಕಡಿಮೆ ಸಂಬಳ ಪಡೆಯುವ ಉದ್ಯೋಗಿಗಳು ಎದುರಿಸುತ್ತಿದ್ದ ದೀರ್ಘಕಾಲೀನ ಸಮಸ್ಯೆಗೆ ಪರಿಹಾರ ಸಿಕ್ಕಿದಂತಾಗಿದೆ.

**ಆಧಾರ:** ಕಾರ್ಮಿಕ ಸಚಿವಾಲಯದ ಅಧಿಸೂಚನೆ, ಇಪಿಎಫ್‌ಒ ವಾರ್ಷಿಕ ವರದಿ


| ₹7.37 ಕೋಟಿ | 7.66 ಲಕ್ಷ | 91.59 ಲಕ್ಷ | 67,867 | 74,576 |
|---|---|---|---|---|
| ದೇಶದಲ್ಲಿರುವ ಇಪಿಎಫ್‌ಒ ಚಂದಾದಾರರು | ಚಂದಾದಾರರಿಗೆ ಉದ್ಯೋಗ ನೀಡಿರುವ ಕಂಪನಿಗಳು | ಕರ್ನಾಟಕದಲ್ಲಿರುವ ಚಂದಾದಾರರು (ಗೋವಾವನ್ನೂ ಸೇರಿಸಿ) | ಕರ್ನಾಟಕದಲ್ಲಿರುವ ಚಂದಾದಾರರು ಕೆಲಸ ಮಾಡುತ್ತಿರುವ ಕಂಪನಿಗಳು (ಗೋವಾವನ್ನೂ ಒಳಗೊಂಡು) | 2023-24ರಲ್ಲಿ ಇಡಿಎಲ್ಐ ಅಡಿಯಲ್ಲಿ ಮಾಡಲಾದ ಕ್ಲೇಮುಗಳು |

*2023-24ರ ಮಾಹಿತಿ, **ಇಪಿಎಫ್‌ಒನ ವಲಯಗಳ ವರ್ಗೀಕರಣದಲ್ಲಿ ಬೆಂಗಳೂರು ಪ್ರತ್ಯೇಕ ವಲಯವಾಗಿದ್ದು, ಬೆಂಗಳೂರು ಹೊರತುಪಡಿಸಿ ಕರ್ನಾಟಕದ ಇತರ ಪ್ರದೇಶಗಳು ಮತ್ತು ಗೋವಾ ಸೇರಿಕೊಂಡು ಇನ್ನೊಂದು ವಲಯ ಮಾಡಲಾಗಿದೆ.

## ಸೌಲಭ್ಯಕ್ಕೆ ಯಾರು ಅರ್ಹ?

ನೌಕರರ ಭವಿಷ್ಯ ನಿಧಿ (ಇಪಿಎಫ್) ಮತ್ತು ವಿವಿಧ ನಿಬಂಧನೆಗಳ ಕಾಯ್ದೆ 1952ರ ಅಡಿ ನೋಂದಣಿಯಾದ ಎಲ್ಲಾ ಕಂಪನಿಗಳು/ ಸಂಸ್ಥೆಗಳು ಇಡಿಎಲ್ಐ ಯೋಜನೆಗೆ ಒಳಪಡುತ್ತವೆ. ಅಂತಹ ಸಂಸ್ಥೆಗಳು ಉದ್ಯೋಗಿಗಳಿಗೆ ಇಡಿಎಲ್ಐ ಸೌಲಭ್ಯ ಒದಗಿಸಬೇಕಿದೆ. ನೌಕರರ ಭವಿಷ್ಯ ನಿಧಿ ಮತ್ತು ನೌಕರರ ಪಿಂಚಣಿ ಯೋಜನೆ (ಇಪಿಎಸ್) ಸಂಯೋಜಿತ ಯೋಜನೆ ಇದಾಗಿದೆ. ಇಪಿಎಫ್ ಖಾತೆ ಹೊಂದಿರುವ ಯಾವುದೇ ಉದ್ಯೋಗಿ ಸ್ವಯಂಚಾಲಿತವಾಗಿ ಇಡಿಎಲ್ಐಗೆ ಅರ್ಹರಾಗುತ್ತಾರೆ. ಪ್ರತಿ ಉದ್ಯೋಗಿಯು ಅವರ ಹುದ್ದೆ ಅಥವಾ ಸಂಬಳ ಲೆಕ್ಕಿಸದೆ ವಿಮೆಗೆ ಒಳಪಡುತ್ತಾರೆ.

ಉದ್ಯೋಗಿಯು ಈ ವಿಮಾ ಸೌಲಭ್ಯ ಪಡೆಯಲು ವೈಯಕ್ತಿಕವಾಗಿ ಕಂತು ಪಾವತಿಸಬೇಕಿಲ್ಲ. ಕಂಪನಿಗಳೇ ಉದ್ಯೋಗಿಯ ಮೂಲ ವೇತನದ ಶೇ 0.5ರಷ್ಟು ಅಥವಾ ಪ್ರತಿ ತಿಂಗಳು ₹75 ಅನ್ನು ಇಡಿಎಲ್ಐಗೆ ಕೊಡುಗೆಯಾಗಿ ನೀಡುತ್ತವೆ.



## ಪ್ರಯೋಜನ ಪಡೆಯುವುದು ಹೇಗೆ?

ವಿಮಾದಾರರು (ಉದ್ಯೋಗಿ) ಸೂಚಿಸಿದ ನಾಮಿನಿಗೆ ಯೋಜನೆಯಡಿ ಪರಿಹಾರ ಸಿಗಲಿದೆ. ಒಂದು ವೇಳೆ ನಾಮಿನಿ ಹೆಸರನ್ನು ನೋಂದಾಯಿಸದಿದ್ದರೆ, ಅವರ ಕುಟುಂಬದ ಸದಸ್ಯರು ಅಥವಾ ಕಾನೂನುಬದ್ಧ ಉತ್ತರಾಧಿಕಾರಿ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಬಹುದು. ಹಕ್ಕುದಾರರು ಭರ್ತಿ ಮಾಡಿದ ಇಡಿಎಲ್ಐ ಅರ್ಜಿಗೆ ಉದ್ಯೋಗದಾತ ಕಂಪನಿ/ ಸಂಸ್ಥೆ ಸಹಿ ಮಾಡಿ ದೃಢೀಕರಿಸಬೇಕು.

ಒಂದು ವೇಳೆ, ಉದ್ಯೋಗದಾತರು ಇಲ್ಲದಿದ್ದರೆ ಅಥವಾ ಉದ್ಯೋಗದಾತರ ಸಹಿ ಪಡೆಯಲು ಸಾಧ್ಯವಾಗದಿದ್ದರೂ ಪರ್ಯಾಯ ಕ್ರಮದ ಮೂಲಕ ವಿಮಾ ಸೌಲಭ್ಯದ ಹಾದಿಯನ್ನು ಸುಗಮಗೊಳಿಸಲಾಗಿದೆ.

ಬ್ಯಾಂಕ್ ವ್ಯವಸ್ಥಾಪಕರು (ಮೃತ ಉದ್ಯೋಗಿಯ ಖಾತೆ ಇರುವ ಬ್ಯಾಂಕ್), ಸ್ಥಳೀಯ ಸಂಸದ ಅಥವಾ ಶಾಸಕರು, ಗೆಜೆಟೆಡ್ ಅಧಿಕಾರಿ, ನ್ಯಾಯಾಧೀಶರು, ಸ್ಥಳೀಯ ನಗರ ಸಂಸ್ಥೆಯ ಸದಸ್ಯರು/ ಅಧ್ಯಕ್ಷರು, ಪೋಸ್ಟ್ ಮಾಸ್ಟರ್ ಅಥವಾ ಸಬ್-ಪೋಸ್ಟ್ ಮಾಸ್ಟರ್, ಇಪಿಎಫ್ ಅಥವಾ ಇಪಿಎಫ್‌ಒ ಕೇಂದ್ರೀಯ ಧರ್ಮದರ್ಶಿ ಮಂಡಳಿಯ (ಸಿಬಿಟಿ) ಪ್ರಾದೇಶಿಕ ಸಮಿತಿ ಸದಸ್ಯರಿಂದ ಕ್ಲೇಮು ಅರ್ಜಿ ದೃಢೀಕರಿಸಿ ಸೂಕ್ತ ದಾಖಲೆಗಳ ಸಮೇತ ಪ್ರಾದೇಶಿಕ ಇಪಿಎಫ್ ಆಯುಕ್ತರ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಈ ಅರ್ಜಿ ಸ್ವೀಕರಿಸಿದ ನಂತರ ಆಯುಕ್ತರು 30 ದಿನಗಳೊಗೆ ಇತ್ಯರ್ಥಪಡಿಸಬೇಕೆಂಬ ನಿಯಮವಿದೆ.

## ವಿಮಾ ಲೆಕ್ಕಾಚಾರ ಹೇಗೆ?

ಇಡಿಎಲ್ಐ ಅಡಿ ಪ್ರಯೋಜನ ಪಡೆಯಲು 12 ತಿಂಗಳುಗಳಲ್ಲಿ ಚಂದಾದಾರರ ಪಿ.ಎಫ್ ಖಾತೆಯಲ್ಲಿನ ಸರಾಸರಿ ಮೊತ್ತವನ್ನು ಪರಿಗಣಿಸಲಾಗುತ್ತದೆ. ಒಟ್ಟಾರೆ ವಿಮಾ ರಕ್ಷಣೆಯ ಲೆಕ್ಕಾಚಾರವು ಎರಡು ಹಂತದ ಪ್ರಕ್ರಿಯೆ. ಮೃತ ಉದ್ಯೋಗಿಯ 12 ತಿಂಗಳ ಸರಾಸರಿ ಮಾಸಿಕ ವೇತನವನ್ನು (ಮೂಲ ವೇತನ + ತುಟ್ಟಿಭತ್ಯೆ) ಗರಿಷ್ಠ ₹15 ಸಾವಿರಕ್ಕೆ ಮಿತಿಗೊಳಿಸಿ, ಅದನ್ನು 35 ಪಟ್ಟು ಗುಣಿಸುವುದು ಒಂದು ಹಂತ; 12 ತಿಂಗಳಿನಲ್ಲಿ ಮೃತ ಉದ್ಯೋಗಿಯ ಭವಿಷ್ಯ ನಿಧಿ ಖಾತೆಯಲ್ಲಿರುವ ಸರಾಸರಿ ಮೊತ್ತದ ಶೇ 50ರಷ್ಟನ್ನು ಪರಿಗಣಿಸುವುದು ಎರಡನೇ ಹಂತ.

ಈ ಸೌಲಭ್ಯ ಪಡೆಯಲು ಗರಿಷ್ಠ ವೇತನ ಮಿತಿಯನ್ನು ₹15 ಸಾವಿರಕ್ಕೆ ಮಿತಿಗೊಳಿಸಲಾಗಿದೆ. ಮೂಲ ವೇತನವು ಇದಕ್ಕಿಂತಲೂ ಹೆಚ್ಚಿದ್ದರೂ ವಿಮಾ ಸೌಲಭ್ಯ ಪಡೆಯುವಾಗ ₹15 ಸಾವಿರವನ್ನಷ್ಟೇ ಪರಿಗಣಿಸಲಾಗುತ್ತದೆ.

ಉದಾಹರಣೆಗೆ, ಮಾಸಿಕ ಸಂಬಳ ₹25 ಸಾವಿರ ಇದ್ದು, ಪಿ.ಎಫ್. ಖಾತೆಯಲ್ಲಿ ₹6 ಲಕ್ಷ ಇದೆ ಎಂದಿಟ್ಟುಕೊಳ್ಳಿ. ಆಗ ಈ ವಿಧಾನದಲ್ಲಿ ಲೆಕ್ಕ ಹಾಕಿದಾಗ (₹25,000x35 = ₹8.75 ಲಕ್ಷ ಮತ್ತು ₹6 ಲಕ್ಷದ ಶೇ 50 ಅಂದರೆ ₹3 ಲಕ್ಷ) ವಿಮಾ ಮೊತ್ತವು ₹11.75 ಲಕ್ಷ ಆಗುತ್ತದೆ. ಆದರೆ, 2021ರಲ್ಲಿ ಇಡಿಎಲ್ಐ ಅಡಿ ಗರಿಷ್ಠ ವಿಮಾ ಮೊತ್ತವನ್ನು ₹7 ಲಕ್ಷಕ್ಕೆ ನಿಗದಿಪಡಿಸಲಾಗಿದೆ. ಹಾಗಾಗಿ, ನಾಮಿನಿಗೆ ಇಷ್ಟು ಮೊತ್ತವಷ್ಟೇ ಸಿಗುತ್ತದೆ. ಪರಿಷ್ಕೃತ ನಿಯಮಗಳ ಪ್ರಕಾರ ಈ ಯೋಜನೆಯಡಿ ಕನಿಷ್ಠ ₹50 ಸಾವಿರ ಮತ್ತು ಗರಿಷ್ಠ ₹7 ಲಕ್ಷ ವಿಮೆ ಸೌಲಭ್ಯ ಕುಟುಂಬದವರಿಗೆ ಸಿಗಲಿದೆ.

## ಗಿಗ್ ಕಾರ್ಮಿಕರಿಗೆ ಸೌಲಭ್ಯ

ಗಿಗ್ ಕಾರ್ಮಿಕರು ಸಾಂಪ್ರದಾಯಿಕವಾದ ಉದ್ಯೋಗದಾತ ಮತ್ತು ಉದ್ಯೋಗಿ ನಡುವಿನ ಕೆಲಸದ ವ್ಯವಸ್ಥೆಯಿಂದ ದೂರ ಇರುತ್ತಾರೆ. ಈ ವಲಯದಲ್ಲಿ ದುಡಿಯುವವರಿಗೆ ಸಾಮಾಜಿಕ ಭದ್ರತೆ ಕಲ್ಪಿಸಲು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಕಾರ್ಯನಿರತವಾಗಿದೆ. ಇದರಿಂದ ದೇಶದ ಆರ್ಥಿಕತೆಗೆ ಮತ್ತಷ್ಟು ಬೆಂಬಲ ನೀಡಿದಂತಾಗುತ್ತದೆ ಎಂಬುದು ಸಚಿವಾಲಯದ ಲೆಕ್ಕಾಚಾರ. ಗಿಗ್ ಕಾರ್ಮಿಕರಿಗೆ ಇಡಿಎಲ್ಐ ಸೌಲಭ್ಯ ಒದಗಿಸಲು ಕೇಂದ್ರ ಸರ್ಕಾರ ನಿರ್ಧರಿಸಿದ್ದು, ಈ ಕುರಿತು ಚೌಕಟ್ಟು ರೂಪಿಸುವುದಾಗಿ ಕೇಂದ್ರ ಕಾರ್ಮಿಕ ಸಚಿವ ಮನ್ಸುಖ್ ಮಾಂಡವೀಯ ಹೇಳಿದ್ದಾರೆ.

ಈ ವಿಷಯದಲ್ಲಿ ಕರ್ನಾಟಕ ಸರ್ಕಾರವು ಒಂದು ಹೆಜ್ಜೆ ಮುಂದೆ ಇಟ್ಟಿದ್ದು, 'ಕರ್ನಾಟಕ ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ) ಕಾಯ್ದೆ- 2025' ರೂಪಿಸಿದೆ. ಈ ಕಾರ್ಮಿಕರು ಸರಕು ಸೇವೆ ವಿತರಣೆ ವೇಳೆ ಅವಘಡಕ್ಕೀಡಾಗಿ ಅಂಗವಿಕಲರಾದರೆ ಅಥವಾ ಮೃತಪಟ್ಟರೆ ಅವರ ಅವಲಂಬಿತರು ತೊಂದರೆಗೆ ಸಿಲುಕುತ್ತಾರೆ. ಇದಕ್ಕಾಗಿ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಸಾಮಾಜಿಕ ಭದ್ರತೆ ಒದಗಿಸುವುದು ಕಾಯ್ದೆಯ ಉದ್ದೇಶ.

ಆನ್‌ಲೈನ್ ಪ್ಲಾಟ್‌ಫಾರ್ಮ್ ಆಧಾರಿತ ಸೇವೆಯ ಪ್ರತಿ ವಹಿವಾಟಿನ ಮೇಲೆ ಶೇ 1ರಿಂದ ಶೇ 2ರಷ್ಟು ಮೀರದಂತೆ ಕ್ಷೇಮಾಭಿವೃದ್ಧಿ ಶುಲ್ಕ ಸಂಗ್ರಹಿಸಲಾಗುತ್ತದೆ. ಅವರಿಗೆ ಭವಿಷ್ಯ ನಿಧಿ, ಅಪಘಾತ ಸೌಲಭ್ಯ, ಮಕ್ಕಳಿಗೆ ಶೈಕ್ಷಣಿಕ ಸೌಲಭ್ಯಕ್ಕೆ ನೆರವು, ಅಂತ್ಯಸಂಸ್ಕಾರಕ್ಕೆ ಧನಸಹಾಯ ನೀಡಲು ಕಾಯ್ದೆ ಅವಕಾಶ ಕಲ್ಪಿಸಿದೆ.

2025–26ನೇ ಆರ್ಥಿಕ ವರ್ಷದಲ್ಲಿ ಗಿಗ್ ವಲಯದಲ್ಲಿ ದುಡಿಯುವ ಕಾರ್ಮಿಕರ ಸಂಖ್ಯೆ ದೇಶದಲ್ಲಿ ಒಂದು ಕೋಟಿ ದಾಟಲಿದ್ದು, 2029–30ರ ವೇಳೆಗೆ 2.35 ಕೋಟಿಗೆ ತಲುಪಲಿದೆ ಎಂದು ನೀತಿ ಆಯೋಗ ಅಂದಾಜಿಸಿದೆ. ಕರ್ನಾಟಕದಲ್ಲಿ 4 ಲಕ್ಷ ಗಿಗ್ ಕಾರ್ಮಿಕರಿದ್ದಾರೆ.



## ❖ ಖನಿಜಗಳ ಮೇಲೆ ತೆರಿಗೆ 'ಸುಪ್ರೀಂ' ಗೆ ಮೇಲ್ಮನವಿ

**ಸಂದರ್ಭ:** ಗಣಿಗಾರಿಕೆ ಹಾಗೂ ಖನಿಜಗಳಿರುವ ಜಮೀನುಗಳ ಮೇಲೆ ತೆರಿಗೆ ವಿಧಿಸಲು ರಾಜ್ಯಗಳು ಶಾಸನಬದ್ಧ ಅಧಿಕಾರ ಹೊಂದಿವೆ ಎಂಬ ಸುಪ್ರೀಂ ಕೋರ್ಟ್‌ನ ಸಂವಿಧಾನ ಪೀಠ ನೀಡಿದ್ದ ತೀರ್ಪು ಪ್ರಶ್ನಿಸಿ ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಪರಿಹಾರಾತ್ಮಕ ಅರ್ಜಿ ಸಲ್ಲಿಸಿದೆ.

- '9 ಸದಸ್ಯರು ಇದ್ದ ನ್ಯಾಯಪೀಠವು 8:1ರ ಅನುಪಾತದಲ್ಲಿ ಬಹುಮತ ತೀರ್ಪು ನೀಡಿದೆ. ತೆರಿಗೆ ವಿಧಿಸುವ ವಿಚಾರ ಗಂಭೀರವಾಗಿರುವ ಕಾರಣ, ಈ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸಲಾಗುತ್ತಿದೆ' ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ನ್ಯಾಯಮೂರ್ತಿಗಳಾದ ವಿಕ್ರಮ ನಾಥ್ ಹಾಗೂ ಸಂದೀಪ್ ಮೆಹ್ತಾ ಅವರು ಇರುವ ಪೀಠಕ್ಕೆ ತಿಳಿಸಿದ್ದಾರೆ.
- ಗಣಿಗಾರಿಕೆ ಹಾಗೂ ಖನಿಜಗಳಿರುವ ಜಮೀನುಗಳ ಮೇಲೆ ತೆರಿಗೆ ವಿಧಿಸುವುದಕ್ಕೆ ಸಂಬಂಧಿಸಿ, ಆಗ ಮುಖ್ಯ ನ್ಯಾಯಮೂರ್ತಿಯಾಗಿದ್ದ ಡಿ.ವೈ. ಚಂದ್ರಚೂಡ್ ನೇತೃತ್ವದ 9 ಸದಸ್ಯರಿದ್ದ ಸಂವಿಧಾನ ಪೀಠವು, ಕಳೆದ ವರ್ಷ ಜುಲೈ 25ರಂದು 8:1ರ ಬಹುಮತದ ತೀರ್ಪು ನೀಡಿತ್ತು.
- **ಖನಿಜಗಳಿರುವ ಜಮೀನುಗಳ ಮೇಲೆ ತೆರಿಗೆ ವಿಧಿಸಲು ರಾಜ್ಯಗಳಿಗೆ ಅಧಿಕಾರ ಇದೆ. ತೆರಿಗೆ ಮತ್ತು ರಾಯಧನ ಬೇರೆಬೇರೆ ಎಂದೂ ಪೀಠ ಸ್ಪಷ್ಟಪಡಿಸಿತ್ತು.**
- ನ್ಯಾಯಮೂರ್ತಿ ಬಿ.ವಿ.ನಾಗರತ್ನ ಅವರು ಭಿನ್ನ ನಿಲುವು ವ್ಯಕ್ತಪಡಿಸಿದ್ದರು. **ರಾಯಧನ ಕೂಡ ತೆರಿಗೆಯ ಒಂದು ರೂಪವೇ ಆಗಿದ್ದು, ಇಂತಹ ತೆರಿಗೆ ಆಕರಣೆ ಮಾಡುವುದಕ್ಕೆ ಕೇಂದ್ರಕ್ಕೆ ಅಧಿಕಾರ ಇದೆ** ಎಂದು ಭಿನ್ನ ತೀರ್ಪು ನೀಡಿದ್ದರು.

## ❖ ಡ್ರಗ್‌ಪ್ರೊಟ್‌ಎಐ ಔಷಧ ಸಂಶೋಧನೆಯಲ್ಲಿ ಕ್ರಾಂತಿ

**ಸಂದರ್ಭ:** ಜೀವವನ್ನು ಉಳಿಸುವ ಔಷಧಗಳನ್ನು ಕಂಡುಹಿಡಿಯುವುದು ಒಂದು ದೀರ್ಘ ಮತ್ತು ಸವಾಲಿನ ಹಾದಿ.

- ಹೊಸ ಔಷಧವೊಂದನ್ನು ಮಾರುಕಟ್ಟೆಗೆ ತರಲು ಹಲವು ವರ್ಷಗಳ ಸಮಯ ಮತ್ತು ಕೋಟಿಗಟ್ಟಲೆ ಹಣ ಬೇಕಾಗುತ್ತದೆ. ಆದರೂ, ಶೇ 90ರಷ್ಟು ಔಷಧಗಳು ಯಶಸ್ವಿಯಾಗದೆ ಪ್ರಯೋಗ ಹಂತದಲ್ಲೇ ವಿಫಲಗೊಳ್ಳುತ್ತವೆ. ಇದಕ್ಕೆ ಮುಖ್ಯ ಕಾರಣ, ರೋಗದ ಮೇಲೆ ಪರಿಣಾಮ ಬೀರಬಲ್ಲ **ಸೂಕ್ತ ಪ್ರೋಟೀನ್ ಗುರಿ**ಯನ್ನು ಆರಂಭದಲ್ಲೇ ನಿರ್ದಿಷ್ಟವಾಗಿ ಗುರುತಿಸಲು ವಿಜ್ಞಾನಿಗಳಿಗೆ ಇರುವ ಸವಾಲು. ಇದಕ್ಕೊಂದು ಪರಿಹಾರವಾಗಿ, **ಮುಂಬೈನ ಐಐಟಿ ಬಾಂಬೆ ಸಂಸ್ಥೆಯ ವಿಜ್ಞಾನಿಗಳು 'ಡ್ರಗ್‌ಪ್ರೊಟ್‌ಎಐ' (DrugProtAI) ಎಂಬ ಕೃತಕ ಬುದ್ಧಿಮತ್ತೆ ಆಧಾರಿತ ನವೀನ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಿದ್ದಾರೆ**. ಇದು ಔಷಧ ಸಂಶೋಧನೆಯ ಹಾದಿಯನ್ನು ಬದಲಿಸಬಲ್ಲ ಮಹತ್ವದ ಹೆಜ್ಜೆಯಾಗಿದೆ.
- **ನಮ್ಮ ದೇಹದಲ್ಲಿ ಸುಮಾರು 20,000ಕ್ಕೂ ಹೆಚ್ಚು ವಿಭಿನ್ನ ಪ್ರೋಟೀನ್‌ಗಳಿವೆ**. ಇವು ನಮ್ಮ ದೇಹದ ಜೈವಿಕ ಕ್ರಿಯೆಗಳಿಗೆ ಆಧಾರ. ಪ್ರತಿಯೊಂದು ರೋಗಕ್ಕೂ ಒಂದು ನಿರ್ದಿಷ್ಟ ಕಾರಣವಿರುತ್ತದೆ ಮತ್ತು ಆ ಕಾರಣಕ್ಕೆ ಯಾವುದಾದರು ಪ್ರೋಟೀನ್‌ಗಳ ಪಾತ್ರವಿರುತ್ತದೆ. ಉದಾಹರಣೆಗೆ, ಕ್ಯಾನ್ಸರ್‌ಕೋಶಗಳ ಬೆಳವಣಿಗೆಗೆ ಕೆಲವು ಪ್ರೋಟೀನ್‌ಗಳು ಕಾರಣವಾಗಿರುತ್ತವೆ. ಔಷಧಗಳು ಈ ಪ್ರೋಟೀನ್‌ಗಳಿಗೆ ಅಂಟಿಕೊಂಡು ಅವುಗಳ ಚಟುವಟಿಕೆಯನ್ನು ನಿಯಂತ್ರಿಸಬೇಕು ಅಥವಾ ನಿಲ್ಲಿಸಬೇಕು.
- ಪ್ರೋಟೀನೊಂದು ಔಷಧವೊಂದರ ಗುರಿಯಾಗಲು ಸೂಕ್ತವಾಗಿದೆಯೇ ಎಂಬುದನ್ನು ವೈಜ್ಞಾನಿಕವಾಗಿ 'ಡ್ರಗ್ಗಬಿಲಿಟಿ' (Druggability) ಎಂದು ಕರೆಯುತ್ತಾರೆ. ಇದನ್ನು ಗುರುತಿಸುವುದು ಸುಲಭವಲ್ಲ. ಏಕೆಂದರೆ, ಔಷಧಗಳಿಗೆ ಸೂಕ್ತ ಗುರಿಯಾಗಬಲ್ಲ ಪ್ರೋಟೀನ್‌ಗಳ ಸಂಖ್ಯೆ ಬಹಳ ಕಡಿಮೆ. ಸಾಂಪ್ರದಾಯಿಕ ವಿಧಾನಗಳಲ್ಲಿ ಇದರ ಪತ್ತೆಗೆ ಪ್ರಯೋಗಾಲಯಗಳ ಸಂಶೋಧನೆ ಮತ್ತು ಗಣಕಯಂತ್ರ ಆಧಾರಿತ ವಿಶ್ಲೇಷಣೆ ಎರಡನ್ನೂ ಬಳಸಲಾಗುತ್ತದೆ. ಈ ವಿಧಾನಗಳು ನಿಧಾನ ಮತ್ತು ನಿಖರತೆಯಲ್ಲಿ ಸ್ವಲ್ಪ ಕಡಿಮೆ.

Dr. Rajkumar IAS Academy

- ಹಿಂದಿನ ತಂತ್ರಜ್ಞಾನಗಳಿಗೆ ಹೋಲಿಸಿದರೆ, **ಈ ಹೊಸ 'ಡ್ರಗ್‌ಪ್ರೊಟ್‌ಎಐ'** ತಂತ್ರಜ್ಞಾನ ಹೆಚ್ಚು ಮಾಹಿತಿಯನ್ನು ವಿಶ್ಲೇಷಿಸುತ್ತದೆ. **ಪ್ರೋಟೀನ್‌ಗಳು ಅಮೈನೊ ಆಮ್ಲಗಳಿಂದ (amino acids) ರೂಪುಗೊಂಡಿರುತ್ತವೆ.**
- ಹಿಂದಿನ ತಂತ್ರಜ್ಞಾನಗಳು **ಕೇವಲ ಅಮೈನೊ ಆಮ್ಲಗಳ ರಚನೆಯನ್ನು ಮಾತ್ರ** ಪರಿಗಣಿಸುತ್ತಿದ್ದವು. ಆದರೆ, **'ಡ್ರಗ್‌ಪ್ರೊಟ್‌ಎಐ' ಸುಮಾರು 183 ವಿವಿಧ ಪ್ರೋಟೀನ್‌ಗಳ ಗುಣಲಕ್ಷಣಗಳನ್ನು ವಿಶ್ಲೇಷಿಸುತ್ತದೆ.** ಇದರಲ್ಲಿ, ಪ್ರೋಟೀನ್‌ನ ಭೌತಿಕ ಹಾಗೂ ರಾಸಾಯನಿಕ ಗುಣಗಳು, ಅದರ ಅಮೈನೊ ಆಮ್ಲಗಳ ಅನುಕ್ರಮ (sequence), ಇತರೆ ಪ್ರೋಟೀನ್‌ಗಳೊಂದಿಗೆ ಅದು ಹೇಗೆ ಸಂವಹನ ನಡೆಸುತ್ತದೆ, ಮತ್ತು ಕೋಶದ ಯಾವ ಭಾಗದಲ್ಲಿ ಅದು ಇದೆ ಎಂಬ ವಿವರಗಳೂ ಸೇರಿವೆ. ಇದು ಕೇವಲ ಒಂದು ಪ್ರೋಟೀನನ್ನು ಅದರ ರಚನೆಯ ಆಧಾರದ ಮೇಲೆ ನೋಡುವುದಿಲ್ಲ, ಬದಲಿಗೆ ಅದರ **ಸಂಪೂರ್ಣ ಗುಣಲಕ್ಷಣಗಳನ್ನು ಆಧರಿಸಿ ವಿಶ್ಲೇಷಿಸುತ್ತದೆ.** ಇದು **ನಿಖರತೆಯನ್ನು ಹೆಚ್ಚಿಸಿದೆ**. ಈ ಕಾರಣಕ್ಕಾಗಿಯೇ 'ಡ್ರಗ್‌ಪ್ರೊಟ್‌ಎಐ' ಇತರ ತಂತ್ರಜ್ಞಾನಗಳಾದ 'ಸ್ಪೈಡರ್' (SPIDER) ಮತ್ತು 'ಡ್ರಗ್ ಟಾರ್' (DrugTar)ಗಿಂತ ಉತ್ತಮವಾಗಿ ಕಾರ್ಯನಿರ್ವಹಿಸಿದೆ ಎಂದು ಸಂಶೋಧಕರು ಹೇಳಿದ್ದಾರೆ.
- ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವಲ್ಲಿ ಇರುವ ಒಂದು ದೊಡ್ಡ ಸವಾಲು, 'ಅಸಮತೋಲಿತ ದತ್ತಾಂಶ' (imbalanced data) ಅಥವಾ ಮಾಹಿತಿ. ಔಷಧಗಳ ಗುರಿಯಾಗದ ಪ್ರೋಟೀನ್‌ಗಳ ಸಂಖ್ಯೆ, ಗುರಿಯಾಗುವ ಪ್ರೋಟೀನ್‌ಗಳ ಸಂಖ್ಯೆಗಿಂತ ಬಹಳ ಜಾಸ್ತಿ ಇದೆ. ಹೀಗಾಗಿ, ಕೃತಕ ಬುದ್ಧಿಮತ್ತೆಯ ಮಾದರಿಯು ಈ ಮಾಹಿತಿಯ ಮೇಲೆ ತರಬೇತಿಗೊಂಡರೆ, ಅದು ಕೇವಲ ಗುರಿಯಾಗದ ಪ್ರೋಟೀನ್‌ಗಳನ್ನೇ ಹೆಚ್ಚು ನಿಖರವಾಗಿ ಗುರುತಿಸುತ್ತದೆ. ಆದರೆ, ವಿರಳವಾಗಿರುವ, ಆದರೆ ಪ್ರಮುಖವಾಗಿರುವ ಗುರಿಯಾಗಬಲ್ಲ ಪ್ರೋಟೀನ್‌ಗಳನ್ನು ಗುರುತಿಸಲು ವಿಫಲವಾಗುತ್ತದೆ.
- ಈ ಸಮಸ್ಯೆಯನ್ನು ಪರಿಹರಿಸಲು, 'ಡ್ರಗ್‌ಪ್ರೊಟ್‌ಎಐ' ಅನ್ನು ಅಭಿವೃದ್ಧಿಪಡಿಸಿದ ವಿಜ್ಞಾನಿಗಳು 'ಪಾರ್ಟಿಷನಿಂಗ್-ಆಧಾರಿತ ಸಮಗ್ರ ವಿಧಾನ' (partitioning-based ensemble method) ಎಂಬ ವಿಶೇಷ ತಂತ್ರವನ್ನು ಬಳಸಿದ್ದಾರೆ. ಇದರಡಿಯಲ್ಲಿ, ಗುರಿಯಾಗದ ಪ್ರೋಟೀನ್‌ಗಳ ದೊಡ್ಡ ಸಮೂಹವನ್ನು ಸಣ್ಣ ಸಣ್ಣ ಗುಂಪುಗಳಾಗಿ ವಿಂಗಡಿಸಲಾಗುತ್ತದೆ. ನಂತರ, ಹಲವಾರು ಕೃತಕ ಬುದ್ಧಿಮತ್ತೆ ಮಾದರಿಗಳನ್ನು ತರಬೇತಿಗೊಳಿಸಲಾಗುತ್ತದೆ. ಪ್ರತಿಯೊಂದು ಮಾದರಿಯು ಒಂದು ಸಣ್ಣ ಗುಂಪಿನೊಂದಿಗೆ, ಮತ್ತು ಗುರಿಯಾಗಬಲ್ಲ ಪ್ರೋಟೀನ್‌ಗಳ ಸಂಪೂರ್ಣ ಗುಂಪಿನೊಂದಿಗೆ ತರಬೇತಿ ಪಡೆಯುತ್ತದೆ. ಇದರಿಂದ, ಎಲ್ಲ ಮಾದರಿಗಳಿಗೂ ಸಮತೋಲಿತ ಮಾಹಿತಿ ಸಿಗುತ್ತದೆ ಮತ್ತು ಪ್ರಮುಖ ಮಾಹಿತಿಯು ಕಣ್ಮರೆಯಾಗುವುದಿಲ್ಲ. ಈ ತಂತ್ರದಿಂದಾಗಿ, 'ಡ್ರಗ್‌ಪ್ರೊಟ್‌ಎಐ' ಶೇ. 87ರಷ್ಟು ನಿಖರತೆಯನ್ನು ಸಾಧಿಸಿದೆ.
- ತಮ್ಮ ಸಾಧನವು ನೈಜವಾಗಿ ಎಷ್ಟು ಪರಿಣಾಮಕಾರಿ ಎಂದು ಪರೀಕ್ಷಿಸಲು, ಸಂಶೋಧಕರು ಒಂದು ವಿಶೇಷ ಪರೀಕ್ಷೆ ನಡೆಸಿದರು. ಅವರು 'ಡ್ರಗ್‌ಪ್ರೊಟ್‌ಎಐ' ಅನ್ನು ಇತ್ತೀಚೆಗೆ ಔಷಧಗಳಿಗೆ ಗುರಿ ಎಂದು ಗುರುತಿಸಲ್ಪಟ್ಟಿದ್ದ ಪ್ರೋಟೀನ್‌ಗಳನ್ನು ಗುರುತಿಸಲು ಬಳಸಿದರು. ಈ ಪ್ರೋಟೀನ್‌ಗಳನ್ನು ಕೃತಕ ಬುದ್ಧಿಮತ್ತೆ ಮಾದರಿಯ ತರಬೇತಿಯ ಸಮಯದಲ್ಲಿ ಬಳಸಲಾಗಿರಲಿಲ್ಲ. ಈ ಪರೀಕ್ಷೆಯಲ್ಲಿ, 'ಡ್ರಗ್‌ಪ್ರೊಟ್ ಎಐ' 81 ಹೊಸ ಗುರಿಗಳಲ್ಲಿ 61 ಪ್ರೋಟೀನ್‌ಗಳನ್ನು ಸರಿಯಾಗಿ ಗುರುತಿಸಿತು. ಇದು ಈ ತಂತ್ರಜ್ಞಾನದ ಪ್ರಾಯೋಗಿಕ ಮತ್ತು ನೈಜ-ಜೀವನದ ಅನ್ವಯಿಕತೆಯನ್ನು ಸಾಬೀತುಪಡಿಸುತ್ತದೆ.
- ಈ ಸಾಧನದ ಮತ್ತೊಂದು ಪ್ರಮುಖ ವೈಶಿಷ್ಟ್ಯವೆಂದರೆ, ಕೇವಲ ಪ್ರೋಟೀನ್‌ಗಳನ್ನು ಒಂದು ನಿರ್ದಿಷ್ಟ ಮಟ್ಟದಲ್ಲಿ ಊಹಿಸುವುದು (prediction) ಮಾತ್ರ ಅಲ್ಲ, ಅದು 'ಏಕೆ' ಒಂದು ಪ್ರೋಟೀನ್ ಡ್ರಗ್ಗೆಬಲ್ ಆಗಿದೆ ಎಂಬುದನ್ನು ವಿವರಿಸುತ್ತದೆ. **'ಶ್ಯಾಪ್' (SHAP - SHapley Additive exPlanations) ಎಂಬ ತಂತ್ರವನ್ನು ಬಳಸಿ, ಪ್ರೋಟೀನ್‌ನ ಯಾವ ಗುಣಲಕ್ಷಣಗಳು ಅದರ ಡ್ರಗ್ಗೆಬಿಲಿಟಿಗೆ ಹೆಚ್ಚು**

**ಕಾರಣವಾಗಿವೆ ಎಂಬುದನ್ನು ಇದು ವಿಶ್ಲೇಷಿಸುತ್ತದೆ.** ಉದಾಹರಣೆಗೆ, **ಕೋಶ ಸಂಕೇತಗಳನ್ನು (cell signalling) ನಿಯಂತ್ರಿಸುವ 'ಕೈನೇಸ್' (kinases) ಎಂಬ ಪ್ರೋಟೀನ್‌ಗಳು ಮತ್ತು ಕೆಲವು ನಿರ್ದಿಷ್ಟ ರಚನೆಗಳು ಪ್ರೋಟೀನ್‌ಗಳು ಔಷಧಕ್ಕೆ ಸೂಕ್ತವಾಗಿವೆ ಎಂಬುದರ ಪ್ರಬಲ ಸೂಚಕಗಳಾಗಿವೆ ಎಂದು ಈ ತಂತ್ರಜ್ಞಾನ ತೋರಿಸಿಕೊಟ್ಟಿದೆ.** ಈ ಅಂಶವು ಸಂಶೋಧಕರಿಗೆ ಒಂದು ನಿರ್ದಿಷ್ಟ ಔಷಧವನ್ನು ಅಭಿವೃದ್ಧಿಪಡಿಸುವ ನಿರ್ಧಾರ ತೆಗೆದುಕೊಳ್ಳಲು ಸಹಕಾರಿಯಾಗಿದೆ.

- 'ಡ್ರಗ್‌ಪ್ರೊಟ್‌ಎಐ' ನಂತಹ ಸಾಧನಗಳು ಔಷಧ ಸಂಶೋಧನೆಯ ಸಮಯ ಮತ್ತು ಹಣವನ್ನು ಕಡಿಮೆ ಮಾಡಬಹುದು. ಇದು ವಿಶೇಷವಾಗಿ ಬೆಂಗಳೂರು ಮತ್ತು ಕರ್ನಾಟಕದಲ್ಲಿರುವ ಹಲವು ಜೈವಿಕ ತಂತ್ರಜ್ಞಾನ ಮತ್ತು ಔಷಧ ಸಂಶೋಧನಾ ಸಂಸ್ಥೆಗಳಿಗೆ ಬಹಳ ಸಹಕಾರಿ ಆಗಬಹುದು. ಈ ತಂತ್ರಜ್ಞಾನವು ಹೆಚ್ಚು ನಿಖರ ಮತ್ತು ವೇಗವಾಗಿ ಕಾರ್ಯನಿರ್ವಹಿಸುವುದರಿಂದ, ವೈದ್ಯಕೀಯ ಕ್ಷೇತ್ರದಲ್ಲಿ ಹೊಸ ಆವಿಷ್ಕಾರ ಗಳಿಗೆ ದಾರಿ ಮಾಡಿಕೊಡುತ್ತದೆ. ಸಂಶೋಧಕರು ಹೊಸ ಔಷಧಗಳನ್ನು ವೇಗವಾಗಿ ಕಂಡುಹಿಡಿದು, ಮನುಕುಲದ ಒಳಿತಿಗಾಗಿ ಅದನ್ನು ಇನ್ನಷ್ಟು ಶೀಘ್ರವಾಗಿ ಮಾರುಕಟ್ಟೆಗೆ ತರಬಹುದು. ಎಲ್ಲಕ್ಕಿಂತ ಮುಖ್ಯವಾಗಿ, 'ಡ್ರಗ್‌ಪ್ರೊಟ್‌ಎಐ' ಅನ್ನು ಆನ್‌ಲೈನ್‌ನಲ್ಲಿ ಉಚಿತವಾಗಿ ಲಭ್ಯವಾಗುವಂತೆ ಮಾಡಲಾಗಿದೆ.

## ❖ ಹಣ್ಣುಗಳ ಸಂರಕ್ಷಣೆಗೆ ಪ್ರೋಟೀನ್

**ಸಂದರ್ಭ:** ಹಣ್ಣುಗಳು ನಮ್ಮ ಆಹಾರದ ಪ್ರಮುಖ ಭಾಗ. ಇವು ನಮ್ಮ ಪೋಷಣೆ ಮತ್ತು ಬೆಳವಣಿಗೆಗೆ ಅತ್ಯವಶ್ಯವಾಗಿ ಬೇಕಾದ ಆಹಾರದ ವಿಧ; ಸೂಕ್ಷ್ಮ ಪೋಷಕಾಂಶಗಳ ಆಕರ; ತುರ್ತಾಗಿ ನಮ್ಮ ದೇಹಕ್ಕೆ ಚೈತನ್ಯ ನೀಡಬಲ್ಲ ಶಕ್ತಿಯ ಮೂಲ.

- ನಮ್ಮ ಆಹಾರದಲ್ಲಿ ಇಷ್ಟೆಲ್ಲಾ ಮಹತ್ವದ ಪಾತ್ರ ವಹಿಸುವ ಹಣ್ಣುಗಳು ಅಷ್ಟೇ ಬೇಗ ಹಾಳಾಗಿ ಹೋಗುವಂಥವು. ಹಾಗಾಗಿ ಹಣ್ಣುಗಳನ್ನು ದೀರ್ಘಕಾಲ ಸಂರಕ್ಷಿಡುವುದು ಅನಿವಾರ್ಯ. ಕಟಾವು ಮಾಡಿದ ನಂತರ ಒಣಗಿಸುವುದು, ಉಪ್ಪಿನಕಾಯಿ ತಯಾರಿಸುವುದು, ಫರ್ಮೆಂಟೇಶನ್ (ಹುದುಗುವಿಕೆ), ಸಕ್ಕರೆ ಪಾಕದಲ್ಲಿ ನೆನೆಸಿಡುವುದು ಮುಂತಾದ ಸಾಂಪ್ರದಾಯಿಕ ವಿಧಾನಗಳನ್ನು ನಾವು ಕೂಡ ಅನುಸರಿಸುತ್ತಿದ್ದೆವು. ಇವು ಇಂದಿಗೂ ಬಳಕೆಯಲ್ಲಿವೆಯೆನ್ನಿ. ಆದರೆ ಈ ವಿಧಾನಗಳಲ್ಲಿ ಹಣ್ಣನ್ನು ಸಂರಕ್ಷಿಸಿ ಅದರಿಂದ ಸಿಗಬೇಕಾದ ಪೋಷಣೆಯನ್ನೇನೊ ಪಡೆದುಕೊಳ್ಳಬಹುದು, ಆಯಾ ಹಣ್ಣುಗಳ ಋತುಮಾನದಿಂದಾಚೆಗೂ! ಆದರೆ ಈ ವಿಧಾನದಿಂದ ತಾಜಾ ಹಣ್ಣುಗಳು ತಿನ್ನಲು ಸಿಗದೆ ಹಣ್ಣನ್ನು ಬೇರೆ ರುಚಿಯಲ್ಲಿ ಸವಿಯಬಹುದಷ್ಟೆ.
- **ವಿಜ್ಞಾನದಲ್ಲಿ ನಾವು ಮುಂದುವರೆದಂತೆ, ಹಣ್ಣುಗಳನ್ನು ಯಥಾವತ್ತಾಗಿ ಶೈತ್ಯಾಗಾರಗಳಲ್ಲಿ ಸಂಗ್ರಹಿಸುವುದು (ಡೀಪ್ ಫ್ರೀಜಿಂಗ್), ಹಣ್ಣಿನ ರಸಗಳನ್ನು ತೆಗೆದು ಬಾಟಲಿಗಳಲ್ಲಿ ಸಂಗ್ರಹಿಸುವುದು (ಕ್ಯಾನಿಂಗ್), ಒಣಗಿಸಬಹುದಾದ ಹಣ್ಣುಗಳಾದರೆ ಒಣಗಿಸುವುದು, ಫರ್ಮೆಂಟೇಷನ್ ಮತ್ತು ಸಕ್ಕರೆ ಪಾಕದಲ್ಲಿ ಸಂಗ್ರಹಿಸುವುದು, ಹೈಡ್ರೋಫೋಬಿಕ್ ಸರ್ಫೇಸ್ ಟ್ರೀಟ್ಮೆಂಟ್ (ತೇವಾಂಶವನ್ನು ಹೀರಿಕೊಳ್ಳದ ಸಿಲೇನುಗಳು, ಫ್ಲೂರೋಕಾರ್ಬನ್‌ಗಳಂತಹ ರಾಸಾಯನಿಕಗಳನ್ನು ಹಣ್ಣುಗಳ ಹೊರಪದರಕ್ಕೆ ಲೇಪಿಸುವುದು), ತುಸು ಜಟಿಲವಾದ ಹೊರಪದರವಿರುವ ಹಣ್ಣುಗಳಿಗೆ ನೈಸರ್ಗಿಕ ಪಾಲಿಮರುಗಳಾದ ಕೈಟೋಸಾನ್, ಶರ್ಕರಗಳ ಪದರವನ್ನು ಲೇಪಿಸುವುದು** – ಹೀಗೆ ಹಲವಾರು ವಿಧಾನಗಳಿಂದ ಹಣ್ಣುಗಳನ್ನು ಹಾಳಾಗದಂತೆ ಶೇಖರಿಸುವ ಅವಧಿಯನ್ನು ವಿಸ್ತರಿಸುವುದನ್ನು ಆರಂಭಿಸಿದೆವು.
- ಇನ್ನು, ಹೆಚ್ಚಿನ ಪ್ರಮಾಣದಲ್ಲಿ ಬೆಳೆದ, ವೇಗವಾಗಿ ಹಾಳಾಗಿಹೋಗುವಂಥ ಹಣ್ಣುಗಳೆಲ್ಲವನ್ನು ದೀರ್ಘ ಕಾಲದವರೆಗೆ ತಾಜಾರೂಪದಲ್ಲಿ ಬಳಸಬೇಕಾದರೆ ಮತ್ತು ಆರ್ಥಿಕವಾಗಿಯೂ ನಷ್ಟವಾಗದಂತೆ ಖಾತರಿವಹಿಸಲು ಇನ್ನೂ ಆಧುನಿಕವಾದ ಸಂರಕ್ಷಣಾ ವಿಧಾನ ಅನಿವಾರ್ಯವಾಗಿತ್ತು. ಜೆನೆಟಿಕ್ ಮಾಡಿಫಿಕೇಶನ್, ಶೈತ್ಯಾಗಾರಗಳಲ್ಲಿ ಶೇಖರಿಸುವ ಮತ್ತು ಫಾರ್ಮಾಲ್ಡಿಹೈಡ್, ಕಾಪರ್ ಸಲ್ಫೇಟ್, ಪೊಟ್ಯಾಶಿಯಂ ಸಾರ್ಬೇಟ್ ಇತ್ಯಾದಿಗಳಂತಹ ರಾಸಾಯನಿಕಗಳನ್ನು ಬಳಸಿ ಸಂರಕ್ಷಿಸುವ

ವಿಧಾನಗಳನ್ನು ಕೂಡ ಅನ್ವೇಷಿ ಸಲಾದರೂ ಇವು ಆರ್ಥಿಕವಾಗಿಯೂ ದುಬಾರಿ ಮತ್ತು ಇಂಗಾಲ ಹೊರಸೂಸುವಿಕೆಯಿಂದಾಗಿ ಪರಿಸರ ಮಾಲಿನ್ಯಕ್ಕೂ ಕಾರಣವಾಗುತ್ತವೆ.

- ಹಾಗಾಗಿ ಈ ಎಲ್ಲ ಅಡ್ಡಪರಿಣಾಮಗಳನ್ನು ನಿವಾರಿಸುತ್ತ ನಾವು ಬೆಳೆದ ಹಣ್ಣುಗಳನ್ನು ಪರಿಣಾಮಕಾರಿಯಾಗಿ ಸಂರಕ್ಷಿಸುವ ವಿಶೇಷ, ಸುಲಭ ಹಾಗೂ ಪರಿಸರಸ್ನೇಹಿ ಪರಿಹಾರವೊಂದನ್ನು ಚೀನಿವಿಜ್ಞಾನಿಗಳು ಪತ್ತೆ ಮಾಡಿದ್ದಾರಂತೆ. ಅದುವೇ **ಕಂಪ್ಯೂಟರ್ ಸಹಾಯದಿಂದ 'ಮಾಲಿಕ್ಯುಲಾರ್ ಸಿಮ್ಯುಲೇಷನ್' ತಂತ್ರವನ್ನು ಬಳಸಿಕೊಂಡು ಪ್ರೋಟೀನು ಸಂಯೋಜನೆಯೊಂದನ್ನು ಸಿದ್ಧಪಡಿಸಿ ಹಣ್ಣಿನ ಮೇಲ್ಭಾಗಕ್ಕೆ ಲೇಪನ ಮಾಡುವುದು!** ಈ ಸುದ್ದಿಯನ್ನು ಮೊನ್ನೆ ನೇಚರ್ ಪತ್ರಿಕೆಯಲ್ಲಿ ಚೀನಾದ ಶಾಂಕ್ಸಿ ನಾರ್ಮಲ್ ಯೂನಿವರ್ಸಿಟಿಯ ವಿಜ್ಞಾನಿಗಳು ವರದಿ ಮಾಡಿದ್ದಾರೆ.
- **'ಲೈಸೋಜೈಮು' ಎನ್ನುವ ಕಿಣ್ವಗಳಲ್ಲಿರುವ ಡೈ ಸಲ್ಫೈಡ್ ಬಂಧಗಳನ್ನು ಇಳಿಸಿ ಹಾಗೂ ಆಲ್ಫಾ ಸುರುಳಿ ಆಕಾರವನ್ನು ರೂಪಾಂತರಿಸಿ, ಸೋಡಿಯಂ ಆಲ್ಜಿನೇಟ್ ಮತ್ತು ಸೆಲ್ಯುಲೋಸಿನ ಸೂಕ್ಷ್ಮಕಣಗಳೊಂದಿಗೆ ಹೊಂದಿಸಿ ಸಿದ್ಧಪಡಿಸಿರುವ ಪ್ರೋಟೀನ್ ಇದು. ಸೋಡಿಯಂ ಆಲ್ಜಿನೇಟ್ ನೀರಿನಲ್ಲಿ ಕರಗುವ ಒಂದು ನೈಸರ್ಗಿಕ ಪಾಲಿಸ್ಯಾಕರೈಡ್ ಆಗಿದ್ದು ಎಮಲ್ಸಿಕಾರಕವಾಗಿ ಬಳಸಬಹುದಾಗಿದೆ. ಸೆಲ್ಯುಲೋಸ್ ಒಂದು ನೈಸರ್ಗಿಕ ಪಾಲಿಮರ್. ಈ ಮೂರು ಪದಾರ್ಥಗಳನ್ನು ಬಳಸಿ ತಯಾರಿಸಿದ ಈ ಪ್ರೋಟೀನು ಹಣ್ಣಿನ ಹೊರಪದರೊಂದಿಗೆ ಬೆರೆತುಕೊಂಡು ಹಣ್ಣಿನಲ್ಲಿರುವ ನೀರಿನಾಂಶವನ್ನು ಹೊರಬಿಡದೆ, ಸೂಕ್ಷ್ಮಾಣುಜೀವಿ ಗಳನ್ನು ಬೆಳೆಯಗೊಡದಂತೆ ಹಣ್ಣನ್ನು ರಕ್ಷಿಸುತ್ತದೆ. ಈ ಪ್ರೋಟೀನು ನೀರನ್ನು ಇಷ್ಟಪಡದ ಸ್ವಭಾವದಾದ್ದರಿಂದ ಹೊರಗಿನಿಂದ ಹಣ್ಣಿನ ಮೇಲೆ ನೀರು ಬಿದ್ದರೂ ಅದನ್ನು ಹೀರಿಕೊಳ್ಳುವುದಿಲ್ಲ. ಲೇಪಿಸಲೂ ಸುಲಭ. ತನ್ಮೂಲಕ ಹಣ್ಣನ್ನು ಕೆಡದಂತೆ ಸಂಪೂರ್ಣವಾಗಿ ರಕ್ಷಿಸಿಡುತ್ತದೆ.**
- ಕಟಾವು ಮಾಡಿತಂದ ಹಣ್ಣುಗಳು ಗಾಳಿಗೆ ತೆರೆದಿಟ್ಟಾಗ ವೇಗವಾಗಿ ಆಕ್ಸಿಡೀಕರಣಕ್ಕೊಳಗಾಗುತ್ತವೆ. ಆಗ ಪೋಷಕಾಂಶಗಳೂ ನಷ್ಟವಾಗಿ, ಸೂಕ್ಷ್ಮಾಣುಜೀವಿಗಳೂ ಹಣ್ಣಿನ ಒಳಪ್ರವೇಶಿಸಲು ಅನುಕೂಲ ವಾತಾವರಣ ಸೃಷಿಯಾಗುತ್ತದೆ. ಆದರೆ ವಿಜ್ಞಾನಿಗಳು ರೂಪಿಸಿರುವ ಪ್ರೋಟೀನ್ ಸಂಯೋಜನೆಯು ಇವೆಲ್ಲವನ್ನೂ ನಿವಾರಿಸುವ ಅತ್ಯುತ್ತಮ ಗುಣವುಳ್ಳವಾಗಿವೆ ಹಾಗೂ ಇದನ್ನು, ಕತ್ತರಿಸಿದ ಹಣ್ಣಿನ ತೊಳೆಗಳನ್ನೂ ತಾಜಾವಾಗಿರಿಸಲು ಬಳಸಬಹುದಾದ್ದರಿಂದ ಜಾಗತಿಕವಾಗಿ ಎದುರಿಸುತ್ತಿರುವ ಆಹಾರ ತ್ಯಾಜ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ನಿವಾರಿಸಲು ಇದೂ ಒಂದು ಉತ್ತಮ ಮತ್ತು ಸುಸ್ಥಿರ ಪರಿಹಾರವಾಗಿ ಹೊರಹೊಮ್ಮಲಿದೆ ಎನ್ನುವುದು ವಿಜ್ಞಾನಿಗಳ ಆಶಯ.
- **ಈ ಪ್ರೋಟೀನು ಹಣ್ಣುಗಳ ಅವಧಿಯನ್ನು ಸುಮಾರು ಎರಡರಿಂದ ಐದು ಪಟ್ಟು ವಿಸ್ತರಿಸುವುದಲ್ಲದೆ, ಸುಮಾರು ಹದಿನೇಳು ರೀತಿಯ ಹಣ್ಣುಗಳನ್ನು ಸಂರಕ್ಷಿಸಲು ಈ ತಂತ್ರವನ್ನು ಬಳಸಬಹುದಾಗಿದೆಯಂತೆ.** ಹಣ್ಣುಗಳಲ್ಲಿ ಕೆಲವು ಕಟಾವು ಮಾಡಿದ ನಂತರವೂ ಮಾಗಲು ಬೇಕಾದ **ಹಾರ್ಮೋನ್, ಇಥಿಲೀನ್** ಉತ್ಪಾದನೆಯಾಗುವುದರಿಂದ ಮಾಗುವುದು ಮುಂದುವರೆಯುತ್ತದೆ. ಉದಾಹರಣೆಗೆ, **ಬಾಳೆಹಣ್ಣು, ಮಾವು, ಟೊಮ್ಯಾಟೋ ಇತ್ಯಾದಿ. ಕೆಲವು ಹಣ್ಣುಗಳಲ್ಲಿ ಕಟಾವು ಮಾಡಿದ ನಂತರ ಇಥಿಲೀನ್ ಉತ್ಪಾದನೆಯಾಗದಿರುವುದರಿಂದ ಮರದಲ್ಲಿಯೇ ಪೂರ್ತಿ ಹಣ್ಣಾದ ನಂತರವಷ್ಟೇ ಕಟಾವು ಮಾಡಬೇಕಿರುತ್ತದೆ**. ಉದಾಹರಣೆಗೆ ಸ್ಟ್ರಾಬೆರಿ, ಕಿತ್ತಳೆ, ದ್ರಾಕ್ಷಿ ಮುಂತಾದವು. ಆದರೆ ಈ ಪ್ರೋಟೀನನ್ನು ಇಂಥ ಎರಡೂ ರೀತಿಯ ಹಣ್ಣುಗಳಲ್ಲಿ ಬಳಸಿ ಸಂರಕ್ಷಿಸ ಬಹುದು ಎನ್ನುವುದು ಮತ್ತೊಂದು ಪ್ರಯೋಜನ.
- ಅಲ್ಲದೇ, ಸಂರಕ್ಷಿಸಿದಷ್ಟೂ ದಿನಗಳವರೆಗೆ ಪೋಷಕಾಂಶಗಳ ಪ್ರಮಾಣ ಸುಮಾರು ಪ್ರತಿಶತ 60-98ರಷ್ಟು ಉಳಿದಿತ್ತಂತೆ. ಅರ್ಥಾತ್, ಅವಧಿ ವಿಸ್ತರಣೆಯಾದಷ್ಟೂ ಹಲವು ದಿನಗಳವರೆಗೆ ಪೋಷಕಾಂಶಗಳೂ ಸುಸ್ಥಿರವಾಗಿರುತ್ತವೆ.
- ಹಣ್ಣಿನೊಳಗಿನ ನೀರಿನಾಂಶವನ್ನೂ ನಷ್ಟವಾಗದಂತೆ ಕಾಪಾಡುವುದರಿಂದ ಹಣ್ಣಿನ ತೂಕದಲ್ಲಿಯೂ ಇಳಿಕೆಯಾಗುವುದಿಲ್ಲ. ಇತರೆ ಆಹಾರ ಸಂಸ್ಕರಣಾ ವಿಧಾನಗಳಲ್ಲಿ ಪೋಷಕಾಂಶಗಳು ನಷ್ಟವಾಗುವ

Dr. Rajkumar IAS/KAS Academy

ಸಾಧ್ಯತೆ ಇದ್ದು, ಇಲ್ಲಿ ಹಣ್ಣುಗಳು ತಾಜಾರೂಪದಲ್ಲಿ ಸಿಗುವುದಲ್ಲದೆ, ಪೋಷಕಾಂಶಗಳನ್ನೂ ಪೂರ್ಣಪ್ರಮಾಣದಲ್ಲಿ ಉಳಿಸಿಕೊಡುತ್ತದೆ.

- ಹಣ್ಣುಗಳನ್ನು ಸಂರಕ್ಷಿಸುವ ಇತರೆ ವಿಧಾನಗಳಿಗೆ ಹೋಲಿಸಿದರೆ ಇಂಗಾಲ ಹೊರಸೂಸುವಿಕೆಯಲ್ಲಿಯೂ ಸುಮಾರು ಪ್ರತಿಶತ 90ರಷ್ಟು ಇಳಿಕೆಯಾಗುತ್ತ ದಂತೆ.
- ಜೊತೆಗೆ ಹೀಗೆ ಲೇಪಿಸುವ ಪ್ರೋಟೀನ್‌ನ ಪದರವು ತಿನ್ನಬಲ್ಲದಾದ್ದರಿಂದ ಅಕಸ್ಮಾತಾಗಿ ಹೊಟ್ಟೆ ಸೇರಿದರೂ ತೊಂದರೆಯಿಲ್ಲ. ಹಣ್ಣುಗಳನ್ನು ಕತ್ತರಿಸುವ ಮುಂಚೆ ಹೊರಪದರವನ್ನು ತೊಳೆಯುವಾಗ ಈ ಪ್ರೋಟೀನ್‌ನ ಲೇಪನವನ್ನು ತೊಳೆದು ಸ್ವಚ್ಛಗೊಳಿಸುವುದೂ ಸುಲಭವಂತೆ. ಸಾಂಪ್ರದಾಯಿಕ ವಿಧಾನಗಳು ಕೆಲವೇ ಹಣ್ಣುಗಳನ್ನು ಮಾತ್ರವೇ ಸಂರಕ್ಷಿಸಲು ಬಳಕೆಯಾದರೆ, ಈ ಪ್ರೋಟೀನ್ ವಿಧಾನವು ವೈವಿಧ್ಯಮಯ ಹಣ್ಣುಗಳನ್ನು ಸಂರಕ್ಷಿಸಲು ಬಳಕೆಯಾಗಬಲ್ಲ, ಆರ್ಥಿಕವಾಗಿಯೂ ಅಗ್ಗವಾಗಿರುವ, ಸುರಕ್ಷಿತ ಹಾಗೂ ಪರಿಸರಸ್ನೇಹಿ ಉಪಾಯ ಎನ್ನುತ್ತಾರೆ, ವಿಜ್ಞಾನಿಗಳು.

IAS/KAS Academy



## ❖ ಭಿತ್ತಿ ಉಳಿಸಿ ದೂರ ಸರಿದರು

ಸಂದರ್ಭ: ಭೈರಪ್ಪನವರ ಜೊತೆಗೆ ಕನ್ನಡ ಸಾರಸ್ವತಲೋಕದ ಒಂದು ಮಹಾಧ್ಯಾಯ ಅಂತ್ಯ ಗೊಂಡಿದೆ. ಭೈರಪ್ಪ ಅವರು ತಮ್ಮ ಸುದೀರ್ಘ ಬದುಕಿನಲ್ಲಿ ಕನ್ನಡ ಸಾಹಿತ್ಯಲೋಕಕ್ಕೆ ಮತ್ತು ಸಹೃದಯರಿಗೆ ರಸಾನಂದದ ಜಲಪಾತವನ್ನೇ ಒದಗಿಸಿದ್ದಾರೆ.

- **'ಪದ್ಮಭೂಷಣ' , 'ಸರಸ್ವತಿ ಸಮ್ಮಾನ್' ಪುರಸ್ಕೃತ ಕಾದಂಬರಿಕಾರ ಪ್ರೊ.ಎಸ್.ಎಲ್ .ಭೈರಪ್ಪ (94).**
- ಕೇವಲ ಕಾದಂಬರಿಗಳನ್ನು ರಚಿಸುತ್ತೇನೆ ಎಂದು ಭೀಷ್ಮನಿಷ್ಠೆಯಿಂದ ಸಂಕಲ್ಪ ಮಾಡಿ ಬರೆದವರು ಭೈರಪ್ಪನವರು. ಸಾಹಿತ್ಯಕೃಷಿಯ ಪ್ರಾರಂಭದ ಅವಧಿಯಲ್ಲಿ ಸಣ್ಣಕತೆಗಳನ್ನು ಬರೆದರಾದರೂ ನಂತರ ತಮ್ಮ ಶಕ್ತಿ ಮತ್ತು ವಿಸ್ತಾರ ದೃಷ್ಟಿಗೆ ಅನುಕೂಲವಾಗುವಂತಹ ಕಾದಂಬರಿಯ ಪ್ರಕಾರವನ್ನೇ ಅವರ ಅಭಿವ್ಯಕ್ತಿಗೆ ಆರಿಸಿಕೊಂಡರು.
- ತಾವು ಅಪಾರ ಪ್ರೀತಿ ಇಟ್ಟುಕೊಂಡಿದ್ದ ಹಿಂದೂಸ್ತಾನಿ ಶೈಲಿಯ ಸಂಗೀತದಂತೆಯೇ ಮಾನವ ಸ್ವಭಾವದ ಹಲವು ಮಗ್ಗಲುಗಳನ್ನು ವಿಸ್ತಾರವಾಗಿ ಅನ್ವೇಷಿಸುವಂತಹ ರೀತಿಯಲ್ಲಿ ಕಾದಂಬರಿಗಳನ್ನು ರಚಿಸಿದರು. ಇವು ಭಾರತೀಯತೆಯ ಶ್ರುತಿಗೂ, ಜೀವನದ ಸತ್ಯ, ಶಿವ, ಸೌಂದರ್ಯಗಳ ಲಯಸಂಚಾರಕ್ಕೂ ಬದ್ಧವಾಗಿವೆ.

### ಭೈರಪ್ಪ: ಯಶಸ್ಸಿನ ಮೆಟ್ಟಿಲುಗಳು

| | |
|---|---|
| **1931 ಆಗಸ್ಟ್ 20**: | ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನ ಸಂತೇಶಿವರದಲ್ಲಿ ಜನನ |
| **1958-60**: | ಹುಬ್ಬಳ್ಳಿಯ ಕಾಡಸಿದ್ಧೇಶ್ವರ ಕಾಲೇಜಿನಲ್ಲಿ ಅಧ್ಯಾಪಕ |
| **1962**: | ಬರೋಡದ ಸಯ್ಯಾಜಿರಾವ್ ವಿಶ್ವವಿದ್ಯಾಲಯದಕ್ಕೆ ಸಲ್ಲಿಸಿದ 'ಸತ್ಯ ಮತ್ತು ಸೌಂದರ್ಯ' ಮಹಾ ಪ್ರಬಂಧಕ್ಕೆ ಪಿಎಚ್.ಡಿ ಪದವಿ |
| **1960-66**: | ಗುಜರಾತಿನ ಸರ್ದಾರ್ ಪಟೇಲ್ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕ |
| **1961**: | 'ಧರ್ಮಶ್ರೀ' ಮೊದಲ ಕಾದಂಬರಿ ಪ್ರಕಟ |
| **1966**: | 'ವಂಶವೃಕ್ಷ' ಕಾದಂಬರಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ |
| **1967-1971** | ನವದೆಹಲಿಯ ರಾಷ್ಟ್ರೀಯ ಶಿಕ್ಷಣ ಮತ್ತು ತರಬೇತಿ ಶಿಕ್ಷಣ ಸಂಸ್ಥೆಯಲ್ಲಿ ಸಹ ಪ್ರಾಧ್ಯಾಪಕ |
| **1975**: | 'ದಾಟು' ಕಾದಂಬರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ |
| **1991**: | ಮೈಸೂರಿನ ಪ್ರಾದೇಶಿಕ ಶಿಕ್ಷಣ ಕಾಲೇಜಿನ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿ ನಿವೃತ್ತಿ |
| **1996**: | 'ಭಿತ್ತಿ' ಆತ್ಮಕಥನ ಪ್ರಕಟ |
| **1999**: | ಕನಕಪುರದಲ್ಲಿ ನಡೆದ 67ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ |
| **2005**: | ಕರ್ನಾಟಕ ಸರ್ಕಾರ ನೀಡುವ ಪಂಪ ಪ್ರಶಸ್ತಿ |
| **2007**: | ಗುಲಬರ್ಗಾ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ |
| **2010**: | 'ಸರಸ್ವತಿ ಸಮ್ಮಾನ್' ಪ್ರಶಸ್ತಿ |
| **2011**: | ಕನ್ನಡ ವಿಶ್ವ ವಿದ್ಯಾಲಯದ 'ನಾಡೋಜ' ಗೌರವ ಪದವಿ |
| **2014**: | ಬೆಟಗೇರಿ ಕೃಷ್ಣಶರ್ಮ ಪ್ರಶಸ್ತಿ |
| **2014**: | ನ್ಯಾಷನಲ್ ರೀಸರ್ಚ್ ಪ್ರೊಫೆಸರ್ |
| **2017**: | ಕನ್ನಡ ಸಾಹಿತ್ಯ ಪರಿಷತ್ತಿನ 'ನೃಪತುಂಗ ಪ್ರಶಸ್ತಿ' |
| **2015**: | ಸಾಹಿತ್ಯ ಅಕಾಡೆಮಿ ಫೆಲೋಶಿಪ್ ಗೌರವಕ್ಕೆ ಭಾಜನ |
| **2016**: | 'ಪದ್ಮಶ್ರೀ ಪ್ರಶಸ್ತಿ'ಗೆ ಭಾಜನ |
| **2023**: | 'ಪದ್ಮಭೂಷಣ ಪ್ರಶಸ್ತಿ' ಗೌರವ |

**ಪ್ರಮುಖ ಕಾದಂಬರಿಗಳು**

ಮತದಾನ, ವಂಶವೃಕ್ಷ (1965), ಜಲಪಾತ (1967), ನಾಯಿನೆರಳು (1968), ತಬ್ಬಲಿಯು ನೀನಾದೆ ಮಗನೆ (1970), ಗೃಹಭಂಗ (1970), ನಿರಾಕರಣ (1971), ಗ್ರಹಣ (1972), ದಾಟು (1973), ಅನ್ವೇಷಣ (1976), ಪರ್ವ (1979), ನೆಲೆ (1983), ಸಾಕ್ಷಿ (1986), ಅಂಚು (1990), ತಂತು (1993), ಸಾರ್ಥ (1998), ಮಂದ್ರ (2002), ಆವರಣ (2007), ಕವಲು (2010), ಯಾನ (2014), ಉತ್ತರಕಾಂಡ (2017)

**ಚಲನಚಿತ್ರವಾಗಿರುವ ಕಾದಂಬರಿಗಳು**

- ವಂಶವೃಕ್ಷ - 1972
- ತಬ್ಬಲಿಯು ನೀನಾದೆ ಮಗನೆ- 1977
- ಮತದಾನ- 2001
- ನಾಯಿ ನೆರಳು- 2006

**ಕಿರುತೆರೆ ಧಾರಾವಾಹಿಯಾದ ಕಾದಂಬರಿಗಳು**

- ಗೃಹಭಂಗ
- ದಾಟು (ಹಿಂದಿ)

## ❖ ಕತಾರ್‌ನಲ್ಲಿ ಯುಪಿಐ ಸೇವೆ

ಸಂದರ್ಭ: ಕ್ಯೂಆರ್ ಕೋಡ್ ಆಧಾರಿತ ಯುಪಿಐ ಪಾವತಿ ವ್ಯವಸ್ಥೆ ಯನ್ನು ಕತಾರ್‌ನ ಆದ್ಯಂತ ಬಳಕೆಗೆ ಲಭ್ಯವಾಗಿಸಲಾಗಿದೆ ಎಂದು ಎನ್‌ಪಿಸಿಐ ಹೇಳಿದೆ.

- ಭಾರತದಿಂದ ಕತಾರ್‌ಗೆ ತೆರಳುವವರು ಅಲ್ಲಿನ ಪ್ರಮುಖ ಪ್ರವಾಸಿ ತಾಣಗಳಲ್ಲಿ ಇನ್ನು ಮುಂದೆ ಯುಪಿಐ ಬಳಸಿ ಹಣ ಪಾವತಿಸಬಹುದು ಎಂದು ಎನ್‌ಪಿಸಿಐ ಪ್ರಕಟಣೆ ತಿಳಿಸಿದೆ.
- ಕತಾರ್‌ಗೆ ಭೇಟಿ ನೀಡುವ ವಿದೇಶಿಗರ ಪಟ್ಟಿಯಲ್ಲಿ ಭಾರತೀಯರು ಎರಡನೆಯ ಸ್ಥಾನದಲ್ಲಿದ್ದಾರೆ. ಯುಪಿಐ ಪಾವತಿ ಸೌಲಭ್ಯವು ಕತಾರ್‌ನಲ್ಲಿ ಲಭ್ಯವಾಗಿರುವ ಕಾರಣದಿಂದಾಗಿ ಅಲ್ಲಿ ವಹಿವಾಟು ನಡೆಸುವುದು ಸುಲಭವಾಗುತ್ತದೆ, ಭಾರತೀಯರು ಅಲ್ಲಿ ನಗದು ಇರಿಸಿಕೊಳ್ಳಬೇಕಾದ ಅಗತ್ಯ ಇನ್ನಿಲ್ಲವಾಗುತ್ತದೆ, ಕರೆನ್ಸಿ ವಿನಿಮಯದ ರಗಳೆ ತಪ್ಪುತ್ತದೆ ಎಂದು ಪ್ರಕಟಣೆ ಹೇಳಿದೆ.
- ಈ ವ್ಯವಸ್ಥೆಯಿಂದಾಗಿ ಕತಾರ್‌ನಲ್ಲಿನ ಚಿಲ್ಲರೆ ವಹಿವಾಟುಗಳು ಹಾಗೂ ಪ್ರವಾಸೋದ್ಯಮಕ್ಕೆ ಕೂಡ ಅನುಕೂಲ ಆಗಲಿದೆ ಎಂದು ಅದು ಹೇಳಿದೆ.

## ❖ ₹69 ಸಾವಿರ ಕೋಟಿ ಪ್ಯಾಕೇಜ್

ಸಂದರ್ಭ: ಭಾರತದಲ್ಲಿ ಹಡಗು ನಿರ್ಮಾಣ ಚಟುವಟಿಕೆಗಳಿಗೆ ಮತ್ತೆ ಜೀವ ನೀಡುವ ಉದ್ದೇಶದಿಂದ ಕೇಂದ್ರ ಸಚಿವ ಸಂಪುಟವು ₹69,725 ಕೋಟಿ ಮೊತ್ತದ ಪ್ಯಾಕೇಜ್‌ಗೆ ಒಪ್ಪಿಗೆ ನೀಡಿದೆ.

- ಸರ್ಕಾರದ ಅಧಿಕೃತ ಹೇಳಿಕೆ ಪ್ರಕಾರ ಈ ಪ್ಯಾಕೇಜ್ ಅಡಿಯಲ್ಲಿ ನಾಲ್ಕು ಅಂಶಗಳು ಇರಲಿವೆ. ದೇಶದಲ್ಲಿ ಹಡಗು ನಿರ್ಮಾಣ ಸಾಮರ್ಥ್ಯವನ್ನು ಹೆಚ್ಚಿಸುವುದು, ದೀರ್ಘಾವಧಿಯಲ್ಲಿ ಈ ಚಟುವಟಿಕೆಗಳಿಗೆ ಹಣಕಾಸಿನ ನೆರವು ಹೆಚ್ಚಿಸುವುದು, ಹೊಸ ಹಾಗೂ ಈಗಾಗಲೇ ಇರುವ ಹಡಗು ನಿರ್ಮಾಣ ಘಟಕಗಳಿಗೆ ಉತ್ತೇಜನ ನೀಡುವುದು, ತಾಂತ್ರಿಕ ಸಾಮರ್ಥ್ಯ ಮತ್ತು ಕೌಶಲವನ್ನು ಹೆಚ್ಚಿಸುವುದು ಆ ಅಂಶಗಳು.
- ಹಡಗು ನಿರ್ಮಾಣ ವಲಯದಲ್ಲಿ ದೇಶವು 'ಆತ್ಮನಿರ್ಭರ' ಆಗಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಈಚೆಗೆ ಹೇಳಿದ್ದರು. ಭಾರತವು ವಿದೇಶಿ ಹಡಗು ನಿರ್ಮಾಣ ಕಂಪನಿಗಳಿಂದ ಸೇವೆ ಪಡೆಯುವುದಕ್ಕೆ ವಾರ್ಷಿಕ ಅಂದಾಜು ₹6 ಲಕ್ಷ ಕೋಟಿ ಪಾವತಿಸುತ್ತಿದೆ ಎಂದು ತಿಳಿಸಿದ್ದರು.
- '50 ವರ್ಷಗಳ ಹಿಂದೆ ನಾವು ನಡೆಸುತ್ತಿದ್ದ ವ್ಯಾಪಾರ ಚಟುವಟಿಕೆಗಳಲ್ಲಿ ಬಳಕೆಯಾಗುತ್ತಿದ್ದ ಹಡಗುಗಳ ಪೈಕಿ ಶೇ 40ರಷ್ಟು ಭಾರತದಲ್ಲೇ ತಯಾರಾದ ವಾಗಿದ್ದವು. ಆದರೆ ಈಗ ಅವುಗಳ ಪಾಲು ಶೇ 5ಕ್ಕೆ ಕುಸಿದಿದೆ' ಎಂದು ಪ್ರಧಾನಿ ಹೇಳಿದ್ದರು.
- **ಜಾಗತಿಕ ಮಟ್ಟದಲ್ಲಿ ಹಡಗು ನಿರ್ಮಾಣ ಮಾರುಕಟ್ಟೆಯಲ್ಲಿ ಈಗ ಭಾರತದ ಪಾಲು ಶೇ 0.06ರಷ್ಟು ಮಾತ್ರವೇ ಇದೆ. ಈ ಉದ್ಯಮದಲ್ಲಿ ಭಾರತವು 20ನೇ ಸ್ಥಾನ ಪಡೆದಿದೆ. ಆದರೆ 2030ರೊಳಗೆ ಮೊದಲ 10 ಸ್ಥಾನಗಳ ಪೈಕಿ ಒಂದರಲ್ಲಿ ತಾನಿರಬೇಕು, 2047ರ ವೇಳೆಗೆ ಟಾಪ್-5 ದೇಶಗಳ ಪಟ್ಟಿಯಲ್ಲಿ ತಾನಿರಬೇಕು ಎಂದು ಭಾರತ ಬಯಸಿದೆ.**
- ಈಗ ಘೋಷಣೆ ಮಾಡಿರುವ ಪ್ಯಾಕೇಜ್‌ನಿಂದಾಗಿ ದೇಶದಲ್ಲಿ ಸರಿ ಸುಮಾರು 30 ಲಕ್ಷ ಉದ್ಯೋಗ ಸೃಷ್ಟಿ ಯಾಗುವ ನಿರೀಕ್ಷೆ ಇದೆ, ದೇಶದಲ್ಲಿ ₹4.5 ಲಕ್ಷ ಕೋಟಿ ಹೂಡಿಕೆ ಆಗಲಿದೆ ಎಂದು ಸರ್ಕಾರದ ಹೇಳಿಕೆಯಲ್ಲಿ ತಿಳಿಸಲಾಗಿದೆ.
- ಆರ್ಥಿಕ ಪರಿಣಾಮ ಮಾತ್ರವೇ ಅಲ್ಲದೆ, ಈ ಉಪಕ್ರಮವು ದೇಶದ ಇಂಧನ ಮತ್ತು ಆಹಾರ ಭದ್ರತೆಯನ್ನು ಹೆಚ್ಚಿಸುತ್ತದೆ, ಮಹತ್ವದ ಸಮುದ್ರ ಮಾರ್ಗಗಳಲ್ಲಿ ಸ್ಥಿರತೆ ತರುತ್ತದೆ ಎಂದು ಹೇಳಿಕೆಯಲ್ಲಿ ವಿವರಿಸಲಾಗಿದೆ.

## ❖ ಎಫ್‌ಎಂಸಿಜಿ: ತೂಕ ಹೆಚ್ಚಳಕ್ಕೆ ಒಲವು

ಸಂದರ್ಭ: ಪರಿಷ್ಕೃತ ಜಿಎಸ್‌ಟಿ ದರವು ಜಾರಿಗೆ ಬಂದ ನಂತರದಲ್ಲಿ ಎಫ್‌ಎಂಸಿಜಿ ವಲಯದ ಕಂಪನಿಗಳನ್ನು ಸಮಸ್ಯೆಯೊಂದು ಕಾಡುತ್ತಿದೆ.

- ₹2, ₹5, ₹10 ಬೆಲೆಗೆ ಮಾರಾಟ ಆಗುತ್ತಿದ್ದ ವಿವಿಧ ಉತ್ಪನ್ನಗಳ ಬೆಲೆಯನ್ನು ಜಿಎಸ್‌ಟಿ ಇಳಿಕೆಗೆ ಅನುಗುಣವಾಗಿ ಕಂಪನಿಗಳು ತಗ್ಗಿಸಿವೆ. ಆದರೆ, ಜಿಎಸ್‌ಟಿ ಪರಿಷ್ಕರಣೆಯ ನಂತರದ ಬೆಲೆಯು ವಸ್ತುಗಳ ಖರೀದಿಗೆ, ಮಾರಾಟಕ್ಕೆ ಅನುಕೂಲಕರವಾದ ಹಂತದಲ್ಲಿ ಉಳಿದಿಲ್ಲ.
- ಉದಾಹರಣೆಗೆ, ₹5ಕ್ಕೆ ಮಾರಾಟ ಆಗುತ್ತಿದ್ದ ಜನಪ್ರಿಯ ಪಾರ್ಲೆ-ಜಿ ಬಿಸ್ಕತ್ ಪ್ಯಾಕಿನ ಬೆಲೆಯು ಈಗ ₹4.50 ಆಗಿದೆ. ಈ ಹಿಂದೆ ₹2ಕ್ಕೆ ಮಾರಾಟ ಆಗುತ್ತಿದ್ದ ಶಾಂಪೂ ಪೌಚ್‌ನ ಬೆಲೆ ಈಗ ₹1.75 ಆಗಿದೆ. ಇಂತಹ ಪೌಚ್‌ಗಳಲ್ಲಿ, ಪೊಟ್ಟಣಗಳಲ್ಲಿ ಇರುವ ಉತ್ಪನ್ನಗಳ ತೂಕವನ್ನು ಹೆಚ್ಚು ಮಾಡಲು ತಕ್ಷಣಕ್ಕೆ ಸಾಧ್ಯವಾಗದೆ ಇರುವ ಕಾರಣಕ್ಕೆ, ಬೆಲೆಯನ್ನು ಈ ಬಗೆಯಲ್ಲಿ ಕಡಿಮೆ ಮಾಡಲಾಗಿದೆ ಎಂದು ಕಂಪನಿಯ ಪ್ರತಿನಿಧಿಗಳು ಹೇಳಿದ್ದಾರೆ.
- ಸರ್ಕಾರದ ನಿರ್ದೇಶನವನ್ನು ಪಾಲಿಸುವ ಉದ್ದೇಶದಿಂದ ಜನಪ್ರಿಯ ಬೆಲೆ ಶ್ರೇಣಿಯ ಉತ್ಪನ್ನ ಗಳನ್ನು ಈ ಬಗೆಯಲ್ಲಿ ಅಸಾಂಪ್ರದಾಯಿಕ ಬೆಲೆಗೆ ಮಾರಾಟ ಮಾಡಲಾಗುತ್ತಿದೆ ಎಂದು ಉದ್ಯಮದ ಪ್ರತಿನಿಧಿಗಳು ಹೇಳಿದ್ದಾರೆ. ಆದರೆ ಇದು ತಾತ್ಕಾಲಿಕ ಕ್ರಮ ಮಾತ್ರ ಎಂದು ಅವರು ಸ್ಪಷ್ಟಪಡಿಸಿದ್ದಾರೆ.
- 'ಇದು ನೂರಕ್ಕೆ ನೂರರಷ್ಟು ತಾತ್ಕಾಲಿಕ ಕ್ರಮ... ಅಕ್ಟೋಬರ್ ಮತ್ತು ನವೆಂಬರ್‌ನಲ್ಲಿ ಬಳಸುವ ಪೊಟ್ಟಣಗಳು ಮುದ್ರಣ ಆಗಿವೆ. ಈಗ ತೂಕದಲ್ಲಿ ಬದಲಾವಣೆ ತಂದು ಎಂಆರ್‌ಪಿಯನ್ನು ಮೊದಲಿನ

Dr. Rajkumar IAS/KAS Academy

ಹಂತದಲ್ಲಿ ಇರಿಸುವುದು ಕಷ್ಟ. ಹೀಗಾಗಿ, ನಾವು ಜಿಎಸ್‌ಟಿ ಪರಿಷ್ಕರಣೆಯ ಪ್ರಯೋಜನವನ್ನು ಈ ಬಗೆಯ ಅಸಾಂಪ್ರದಾಯಿಕ ಕ್ರಮದ ಮೂಲಕ ಗ್ರಾಹಕರಿಗೆ ವರ್ಗಾವಣೆ ಮಾಡುತ್ತಿದ್ದೇವೆ' ಎಂದು ಪಾರ್ಲೆ ಪ್ರೊಡಕ್ಟ್ಸ್‌ನ ಉಪಾಧ್ಯಕ್ಷ ಮಯಾಂಕ್ ಶಾ ತಿಳಿಸಿದ್ದಾರೆ.

- ಈ ಬೆಲೆಗೆ ಬಿಸ್ಕತ್ತಿನ ಪೊಟ್ಟಣ ಖರೀದಿಸುವಲ್ಲಿ ಗ್ರಾಹಕರು ಸಮಸ್ಯೆ ಅನುಭವಿಸುತ್ತಿದ್ದಾರೆಯೇ ಎಂಬ ಪ್ರಶ್ನೆಗೆ ಅವರು, 'ಗ್ರಾಹಕರು ಒಂದಕ್ಕಿಂತ ಹೆಚ್ಚು ಪೊಟ್ಟಣ ಖರೀದಿಸಬಹುದು ಅಥವಾ ಯುಪಿಐ ಮೂಲಕ ಪಾವತಿ ಮಾಡಬಹುದು' ಎಂದು ಉತ್ತರಿಸಿದರು.
- 'ಇವು ಕಂಪನಿಗಳು ಅನುಸರಿಸುತ್ತಿರುವ ಅಲ್ಪಾವಧಿಯ ಕ್ರಮಗಳು. ಕಂಪನಿಗಳು ಉತ್ಪನ್ನಗಳ ತೂಕವನ್ನು ಹೆಚ್ಚು ಮಾಡಿ ಜನಪ್ರಿಯ ಬೆಲೆ ಶ್ರೇಣಿಯಾದ ₹2, ₹5 ಹಾಗೂ ₹10ನ್ನು ಮತ್ತೆ ಜಾರಿಗೆ ತರುತ್ತವೆ. ಏಕೆಂದರೆ ನಾಲ್ಕೂವರೆ ರೂಪಾಯಿ ಪಾವತಿ ಮಾಡುವುದು ವಾಸ್ತವದಲ್ಲಿ ಸುಲಭವಲ್ಲ' ಎಂದು ನುವಾಮಾ ಇನ್‌ಸ್ಟಿಟ್ಯೂಷನ್ ಈಕ್ವಿಟೀಸ್ ಸಂಸ್ಥೆಯ ಅಬ್ನೀಶ್ ರಾಯ್ ಹೇಳಿದ್ದಾರೆ.

## ❖ 'ಭಾರತದ ಭೂ ಪ್ರದೇಶ ಖಾಲಿ ಮಾಡಿ: ಪಾಕ್‌ಗೆ ಭಾರತ ತರಾಟೆ'

ಸಂದರ್ಭ: 'ಪಾಕಿಸ್ತಾನವು ಭಯೋತ್ಪಾದಕರಿಗೆ ಆಶ್ರಯ ನೀಡಿ, ತನ್ನ ಸ್ವಂತ ಜನರ ಮೇಲೆ ಬಾಂಬ್ ದಾಳಿ ನಡೆಸುವ ಬದಲು ಅಲ್ಲಿನ ಆರ್ಥಿಕ ಸುಧಾರಣೆಗೆ ಗಮನಹರಿಸಲಿ' ಎಂದು ಭಾರತ ತೀಕ್ಷ್ಣವಾಗಿ ಹೇಳಿದೆ.

- ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯ (ಯುಎನ್‌ಎಚ್‌ಆರ್‌ಸಿ) 60ನೇ ಅಧಿವೇಶವನದಲ್ಲಿ ಮಾತನಾಡಿದ ಜಿನಿವಾದಲ್ಲಿರುವ ವಿಶ್ವಸಂಸ್ಥೆಯ ಭಾರತದ ಕಾಯಂ ಕಾನ್ಸುಲರ್ ಕ್ಷಿತಿಜ್ ತ್ಯಾಗಿ, ವಿಶ್ವಸಂಸ್ಥೆಯ ವೇದಿಕೆಯಲ್ಲಿ ಭಾರತದ ವಿರುದ್ಧ ಆಧಾರ ರಹಿತ ಮತ್ತು ಪ್ರಚೋದನಕಾರಿ ಹೇಳಿಕೆ ನೀಡಿದ ಪಾಕ್ ನಿಯೋಗವನ್ನು ತೀವ್ರ ತರಾಟೆಗೆ ತೆಗೆದುಕೊಂಡರು.
- 'ವಿರೋಧಾಭಾಸವನ್ನೇ ಸಾರುವ ಪಾಕ್ ನಿಯೋಗವು ವಿಶ್ವಸಂಸ್ಥೆಯ ವೇದಿಕೆಯನ್ನು ಭಾರತದ ವಿರುದ್ಧ ಆಧಾರ ರಹಿತ ಆರೋಪ ಮಾಡಲು ದುರ್ಬಳಕೆ ಮಾಡಿಕೊಳ್ಳುತ್ತಿದೆ' ಎಂದು ತ್ಯಾಗಿ ಆಕ್ಷೇಪ ವ್ಯಕ್ತಪಡಿಸಿದರು. ವಾರದ ಹಿಂದೆ ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ 24 ಜನರನ್ನು ಬಲಿ ಪಡೆದ ಸ್ಫೋಟವನ್ನು ನಿರ್ದಿಷ್ಟವಾಗಿ ಹೆಸರಿಸದೆ, 'ಪಾಕ್ ಮೊದಲು ತನ್ನ ದೇಶದ ಆರ್ಥಿಕ ಸ್ಥಿತಿ ಮತ್ತು ಅಲ್ಲಿನ ಮಾನವ ಹಕ್ಕುಗಳ ಸುಧಾರಣೆಗೆ ಗಮನ ಹರಿಸಲಿ' ಎಂದು ತಿರುಗೇಟು ನೀಡಿದರು.
- ಪಾಕ್ ಆಕ್ರಮಿತ ಕಾಶ್ಮೀರವನ್ನು ಉಲ್ಲೇಖಿಸಿ, 'ನೀವು ನಮ್ಮ ಭೂಪ್ರದೇಶವನ್ನು ಅಪೇಕ್ಷಿಸುವ ಬದಲು, ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಭಾರತದ ಭೂ ಪ್ರದೇಶವನ್ನು ಖಾಲಿ ಮಾಡುವುದೇ ಒಳ್ಳೆಯದು' ಎಂದು ಅವರು ಎಚ್ಚರಿಸಿದರು.
- ಪಾಕಿಸ್ತಾನವು ಭಯೋತ್ಪಾದನೆಯನ್ನು ರಫ್ತು ಮಾಡುವುದರಿಂದ ದೂರ ಇದ್ದು, ಕುಸಿದಿರುವ ಆರ್ಥಿಕತೆಯನ್ನು ಮೇಲೆತ್ತುವ ಕೆಲಸವನ್ನು ಮೊದಲು ಮಾಡಲಿ ಎಂದು ಅವರು ಹೇಳಿದ್ದಾರೆ.

## ❖ 'ಇ-ಪರಿಶೀಲನಾ ವಿಧಾನ' ಜಾರಿ: ಹೆಸರು ಅಳಿಸಿ ಹಾಕುವುದರ ದುರುಪಯೋಗ ತಪ್ಪಿಸಲು ಚುನಾವಣಾ ಆಯೋಗ ಕ್ರಮ

- ಮತದಾರರ ಪಟ್ಟಿಯಿಂದ ಹೆಸರು ಅಳಿಸಿ ಹಾಕುವ ಸೌಲಭ್ಯದ ದುರುಪಯೋಗ ತಪ್ಪಿಸಲು ಚುನಾವಣಾ ಆಯೋಗವು ಮೊಬೈಲ್ ಒಟಿಪಿ ಆಧಾರಿತ 'ಇ-ಪರಿಶೀಲನಾ ವಿಧಾನ' ವನ್ನು ಜಾರಿಗೊಳಿಸಿದೆ.
- ಪಟ್ಟಿಯಿಂದ ಹೆಸರು ತೆಗೆದುಹಾಕಲು ಅಥವಾ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡುವುದಕ್ಕೆ ಆಕ್ಷೇಪಣೆ ಸಲ್ಲಿಸುವ ವ್ಯಕ್ತಿಗಳ ಮೊಬೈಲ್ ಸಂಖ್ಯೆಗೆ ಇನ್ನು ಮುಂದೆ 'ಒಟಿಪಿ' ಬರಲಿದೆ. ಈ ಒಟಿಪಿ ನಮೂದಿಸಿದ ಬಳಿಕವೇ ಮುಂದಿನ ಪ್ರಕ್ರಿಯೆ ನಡೆಯಲಿದೆ.
- ಮತದಾರರ ಪಟ್ಟಿಯಿಂದ ಹೆಸರು ಅಳಿಸಿ ಹಾಕಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ, ಬೇರೆ ವ್ಯಕ್ತಿಯ ಹೆಸರು ಮತ್ತು ಮೊಬೈಲ್ ಸಂಖ್ಯೆ ದುರ್ಬಳಕೆ ಆಗುವ ಸಾಧ್ಯತೆ ಇತ್ತು. ಇದನ್ನು ತಪ್ಪಿಸಲು 'ಇ-

ಪರಿಶೀಲನಾ ವಿಧಾನ ಜಾರಿಗೆ ತರಲಾಗಿದೆ. ಮತದಾರರ ಪಟ್ಟಿಯಲ್ಲಿ ಏನೇ ಪರಿಷ್ಕರಣೆ ಆಗುವುದಿದ್ದರೂ ಅದಕ್ಕೂ ಮುನ್ನ ಮತದಾರನ ಮೊಬೈಲ್‌ಗೆ ಒಟಿಪಿ ಬರುತ್ತದೆ' ಎಂದು ಅಧಿಕಾರಿಯೊಬ್ಬರು ಹೇಳಿದರು.

- 'ಮತದಾರರು ಸಂಬಂಧಿಸಿದ ಕ್ಷೇತ್ರದ ಮತದಾರರ ಪಟ್ಟಿಯಿಂದ ತಮ್ಮ ಹೆಸರನ್ನು ಅಳಿಸಿ ಹಾಕುವಂತೆ ಕೋರಿ ಆನ್‌ಲೈನ್ ಮೂಲಕ ನಮೂನೆ –7 ಸಲ್ಲಿಸಬಹುದು. ಆದರೆ, ನಮೂನೆ-7 ಸಲ್ಲಿಕೆಯಾದ ಕೂಡಲೇ ಸ್ವಯಂಚಾಲಿತವಾಗಿ ತಮ್ಮ ಹೆಸರು ಅಳಿಸಿ ಹೋಗುತ್ತದೆ ಎಂದರ್ಥವಲ್ಲ' ಎಂದು ಆಯೋಗ ಸ್ಪಷ್ಟಪಡಿಸಿದೆ.
- ಕರ್ನಾಟಕದ ಆಳಂದ ವಿಧಾನಸಭಾ ಕ್ಷೇತ್ರದಲ್ಲಿ 5,994 ಮತದಾರರ ಹೆಸರು ಗಳನ್ನು ಪಟ್ಟಿಯಿಂದ ಕೈಬಿಡಲು ಯತ್ನಿಸಲಾಗಿತ್ತು ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಈಚೆಗೆ ಆರೋಪಿಸಿದ್ದರು. ಅದರ ಬೆನ್ನಲ್ಲೇ ಚುನಾವಣಾ ಆಯೋಗ 'ಇ-ಪರಿಶೀಲನಾ ವಿಧಾನ' ಜಾರಿಗೊಳಿಸಿದೆ.
- 'ಜ್ಞಾನೇಶ್‌ಜೀ ನಾವು ಮತಕಳ್ಳತನ ಕಂಡುಹಿಡಿದೆವು. ಆನಂತರ ನಿಮಗೆ ಬೀಗ ಹಾಕಲು ನೆನಪಾಯಿತು. ಈಗ ನಾವು ಇದರ ಹಿಂದಿನ ಕಳ್ಳರನ್ನೂ ಹಿಡಿಯುತ್ತೇವೆ' ಎಂದು ರಾಹುಲ್ ಗಾಂಧಿ ಪೋಸ್ಟ್ ಮಾಡಿದ್ದಾರೆ.

**5,994 ಅರ್ಜಿ ತಿರಸ್ಕೃತ**

- 'ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಹೆಸರು ಅಳಿಸಿ ಹಾಕಲು 6,018 ಜನರು ಆನ್‌ಲೈನ್ ಮೂಲಕ ನಮೂನೆ –7 ಸಲ್ಲಿಸಿದ್ದರು. ಪರಿಶೀಲಿಸಿದಾಗ ಇದರಲ್ಲಿ 24 ಅರ್ಜಿಗಳು ಮಾತ್ರ ನೈಜವಾಗಿದ್ದವು. ಉಳಿದ 5,994 ಅರ್ಜಿಗಳು ತಪ್ಪಾಗಿದ್ದು, ಅವುಗಳನ್ನು ತಿರಸ್ಕರಿಸಲಾಯಿತು' ಎಂದು ಚುನಾವಣಾ ಆಯೋಗ ಹೇಳಿದೆ.
- 'ಇ-ಪರಿಶೀಲನಾ ವಿಧಾನ 'ವನ್ನು ನಾವು ವಾರದ ಹಿಂದೆಯೇ ಜಾರಿಗೊಳಿಸಿದ್ದೇವೆ. ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲು ಯತ್ನಿಸಲಾಗಿತ್ತು ಎಂಬ ಆರೋಪಕ್ಕೆ ಚುನಾವಣಾ ಆಯೊಗದ ಪ್ರತಿಕ್ರಿಯೆ ಇದಲ್ಲ' ಎಂದು ಅಧಿಕಾರಿಗಳು ಹೇಳಿದ್ದಾರೆ.
- ನಾವು ಮತಕಳ್ಳತನದ ವಿಷಯ ಪ್ರಸ್ತಾಪಿಸಿದ ನಂತರವಷ್ಟೇ ಚುನಾವಣಾ ಆಯೋಗ ಇದಕ್ಕೆ ಬೀಗ ಹಾಕಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಎಸ್‌ಐಟಿಗೆ ಯಾವಾಗ ಆಳಂದ ಕ್ಷೇತ್ರದ ದಾಖಲೆಗಳನ್ನು ಹಸ್ತಾಂತರಿಸುತ್ತಾರೆ?

## ❖ ಮತ್ತೆ ವಿದೇಶದಿಂದ ಭಾರತಕ್ಕೆ ಚೀತಾಗಳು?

ಸಂದರ್ಭ: ಮತ್ತೊಮ್ಮೆ ಚೀತಾಗಳನ್ನು ದೇಶಕ್ಕೆ ತರುವ ವಿಚಾರವಾಗಿ ಆಫ್ರಿಕಾದ ಕೆಲವು ದೇಶಗಳೊಂದಿಗೆ ಭಾರತ ಮಾತುಕತೆ ನಡೆಸುತ್ತಿದೆ. ಬೋಟ್ಸ್‌ವಾನಾದಿಂದ ಡಿಸೆಂಬರ್‌ನಲ್ಲಿ 8–10 ಚೀತಾಗಳನ್ನು ತರುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

- ಅಳಿದುಹೋಗಿದ್ದ ಚೀತಾಗಳನ್ನು ಭಾರತದಲ್ಲಿ ಮರುಪರಿಚಯಿಸುವ ಮಹತ್ವದ ಯೋಜನೆಯು 'ಅತ್ಯುತ್ತಮ ಯಶಸ್ಸು' ಕಂಡಿದೆ. ಆರಂಭಿಕ ಸವಾಲುಗಳನ್ನು ಮೀರಿ ಯೋಜನೆಯು ಯಶಸ್ವಿಯಾಗಿದೆ ಎಂದು 'ಪ್ರಾಜೆಕ್ಟ್ ಚೀತಾ' ಕ್ಕೆ ಸಂಬಂಧಿಸಿದ ಅಧಿಕಾರಿಗಳು ತಿಳಿಸಿದರು.
- ಸದ್ಯ ಭಾರತದಲ್ಲಿಯೇ ಜನಿಸಿರುವ 16 ಚೀತಾಗಳು ಸೇರಿ ಒಟ್ಟು 27 ಚೀತಾಗಳಿವೆ ಎಂದು ಮೂಲಗಳು ತಿಳಿಸಿವೆ.
- **ಕುನೊ ರಾಷ್ಟ್ರೀಯ ಉದ್ಯಾನದಲ್ಲಿ ಚೀತಾ ಮರಿಗಳ ಬದುಕುಳಿಯುವಿಕೆ ದರವು ಶೇಕಡ 61ರಷ್ಟಿದೆ. ಇದಕ್ಕೆ ಪ್ರತಿಯಾಗಿ ಜಾಗತಿಕವಾಗಿ ಚೀತಾ ಮರಿಗಳ ಬದುಕುಳಿಯುವಿಕೆ ದರವು ಶೇ 40ರಷ್ಟಿದೆ ಎಂದು ತಿಳಿಸಿವೆ.**


Dr Rajkumar IAS Academy

## ❖ 26ಕ್ಕೆ ಮಿಗ್-21ಗೆ ವಿದಾಯ


ಸಂದರ್ಭ: ಭಾರತದ ಕೀರ್ತಿಯನ್ನು ಬಾನೆತ್ತರದಲ್ಲಿ ಹಾರಿಸಿದ, ದೇಶದ ವಾಯುಪಡೆಯ ಸಾಮರ್ಥ್ಯವನ್ನು ಜಗತ್ತಿಗೆ ಸಾರಿದ ರಷ್ಯಾ ನಿರ್ಮಿತ ಮಿಗ್-21 ಯುದ್ಧ ವಿಮಾನವು ಇದೇ 26ರಿಂದ ನಿವೃತ್ತಿ ಪಡೆಯಲಿದೆ.

- ಚಂಡೀಗಢದ ವಾಯುನೆಲೆಯಲ್ಲಿ 23 ಸ್ಕ್ವಾಡ್ರನ್‌ಗೆ ಸೇರಿದ 'ಪ್ಯಾಂಥರ್ಸ್' ಹೆಸರಿನ ಮಿಗ್-21 ಯುದ್ಧ ವಿಮಾನಕ್ಕೆ ಬೀಳ್ಕೊಡುಗೆ ಸಮಾರಂಭವನ್ನು ಆಯೋಜಿಸಲಾಗಿದೆ.
- ರಕ್ಷಣಾ ಸಚಿವ ರಾಜನಾಥ ಸಿಂಗ್, ಸೇನಾಪಡೆಗಳ ಮುಖ್ಯಸ್ಥ (ಸಿಡಿಎಸ್) ಅನಿಲ್ ಚೌಹಾಣ್, ಸೇನೆಯ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್, ನೌಕಾಪಡೆಯ ಮುಖಸ್ಥ ಅಡ್ಮಿರಲ್ ದಿನೇಶ್ ಕೆ.ತ್ರಿಪಾಠಿ ಮತ್ತಿತರರು ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ.
- **ಆರು ದಶಕ ವಾಯುಪಡೆಯ ಬೆನ್ನೆಲುಬಾಗಿದ್ದ ಮಿಗ್-21 ಯುದ್ಧ ವಿಮಾನಗಳು ಪಾಕಿಸ್ತಾನದೊಂದಿಗಿನ 1965 ಮತ್ತು 1971ರ ಯುದ್ಧದಲ್ಲಿ ಹಾಗೂ 1999ರ ಕಾರ್ಗಿಲ್ ಯುದ್ಧದಲ್ಲಿ ನಿರ್ಣಾಯಕ ಪಾತ್ರ ವಹಿಸಿದ್ದವು. 2019ರ ಬಾಲಾಕೋಟ್ ವಾಯುದಾಳಿಯಲ್ಲಿಯೂ ಮಹತ್ವದ ಪಾತ್ರ ವಹಿಸಿದ್ದವು.**

IAS/KAS Academy



## ❖ ದುಡಿಯುವವರ ಸಂಖ್ಯೆ: ದೇಶದಲ್ಲಿ ಹೆಚ್ಚಳ



# ದುಡಿಯುವವರ ಸಂಖ್ಯೆ: ದೇಶದಲ್ಲಿ ಹೆಚ್ಚಳ

### ಮಾದರಿ ನೋಂದಣಿ ವ್ಯವಸ್ಥೆಯ ಸಾಂಖ್ಯಿಕ ವರದಿಯಲ್ಲಿ ಉಲ್ಲೇಖ

ಪ್ರಜಾವಾಣಿ ವಾರ್ತೆ

ದೇಶದಲ್ಲಿ ದುಡಿಯುವವರ ಸಂಖ್ಯೆ ಹೆಚ್ಚಾಗಿದೆ ಎಂದು ಮಾದರಿ ನೋಂದಣಿ ವ್ಯವಸ್ಥೆಯ (ಎಸ್‌ಆರ್‌ಎಸ್) ಸಾಂಖ್ಯಿಕ ವರದಿ (2023) ತಿಳಿಸಿದೆ. 15–59 ವರ್ಷ ವಯಸ್ಸಿನವರ ಪ್ರಮಾಣ 1971ರಲ್ಲಿ ಶೇ 53.4 ಇದ್ದದ್ದು 2023ರಲ್ಲಿ ಶೇ 66.1ಕ್ಕೆ ಏರಿಕೆಯಾಗಿದೆ ಎಂದು ವರದಿ ಉಲ್ಲೇಖಿಸಿದೆ. 1981ರಲ್ಲಿ ಈ ಪ್ರಮಾಣ ಶೇ 56.3 ಮತ್ತು 1991ರಲ್ಲಿ ಶೇ 57.7ರಷ್ಟಿತ್ತು.

ಒಟ್ಟು 88 ಲಕ್ಷ ಜನರನ್ನು ಸಮೀಕ್ಷೆಗೆ ಒಳಪಡಿಸಲಾಗಿದ್ದು, ಇದು ದೇಶದ ಅತಿ ದೊಡ್ಡ ಸಮೀಕ್ಷೆ ಎನ್ನಿಸಿಕೊಂಡಿದೆ.

ಗಮನಾರ್ಹ ವಿಚಾರವೆಂದರೆ, ಆರ್ಥಿಕವಾಗಿ ಕ್ರಿಯಾಶೀಲರಾಗಿರುವವರ ಪೈಕಿ ಮಹಿಳೆಯರ ಪ್ರಮಾಣವು (ಶೇ 66) ಪುರುಷರ ಪ್ರಮಾಣಕ್ಕಿಂತಲೂ (ಶೇ 65.9) ಹೆಚ್ಚಿದೆ. 15–59 ವರ್ಷ ವಯೋಮಾನದ ಜನರಲ್ಲಿ ಕರ್ನಾಟಕವು ಏಳನೇ ಸ್ಥಾನ ಪಡೆದಿದ್ದು, ರಾಜ್ಯದಲ್ಲಿ ದುಡಿಯುವವರ ಪ್ರಮಾಣವು ರಾಷ್ಟ್ರೀಯ ಸರಾಸರಿಗಿಂತ ಹೆಚ್ಚಾಗಿದೆ (ಶೇ 68). ಈ ಪಟ್ಟಿಯಲ್ಲಿ ಬಿಹಾರವು (ಶೇ 60.1) ಕೊನೆಯ ಸ್ಥಾನ ಪಡೆದಿದೆ. ಈ ವಯೋಮಾನದವರು ನಗರ ಪ್ರದೇಶಗಳಲ್ಲಿ (ಶೇ 68.6) ಗ್ರಾಮೀಣ ಪ್ರದೇಶಗಳಿಗಿಂತ (ಶೇ 64.6) ಹೆಚ್ಚು.

ದೇಶ ಹಾಗೂ ವಿವಿಧ ರಾಜ್ಯಗಳಲ್ಲಿನ ವಿವಿಧ ವಯೋಮಾನದ (0–4, 5–9, 15–59, 60 + ವರ್ಷ) ಜನಸಂಖ್ಯೆಯ ಪ್ರಮಾಣವನ್ನು ವರದಿಯು ಒಳಗೊಂಡಿದೆ.

ದೇಶದ ದಕ್ಷಿಣ ರಾಜ್ಯಗಳೂ ಒಳಗೊಂಡಂತೆ ಹಲವು ರಾಜ್ಯಗಳಲ್ಲಿ ವೃದ್ಧರ ಸಂಖ್ಯೆ ಹೆಚ್ಚಾಗಿರುವುದನ್ನೂ ವರದಿ ಉಲ್ಲೇಖಿಸಿದೆ. 2023ರಲ್ಲಿ ದೇಶದಲ್ಲಿ 60 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯೋಮಾನದವರ ಪ್ರಮಾಣವು ಶೇ 9.7ರಷ್ಟಿತ್ತು. ಅದರಲ್ಲಿ ಮಹಿಳೆಯರ ಪ್ರಮಾಣವು ಶೇ 10.2 ಆಗಿದ್ದರೆ, ಪುರುಷರ ಪ್ರಮಾಣವು ಶೇ 9.2 ಆಗಿದೆ. ಕೇರಳದಲ್ಲಿ ಅತಿ ಹೆಚ್ಚು ಅಂದರೆ ಶೇ 15.1ರಷ್ಟು ಈ ವಯೋಮಾನದವರಿದ್ದಾರೆ. ತಮಿಳುನಾಡು (ಶೇ 14) ಮತ್ತು ಹಿಮಾಚಲ ಪ್ರದೇಶಗಳು (ಶೇ 13.2) ನಂತರದ ಸ್ಥಾನದಲ್ಲಿವೆ. ಜಾರ್ಖಂಡ್ ಮತ್ತು ಅಸ್ಸಾಂನಲ್ಲಿ ಅತಿ ಕಡಿಮೆ ಅಂದರೆ ತಲಾ ಶೇ 7.6ರಷ್ಟು ಮತ್ತು ದೆಹಲಿಯಲ್ಲಿ ಶೇ 7.7ರಷ್ಟು 60 ವರ್ಷಕ್ಕಿಂತ ಹೆಚ್ಚು ವಯಸ್ಸಿನವರಿದ್ದಾರೆ.

ದೇಶದ 18 ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಒಟ್ಟಾರೆ ಫಲವಂತಿಕೆ ದರವು (ಟಿಎಫ್‌ಆರ್) ಜನಸಂಖ್ಯೆಯ ಮಟ್ಟ ಕಾಯ್ದುಕೊಳ್ಳಲು ಅಗತ್ಯವಾದ ಪ್ರಮಾಣಕ್ಕಿಂತ (2.1) ಕಡಿಮೆ ಇದೆ ಎಂದೂ ವರದಿ ಹೇಳಿದೆ. ಶಿಶು ಮರಣ ಪ್ರಮಾಣವು (2023ರಲ್ಲಿ) 25 ಇದ್ದು, ಕಳೆದ ಐದು ವರ್ಷಗಳಲ್ಲಿ ಏಳು ಅಂಶಗಳಷ್ಟು ಕಡಿಮೆಯಾಗಿದೆ ಎಂದು ವರದಿ ತಿಳಿಸಿದೆ.

### ದೇಶದಲ್ಲಿ ವಯೋಮಾನವಾರು ಜನಸಂಖ್ಯೆಯ ಹಂಚಿಕೆ



| ಪುರುಷ(%) | ಮಹಿಳೆ(%) |
|---|---|
| 8.2 | 7.7 |
| 8.1 | 7.6 |
| 8.6 | 8.3 |
| 65.9 | 66.2 |
| 9.2 | 10.2 |

### ಉದ್ಯೋಗ ನಿರತ ಜನಸಂಖ್ಯೆಯ (15–59 ವರ್ಷ) ಪ್ರಮಾಣ ಹೆಚ್ಚಿರುವ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳು (%)



### 14 ವರ್ಷಕ್ಕಿಂತ ಕಡಿಮೆ ವಯಸ್ಸಿನವರ ಪ್ರಮಾಣ: ಎಲ್ಲಿ, ಎಷ್ಟು? (%)



### ಕರ್ನಾಟಕ: ವರದಿ ಹೇಳುವುದೇನು?

#### ಜನಸಂಖ್ಯೆ ಹಂಚಿಕೆ (%)



**ರಾಜ್ಯದಲ್ಲಿ 15–59 ವರ್ಷ ವಯೋಮಾನದವರು**

| ಪ್ರದೇಶ | ಒಟ್ಟು | ಪುರುಷ | ಮಹಿಳೆ |
|---|---|---|---|
| ರಾಜ್ಯ | 68.0 | 68.4 | 67.6 |
| ಗ್ರಾಮೀಣ | 67.1 | 68.1 | 66.0 |
| ನಗರ | 69.3 | 68.8 | 69.7 |

ರಾಜ್ಯದಲ್ಲಿ 15ರಿಂದ 59 ವರ್ಷದವರೆಗಿನ ದುಡಿಯುವವರ ಪ್ರಮಾಣ ರಾಷ್ಟ್ರೀಯ ಸರಾಸರಿಗಿಂತ ಹೆಚ್ಚಿದೆ. ಶೇ 68ರಷ್ಟು ಮಂದಿ ಈ ವಯೋಮಾನದವರು ಕರ್ನಾಟಕದಲ್ಲಿದ್ದಾರೆ. ಪುರುಷರು ಶೇ 68.4ರಷ್ಟಿದ್ದರೆ, ಮಹಿಳೆಯರ ಪ್ರಮಾಣ ಶೇ 67.4ರಷ್ಟಿದೆ.

ರಾಜ್ಯದ ಗ್ರಾಮೀಣ ಭಾಗದಲ್ಲಿ ದುಡಿಯುವ ಪುರುಷರ ಸಂಖ್ಯೆ (ಶೇ 68.4) ಕಡಿಮೆ ಇದ್ದರೆ, ನಗರ ಪ್ರದೇಶಗಳಲ್ಲಿ ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿದ್ದಾರೆ (ಶೇ 69.7).

14 ವರ್ಷದೊಳಗಿನ ಮಕ್ಕಳ ಪ್ರಮಾಣವು ರಾಜ್ಯದಲ್ಲಿ ರಾಷ್ಟ್ರೀಯ ಸರಾಸರಿಗಿಂತ (ಶೇ 24.2) ಕಡಿಮೆ ಇದೆ. ರಾಜ್ಯದಲ್ಲಿ ಈ ಪ್ರಾಯದ ಮಕ್ಕಳು ಶೇ 21.9ರಷ್ಟಿದ್ದಾರೆ. ಬಾಲಕರು ಶೇ 22.4ರಷ್ಟಿದ್ದರೆ, ಬಾಲಕಿಯರ ಪ್ರಮಾಣ ಶೇ 21.3ರಷ್ಟು.

ನಗರಗಳಿಗೆ ಹೋಲಿಸಿದರೆ (ಶೇ 21.4), ಗ್ರಾಮೀಣ ಭಾಗದಲ್ಲಿ ಮಕ್ಕಳ ಪ್ರಮಾಣ (ಶೇ 22.2) ಹೆಚ್ಚಿದೆ.

**ವೃದ್ಧರು ಹೆಚ್ಚು:** ರಾಜ್ಯದಲ್ಲಿ 60 ವರ್ಷಕ್ಕಿಂತ ಹೆಚ್ಚು ವಯಸ್ಸಿನವರ ಪ್ರಮಾಣ ಶೇ 10.1ರಷ್ಟಿದೆ. ಇದು ದೇಶದ ಒಟ್ಟು ಸರಾಸರಿಗಿಂತ (ಶೇ 9.7) ಹೆಚ್ಚು. ವೃದ್ಧರಿಗಿಂತ (ಶೇ 9.1) ವೃದ್ಧೆಯವರ ಪ್ರಮಾಣ ಜಾಸ್ತಿ (ಶೇ 11.1) ಇದೆ.

60 ವರ್ಷಕ್ಕಿಂತ ಹೆಚ್ಚಿನ ವಯಸ್ಸಿನವರು ಗ್ರಾಮೀಣ ಭಾಗದಲ್ಲಿ ಶೇ 10.7ರಷ್ಟಿದ್ದರೆ, ನಗರ ವ್ಯಾಪ್ತಿಯಲ್ಲಿ ಶೇ 9.3ರಷ್ಟು ಇದ್ದಾರೆ. ಎರಡೂ ಕಡೆಗಳಲ್ಲಿ ಮಹಿಳೆಯರ ಸಂಖ್ಯೆಯೇ ಹೆಚ್ಚಿದೆ.




## ❖ ಅಂಚೆ ಮತಪತ್ರ ಎಣಿಕೆ ಸುಗಮಕ್ಕೆ ಕ್ರಮ: ಆಯೋಗ

ಸಂದರ್ಭ: ಅಂಚೆ ಮತಪತ್ರಗಳ ಎಣಿಕೆ ಪೂರ್ಣಗೊಂಡ ಬಳಿಕವಷ್ಟೇ ಇವಿಎಂ/ವಿವಿಪ್ಯಾಟ್‌ನ ಅಂತಿಮ ಸುತ್ತಿಗೂ ಮುಂಚಿನ ಸುತ್ತಿನ ಮತ ಎಣಿಕೆ ಪ್ರಕ್ರಿಯೆ ನಡೆಯಬೇಕು ಎಂದು ಚುನಾವಣಾ ಆಯೋಗ ಹೇಳಿದೆ.

- ಆಯೋಗದ ಈ ಹೊಸ ನಿರ್ಧಾರವು ಬಿಹಾರ ವಿಧಾನಸಭಾ ಚುನಾವಣೆಯಿಂದ ಜಾರಿಗೆ ಬರಲಿದೆ.
- ಅಂಚೆ ಮತಪತ್ರಗಳ ಎಣಿಕೆ ಪ್ರಕ್ರಿಯೆಯನ್ನು ಸುಗಮಗೊಳಿಸುವ ಉದ್ದೇಶದಿಂದ ಈ ಕ್ರಮ ತೆಗೆದುಕೊಂಡಿರುವುದಾಗಿ ಅದು ಹೇಳಿದೆ.
- **'ಅಂಚೆ ಮತಪತ್ರಗಳ ಎಣಿಕೆಯ ಹಂತವನ್ನು ಲೆಕ್ಕಿಸದೆ ಇವಿಎಂ ಎಣಿಕೆ ಮುಂದುವರಿಯಬಹುದು' ಎಂದು 2019ರ ಆದೇಶದಲ್ಲಿ ಹೇಳಲಾಗಿತ್ತು**.
- **ಈ ಆದೇಶವನ್ನು ಹಿಂಪಡೆದಿರುವ ಆಯೋಗ, 'ಅಂಚೆ ಮತಪತ್ರಗಳ ಎಣಿಕ ಪೂರ್ಣಗೊಂಡ ಬಳವಷ್ಟೇ ಇವಿಎಂ/ವಿವಿಪ್ಯಾಟ್‌ನ ಕೊನೆಯ ಸುತ್ತಿಗೂ ಹಿಂದಿನ ಸುತ್ತಿನ ಮತ ಎಣಿಕೆ ನಡೆಸಲಾಗುವುದು' ಎಂದು ಸ್ಪಷ್ಟಪಡಿಸಿದೆ.**
- ಇವಿಎಂ ಎಣಿಕೆ ಪೂರ್ಣಗೊಳ್ಳುವ ಮೊದಲು ಅಂಚೆ ಮತಪತ್ರಗಳ ಎಣಿಕೆಯನ್ನು ಪೂರ್ಣಗೊಳಿಸಬೇಕು ಎಂಬುದು ವಿರೋಧ ಪಕ್ಷಗಳ ದೀರ್ಘಕಾಲದ ಬೇಡಿಕೆಯಾಗಿತ್ತು. ಅಂಗವಿಕಲರು ಮತ್ತು 85 ವರ್ಷ ದಾಟಿದ ಹಿರಿಯ ನಾಗರಿಕರ ಮತದಾನಕ್ಕಾಗಿ ಆಯೋಗ ಇತ್ತೀಚೆಗೆ ತೆಗೆದುಕೊಂಡ ಕ್ರಮಗಳಿಂದಾಗಿ ಅಂಚೆ ಮತಪತ್ರಗಳ ಸಂಖ್ಯೆಯಲ್ಲಿ ಗಣನೀಯ ಏರಿಕೆ ಕಂಡು ಬಂದಿದೆ. ಹೀಗಾಗಿ ಆಯೋಗ ಈ ಕುರಿತು ನಿರ್ಧಾರ ತೆಗೆದುಕೊಂಡಿದೆ.

## ❖ 'ಅಗ್ನಿ ಪ್ರೈಮ್' ಕ್ಷಿಪಣಿ ಪರೀಕ್ಷೆ ಯಶಸ್ವಿ

ಸಂದರ್ಭ: 2,000 ಕಿ.ಮೀ ವ್ಯಾಪ್ತಿಯಲ್ಲಿನ ಗುರಿಯನ್ನು ಹೊಡೆದುರುಳಿಸಬಲ್ಲ ಸಾಮರ್ಥ್ಯದ 'ಅಗ್ನಿ ಪ್ರೈಮ್' ಕ್ಷಿಪಣಿಯನ್ನು ರೈಲು ಬೋಗಿಯ ಮೇಲೆ ಅಳವಡಿಸಿದ್ದ ಲಾಂಚರ್‌ನಿಂದ ಉಡಾಯಿಸುವ ಪರೀಕ್ಷಾರ್ಥ ಪ್ರಯೋಗವನ್ನು ಭಾರತ ಯಶಸ್ವಿಯಾಗಿ ನಡೆಸಿದೆ.

- **ದೇಶದಲ್ಲಿ ಇದೇ ಮೊದಲ ಬಾರಿಗೆ ರೈಲು ಬೋಗಿಯ ಮೇಲಿ ನಿಂದ ಕ್ಷಿಪಣಿ ಉಡಾಯಿಸಲಾಗಿದೆ**. ಯಾವುದೇ ಭಾಗಕ್ಕೆ ತ್ವರಿತವಾಗಿ ಕ್ಷಿಪಣಿ ಕೊಂಡೊಯ್ದು, ಉಡ್ಡಯನಕ್ಕೆ ಅನುಕೂಲವಾಗುವಂತೆ ಈ ವ್ಯವಸ್ಥೆಯನ್ನು ರೂಪಿಸಲಾಗಿದೆ.
- ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು 'ಈ ಪರೀಕ್ಷೆಯಿಂದ, ರೈಲಿನ ಮೇಲಿಂದ ಕ್ಷಿಪಣಿಯನ್ನು ಉಡಾಯಿಸಬಲ್ಲ ಸಾಮರ್ಥ್ಯವಿರುವ ದೇಶಗಳ ಗುಂಪಿಗೆ ಭಾರತ ಸೇರಿತು' ಎಂದಿದ್ದಾರೆ.
- 'ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ (ಡಿಆರ್‌ಡಿಒ) ಹಾಗೂ ವ್ಯೂಹಾತ್ಮಕ ಪಡೆಗಳ ಕಮಾಂಡ್ (ಎಸ್‌ಎಫ್‌ಸಿ) ಸಹಯೋಗದಲ್ಲಿ ಮಧ್ಯಂತರ ಶ್ರೇಣಿಯ 'ಅಗ್ನಿ ಪ್ರೈಮ್' ಕ್ಷಿಪಣಿಯನ್ನು ಯಶಸ್ವಿಯಾಗಿ ಉಡಾವಣೆ ಮಾಡಲಾಯಿತು' ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.
- ಅತ್ಯಾಧುನಿಕ ಸಂವಹನ ವ್ಯವಸ್ಥೆ ಹಾಗೂ ರಕ್ಷಣಾ ಕಾರ್ಯವಿಧಾನಗಳು ಸೇರಿದಂತೆ ಕ್ಷಿಪಣಿಯು ಎಲ್ಲಾ ವೈಶಿಷ್ಟ್ಯಗಳನ್ನು ಹೊಂದಿದೆ.



'ಅಗ್ನಿ ಪ್ರೈಮ್' ಕ್ಷಿಪಣಿಯ ಪರೀಕ್ಷಾರ್ಥ ಪ್ರಯೋಗವನ್ನು ಭಾರತ ಬುಧವಾರ ಯಶಸ್ವಿಯಾಗಿ ನಡೆಸಿತು –ಪಿಟಿಐ ಚಿತ್ರ

## ❖ ₹65 ಸಾವಿರ ಕೋಟಿ ಹೂಡಿಕೆ ಪ್ರಸ್ತಾವ

ಸಂದರ್ಭ: 'ದೇಶದ ಆಹಾರ ಸಂಸ್ಕರಣಾ ವಲಯವು ₹1 ಲಕ್ಷ ಕೋಟಿಗೂ ಹೆಚ್ಚಿನ ಹೂಡಿಕೆ ಪ್ರಸ್ತಾವಗಳನ್ನು ಆಕರ್ಷಿಸುವ ನಿರೀಕ್ಷೆ ಇದೆ' ಎಂದು ಕೇಂದ್ರ ಆಹಾರ ಸಂಸ್ಕರಣಾ ಸಚಿವ ಚಿರಾಗ್ ಪಾಸ್ವಾನ್ ಹೇಳಿದ್ದಾರೆ.


- ವಿಶ್ವ ಆಹಾರ ಭಾರತ ಶೃಂಗಸಭೆಯಲ್ಲಿ ಮಾತನಾಡಿದ ಅವರು, ಈಗಾಗಲೇ ರಿಲಯನ್ಸ್ ಕನ್ಸ್ಯೂಮರ್ ಪ್ರಾಡಕ್ಟ್ಸ್ ಲಿಮಿಟೆಡ್ (ಆರ್‌ಸಿಪಿಎಲ್) ಮತ್ತು ಕೋಕಾ-ಕೋಲಾ ಕಂಪನಿಗಳ ಘಟಕಗಳನ್ನು ಸ್ಥಾಪಿಸಲು ಅಂದಾಜು ₹65 ಸಾವಿರ ಕೋಟಿ ಹೂಡಿಕೆ ಮಾಡಲು ಸಹಿ ಹಾಕಿವೆ ಎಂದು ಹೇಳಿದ್ದಾರೆ. ವಿಶ್ವ ಆಹಾರ ಭಾರತ ಶೃಂಗಸಭೆ ಸೆಪ್ಟೆಂಬರ್ 28ರ ವರೆಗೆ ನಡೆಯಲಿದೆ.
- ದೇಶದಾದ್ಯಂತ ಆಹಾರ ತಯಾರಿಕಾ ಘಟಕಗಳನ್ನು ಸ್ಥಾಪಿಸಲು ಆಹಾರ ಸಂಸ್ಕರಣಾ ಸಚಿವಾಲಯದ ಜೊತೆಗೆ ಆರ್‌ಸಿಪಿಎಲ್ ಒಪ್ಪಂದ ಮಾಡಿ ಕೊಂಡಿದೆ. ಈ ಒಪ್ಪಂದದ ಮೌಲ್ಯ ₹40 ಸಾವಿರ ಕೋಟಿಯಾಗಿದೆ.
- **ಒಪ್ಪಂದದ ಪ್ರಕಾರ, ಆಹಾರ ಉತ್ಪನ್ನಗಳು ಮತ್ತು ಪಾನೀಯಗಳನ್ನು ತಯಾರಿಸಲು ಮಹಾರಾಷ್ಟ್ರದ ನಾಗ್ಪುರ ಮತ್ತು ಆಂಧ್ರ ಪ್ರದೇಶದ ಕರ್ನೂಲು ಜಿಲ್ಲೆಯಲ್ಲಿ ಘಟಕ ಸ್ಥಾಪಿಸಲಿದೆ.** ಇದಕ್ಕೆ ಆರ್‌ಸಿಪಿಎಲ್ ₹1,500 ಕೋಟಿಗೂ ಹೆಚ್ಚು ಹೂಡಿಕೆ ಮಾಡಲಿದೆ.
- ಕೋಕಾ-ಕೋಲಾ ₹25,760 ಕೋಟಿ ಹೂಡಿಕೆ ಮಾಡಲಿದೆ. ಇದರಿಂದ 30 ಸಾವಿರ ನೇರ ಉದ್ಯೋಗ ಮತ್ತು 3 ಲಕ್ಷ ಪರೋಕ್ಷ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ. ಈ ಯೋಜನೆಯ ಅನುಷ್ಠಾನವು ಈ ವರ್ಷ ಪ್ರಾರಂಭವಾಗಲಿದ್ದು, 2030ರ ವೇಳೆಗೆ ಪೂರ್ಣಗೊಳ್ಳುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ.

## ❖ 97 ತೇಜಸ್ ಜೆಟ್‌ಗಳ ನಿರ್ಮಾಣಕ್ಕೆ ಎಚ್‌ಎಎಲ್ ಜೊತೆಗೆ ಒಪ್ಪಂದ

ಸಂದರ್ಭ: ಭಾರತೀಯ ವಾಯುಪಡೆಗಾಗಿ ₹62,370 ಕೋಟಿ ವೆಚ್ಚದಲ್ಲಿ 97 ತೇಜಸ್ ಲಘು ಯುದ್ಧ ವಿಮಾನಗಳನ್ನು ಖರೀದಿಸಲು ರಕ್ಷಣಾ ಸಚಿವಾಲಯವು ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಎಚ್‌ಎಎಲ್) ಜೊತೆಗೆ ಒಪ್ಪಂದ ಮಾಡಿಕೊಂಡಿದೆ.

- 2027–28ರ ವೇಳೆಗೆ ಈ ಯುದ್ಧ ವಿಮಾನಗಳನ್ನು ಎಚ್‌ಎಎಲ್ ವಿತರಿಸಲಿದೆ.
- ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಭದ್ರತಾ ಸಂಪುಟ ಸಮಿತಿ (ಸಿಸಿಎಸ್) ಈ ಬೃಹತ್ ಖರೀದಿಗೆ ಒಪ್ಪಿಗೆ ನೀಡಿದ ಸುಮಾರು ಒಂದು ತಿಂಗಳ ನಂತರ ಒಪ್ಪಂದ ಮಾಡಿಕೊಳ್ಳಲಾಗಿದೆ.
- ಸರ್ಕಾರಿ ಸ್ವಾಮ್ಯದ ಎಚ್‌ಎಎಲ್‌ಗೆ ನೀಡಲಾದ ಎರಡನೇ ಗುತ್ತಿಗೆ ಇದಾಗಿದೆ. 2021ರ ಫೆಬ್ರವರಿಯಲ್ಲಿ ವಾಯುಪಡೆಗಾಗಿ 83 ತೇಜಸ್ ಎಮ್‌ಕೆ-1ಎ ಜೆಟ್‌ಗಳನ್ನು ಖರೀದಿಸಲು ₹48,000 ಕೋಟಿಗಳ ಒಪ್ಪಂದವನ್ನು ಮಾಡಿಕೊಂಡಿತ್ತು.

Dr. Rajkumar IAS Academy




# ಲಡಾಖ್: ರಾಜ್ಯ ಸ್ಥಾನ, ಸ್ವಾಯತ್ತೆಗಾಗಿ ಹೋರಾಟ

**ಹಿಮನಾಡು ಲಡಾಖ್‌ನಲ್ಲಿ ರಾಜ್ಯ ಸ್ಥಾನಮಾನ ಮತ್ತು ಸ್ವಾಯತ್ತೆಗಾಗಿ ನಡೆಯುತ್ತಿರುವ ಹೋರಾಟ ಹಿಂಸಾರೂಪ ಪಡೆದುಕೊಂಡಿದೆ. ಬುಧವಾರ ಲೇಹ್‌ನಲ್ಲಿ ನಡೆದ ಹಿಂಸಾಚಾರವನ್ನು ಇತ್ತೀಚೆಗೆ ನೇಪಾಳದಲ್ಲಿ ನಡೆದ 'ಝೆನ್ ಜಿ' ಪೀಳಿಗೆಯ ಹೋರಾಟಕ್ಕೆ ಹೋಲಿಸಲಾಗುತ್ತಿದೆ. 2019ರಲ್ಲಿ ಲಡಾಖ್ ಕೇಂದ್ರಾಡಳಿತ ಪ್ರದೇಶ ಎಂದು ಘೋಷಣೆಯಾದಾಗ ಸ್ವಾಗತಿಸಿದ್ದ ಅಲ್ಲಿನ ಜನರು ಈಗ ಕೇಂದ್ರದ ವಿರುದ್ಧ ಆಕ್ರೋಶ ಹೊರಹಾಕುತ್ತಿದ್ದಾರೆ. ಸೂಕ್ಷ್ಮ ಪರಿಸರ, ಭೂಮಿಯ ಹಕ್ಕುಗಳು, ವೈವಿಧ್ಯಮಯ ಸಂಸ್ಕೃತಿಗಳನ್ನು ಉಳಿಸಲು ಸಾಂವಿಧಾನಿಕ ರಕ್ಷಣೆ ಕೇಳುತ್ತಿದ್ದಾರೆ**

ಪ್ರಜಾವಾಣಿ ವಾರ್ತೆ

**2019ರ** ಆಗಸ್ಟ್ 5. ಸಂವಿಧಾನದ 370ರ ವಿಧಿಯಡಿ ಜಮ್ಮು ಮತ್ತು ಕಾಶ್ಮೀರಕ್ಕೆ ನೀಡಲಾಗಿದ್ದ ವಿಶೇಷ ಸ್ಥಾನಮಾನವನ್ನು ಕೇಂದ್ರ ಸರ್ಕಾರ ರದ್ದು ಮಾಡಿತ್ತು. ಅಲ್ಲದೇ ಜಮ್ಮು ಮತ್ತು ಕಾಶ್ಮೀರದಿಂದ ಲಡಾಖ್ ಅನ್ನು ಪ್ರತ್ಯೇಕಿಸಿ ಎರಡನ್ನೂ ಕೇಂದ್ರಾಡಳಿತ ಪ್ರದೇಶಗಳನ್ನಾಗಿ ರೂಪಿಸಿತ್ತು. ಕೇಂದ್ರದ ನಿರ್ಧಾರವನ್ನು ಜಮ್ಮು ಮತ್ತು ಕಾಶ್ಮೀರದ ರಾಜಕೀಯ ಪಕ್ಷಗಳು, ಮುಖಂಡರು ವಿರೋಧಿಸಿದ್ದರು. ಜನರು ಪ್ರತಿಭಟನೆ ನಡೆಸಿದ್ದರು. ಅದು ಹಿಂಸೆಗೂ ತಿರುಗಿತ್ತು. ಆದರೆ, ಪಕ್ಕದ ಲಡಾಖ್ ಶಾಂತವಾಗಿತ್ತು. ಅಲ್ಲಿನ ಮುಖಂಡರು ಕೇಂದ್ರದ ನಿರ್ಧಾರವನ್ನು ಸ್ವಾಗತಿಸಿದ್ದರು. ತಮ್ಮ ಬೇಡಿಕೆಗಳು ಈಡೇರುವ ಸಮಯ ಕೊನೆಗೂ ಬಂತು ಎಂಬುದು ಲಡಾಖ್ ಜನರ ನಿರೀಕ್ಷೆಯಾಗಿತ್ತು. ಆದರೆ, ಆರಂಭದಲ್ಲಿ ಕೇಂದ್ರದ ನಿರ್ಧಾರ ಸ್ವಾಗತಿಸಿದವರೇ ವರ್ಷವಾಗುವಷ್ಟರಲ್ಲಿ ಕೇಂದ್ರ ಸರ್ಕಾರದ ನಡೆಯನ್ನು ವಿರೋಧಿಸಲು ಆರಂಭಿಸಿದರು. ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಹೋರಾಟದ ದಾರಿ ಕಂಡುಕೊಂಡರು. ಪ್ರತಿಭಟನೆ, ರ್‍ಯಾಲಿ, ಉಪವಾಸ ಸತ್ಯಾಗ್ರಹಗಳಿಗೆ ಸೀಮಿತವಾಗಿದ್ದ ಹೋರಾಟ ಎರಡು ವರ್ಷಗಳಿಂದೀಚೆಗೆ ತೀವ್ರಗೊಂಡು, ಅದೀಗ ಹಿಂಸಾರೂಪ ತಾಳುವ ಮಟ್ಟಕ್ಕೆ ಏರಿದೆ.

ಲಡಾಖ್‌ನ ಲೇಹ್‌ನಲ್ಲಿ ಬುಧವಾರ ನಡೆದ ಪ್ರತಿಭಟನೆಯು ಹಿಂಸಾಚಾರವಾಗಿ ಪರಿವರ್ತನೆಗೊಂಡು ನಾಲ್ವರು ಮೃತಪಟ್ಟಿದ್ದಾರೆ. ಹತ್ತಾರು ಮಂದಿ ಗಾಯಗೊಂಡಿದ್ದಾರೆ. ಲಡಾಖ್‌ಗೆ ರಾಜ್ಯದ ಸ್ಥಾನಮಾನ ನೀಡಬೇಕು. ಲಡಾಖ್ ಅನ್ನು ಸಂವಿಧಾನದ ಆರನೇ ಪರಿಚ್ಛೇದಕ್ಕೆ ಸೇರ್ಪಡೆಗೊಳಿಸಿ ಸ್ವಾಯತ್ತ ಪ್ರದೇಶ ಎಂದು ಘೋಷಿಸಬೇಕು ಎಂಬುದು ಲಡಾಖ್ ಜನರ ಪ್ರಮುಖ ಬೇಡಿಕೆ.

**'ಝೆನ್ ಜಿ' ಹೋರಾಟ:** ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಇಬ್ಬರು ತೀವ್ರ ಅಸ್ವಸ್ಥಗೊಂಡಿದ್ದು ಬುಧವಾರ ನಡೆದ ಪ್ರತಿಭಟನೆ, ಹಿಂಸಾಚಾರಕ್ಕೆ ನೆಪ. ಹಿಂಸೆಗೆ ತಿರುಗಿದ ಈ ಹೋರಾಟವನ್ನು ನೇಪಾಳದಲ್ಲಿ ಇತ್ತೀಚೆಗೆ ನಡೆದ 'ಝೆನ್ ಜಿ' ಪೀಳಿಗೆಯವರ ಪ್ರತಿಭಟನೆಗೆ ಹೋಲಿಸಲಾಗುತ್ತಿದೆ. ರಾಜ್ಯ ಸ್ಥಾನಮಾನ ನೀಡಬೇಕು ಎಂದು ಆಗ್ರಹಿಸಿ ನಡೆಯುತ್ತಿರುವ ಚಳವಳಿಯ ಮುಂಚೂಣಿಯಲ್ಲಿರುವ ಪರಿಸರವಾದಿ, ಶಿಕ್ಷಣ ತಜ್ಞ ಸೋನಮ್ ವಾಂಗ್‌ಚುಕ್ ಅವರೇ ಇದು 'ಝೆನ್ ಜಿ' ಹೋರಾಟ ಎಂದು ಹೇಳಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲೂ ಇದೇ ರೀತಿ ಬಿಂಬಿಸಲಾಗುತ್ತಿದೆ. ಹಿಂಸಾಚಾರ ನಿಯಂತ್ರಣಕ್ಕೆ ಬಂದಿದೆ. ಆದರೆ, ಲೇಹ್ ಇನ್ನೂ ಬೂದಿ ಮುಚ್ಚಿದ ಕೆಂಡದಂತಿದೆ.

2019ರಲ್ಲಿ ವಿಶೇಷ ಸ್ಥಾನಮಾನ ರದ್ದುಪಡಿಸುವಾಗ ಜಮ್ಮು ಮತ್ತು ಕಾಶ್ಮೀರವನ್ನು ಕೇಂದ್ರಾಡಳಿತ ಪ್ರದೇಶವನ್ನಾಗಿ ಮಾಡಿದ್ದರೂ ಅಲ್ಲಿ ವಿಧಾನಸಭೆಯನ್ನು ಉಳಿಸಿಕೊಳ್ಳಲಾಗಿತ್ತು (ವಿಧಾನ ಪರಿಷತ್ ಅನ್ನು ರದ್ದುಪಡಿಸಲಾಗಿತ್ತು). ಆದರೆ, ಲಡಾಖ್ ಅನ್ನು ಶಾಸಕಾಂಗ ವ್ಯವಸ್ಥೆ ಇಲ್ಲದ ಕೇಂದ್ರಾಡಳಿತ ಪ್ರದೇಶವಾಗಿ ರೂಪಿಸಲಾಗಿತ್ತು. ಇದರಿಂದಾಗಿ ಲಡಾಖ್‌ನಲ್ಲಿ ರಾಜಕೀಯ ಶೂನ್ಯ ಆವರಿಸಿದೆ. ಕೇಂದ್ರ ಸರ್ಕಾರ ಲೆಫ್ಟಿನೆಂಟ್ ಗವರ್ನರ್ ಮೂಲಕ ನೇರವಾಗಿ ಆಡಳಿತ ನಡೆಸುವುದರಿಂದ ಸ್ಥಳೀಯರಿಗೆ ರಾಜಕೀಯ ಪ್ರಾತಿನಿಧ್ಯ ಇಲ್ಲದಂತಾಗಿದೆ, ಪ್ರಜಾಪ್ರಭುತ್ವದ ಹಕ್ಕುಗಳಿಗೆ ಧಕ್ಕೆಯಾಗುತ್ತಿದೆ ಎಂಬುದು ವಾಂಗ್‌ಚುಕ್ ಹಾಗೂ ಹೋರಾಟಗಾರರ ಆರೋಪ.

ಸೂಕ್ಷ್ಮ ಪರಿಸರ ವ್ಯವಸ್ಥೆ, ನೈಸರ್ಗಿಕ ಸಂಪತ್ತು ಹೊಂದಿರುವ ಈ ಪ್ರದೇಶದಲ್ಲಿ ಕೈಗಾರಿಕೆಗಳಿಗೆ, ಗಣಿಗಾರಿಕೆಗೆ ಕೇಂದ್ರ ಸರ್ಕಾರ ಅವಕಾಶ ನೀಡುತ್ತಿದೆ. ಇದರಿಂದ ಪರಿಸರ ನಾಶವಾಗುತ್ತಿದೆ. ಬುಡಕಟ್ಟು ಸಮುದಾಯಗಳಿಗೆ ತೊಂದರೆಯಾಗುತ್ತಿದೆ. ಲಡಾಖ್‌ನ ಸಾಂಸ್ಕೃತಿಕ ಅಸ್ಮಿತೆಗೂ ಧಕ್ಕೆಯಾಗುತ್ತಿದೆ. ಸ್ಥಳೀಯರಿಗೆ ಉದ್ಯೋಗಗಳು ಸಿಗುತ್ತಿಲ್ಲ ಎಂಬ ಆತಂಕ ಅವರದ್ದು.

ಸ್ವಾಯತ್ತ ಪ್ರದೇಶವಾಗಿ ಘೋಷಿಸಿದರೆ, ಸ್ಥಳೀಯವಾಗಿ ರಾಜಕೀಯ ಪ್ರಾತಿನಿಧ್ಯ ಸಿಕ್ಕಿ, ಸ್ಥಳೀಯರೇ ಆಡಳಿತ ನಡೆಸಲು ಅನುಕೂಲವಾಗುತ್ತದೆ ಎಂಬುದು ಅವರ ವಾದ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು 2019ರಲ್ಲಿ ಲಡಾಖ್ ಅನ್ನು ಆರನೇ ಪರಿಚ್ಛೇದಕ್ಕೆ ಸೇರಿಸುವ ಭರವಸೆ ನೀಡಿತ್ತು. ಆದರೆ, ಅದನ್ನು ಇನ್ನೂ ಈಡೇರಿಸಿಲ್ಲ ಎಂಬುದು ಹೋರಾಟಗಾರರ ಕೋಪಕ್ಕೆ ಪ್ರಮುಖ ಕಾರಣ.

**ಸಮಿತಿ ರಚನೆ:** 2020ರಿಂದೀಚೆಗೆ ಲಡಾಖ್‌ನಲ್ಲಿ ಕಾರ್ಗಿಲ್ ಡೆಮಾಕ್ರಟಿಕ್ ಅಲಯನ್ಸ್ (ಕೆಡಿಎ) ಮತ್ತು ಲೇಹ್ ಅಪೆಕ್ಸ್ ಬಾಡಿ (ಎಲ್‌ಎಬಿ) ಅಡಿಯಲ್ಲಿ ನಿರಂತರವಾಗಿ ಪ್ರತಿಭಟನೆಗಳು ನಡೆಯುತ್ತಿದ್ದರಿಂದ ಅಲ್ಲಿನ ಜನರ ಬೇಡಿಕೆಗಳನ್ನು ಅಧ್ಯಯನ ನಡೆಸುವುದಕ್ಕಾಗಿ ಕೇಂದ್ರ ಸರ್ಕಾರ 2023ರ ಜನವರಿ 2ರಂದು ಉನ್ನತಾಧಿಕಾರ ಸಮಿತಿಯನ್ನು ರಚಿಸಿತ್ತು. ಕೇಂದ್ರ ಸರ್ಕಾರವು ಈ ವಿಚಾರವಾಗಿ ಲಡಾಖ್ ನಾಯಕತ್ವದೊಂದಿಗೆ ಹಲವು ಸುತ್ತಿನ ಮಾತುಕತೆಯನ್ನೂ ನಡೆಸಿದೆ. ಅಕ್ಟೋಬರ್ 6ರಂದು ಮತ್ತೊಂದು ಸುತ್ತಿನ ಮಾತುಕತೆ ನಿಗದಿಯಾಗಿದೆ.


ಈ ಹಿಂದೆ, ಲಡಾಖ್‌ನ ಮುಖಂಡರು ಕೇಂದ್ರ ಗೃಹಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ತಮ್ಮ ಬೇಡಿಕೆಯನ್ನು ಮುಂದಿಟ್ಟ ವೇಳೆ ರಾಜ್ಯ ಸ್ಥಾನಮಾನ ನೀಡಲು ಮತ್ತು ಆರನೇ ಪರಿಚ್ಛೇದಕ್ಕೆ ಸೇರ್ಪಡೆಗೊಳಿಸಲು ಅವರು ನಿರಾಕರಿಸಿದ್ದರು ಎನ್ನಲಾಗಿದ್ದು, ಇದು ಚಳವಳಿ ನಡೆಸುತ್ತಿರುವವರ ಅಸಮಾಧಾನಕ್ಕೆ ಕಾರಣ ಎಂದು ಹೇಳಲಾಗುತ್ತಿದೆ.

**ಆಧಾರ:** ಪಿಟಿಐ, ಜಮ್ಮು ಮತ್ತು ಕಾಶ್ಮೀರ ಪುನರ್‌ರಚನೆ ಕಾಯ್ದೆ, ಪಿಐಬಿ, ಮಾಧ್ಯಮ ವರದಿಗಳು



ಲಡಾಖ್‌ನ ಲೇಹ್ ನಲ್ಲಿ ಬುಧವಾರ ನಡೆದ ಪ್ರತಿಭಟನೆಯಲ್ಲಿ ಜನರು ಭಾರಿ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು —ಪಿಟಿಐ ಚಿತ್ರ

ಕಾರ್ಗಿಲ್ ಭಾಗದಲ್ಲಿರುವ ಶಿಯಾ ಮುಸ್ಲಿಮರು, ಲೇಹ್ ವ್ಯಾಪ್ತಿಯಲ್ಲಿರುವ ಬೌದ್ಧ ಧರ್ಮೀಯರು ಒಟ್ಟಾಗಿ ಈ ಬೇಡಿಕೆಗಳ ಈಡೇರಿಕೆಗಾಗಿ ಹೋರಾಡುತ್ತಿದ್ದಾರೆ. ಕಾರ್ಗಿಲ್ ಡೆಮಾಕ್ರಟಿಕ್ ಅಲಯನ್ಸ್ (ಕೆಡಿಎ) ಮತ್ತು ಲೇಹ್ ಅಪೆಕ್ಸ್ ಬಾಡಿ (ಎಲ್‌ಎಬಿ) ಎಂಬ ಎರಡು ಸಂಘಟನೆಗಳ ಅಡಿಯಲ್ಲಿ ಹೋರಾಟ ನಡೆಯುತ್ತಿದೆ. ಸೋನಮ್ ವಾಂಗ್‌ಚುಕ್ ಅವರು ಚಳವಳಿಯ ಮುಂಚೂಣಿಯಲ್ಲಿದ್ದಾರೆ



ಸೋನಮ್ ವಾಂಗ್‌ಚುಕ್

## ಕೇಂದ್ರ ಸರ್ಕಾರದ ವಾದವೇನು?

ಸಂಸತ್ತಿನಲ್ಲಿ, ಸುಪ್ರೀಂಕೋರ್ಟ್‌ನಲ್ಲಿ ಜಮ್ಮು ಮತ್ತು ಕಾಶ್ಮೀರಕ್ಕೆ ಮತ್ತೆ ರಾಜ್ಯದ ಸ್ಥಾನಮಾನ ನೀಡಲು ಬದ್ಧ ಎಂದು ಕೇಂದ್ರ ಸರ್ಕಾರ ಹಲವು ಬಾರಿ ಹೇಳಿದೆ. ಆದರೆ, ಲಡಾಖ್ ಬಗ್ಗೆ ಅದು ಈ ರೀತಿ ಹೇಳಿಲ್ಲ.

ಲಡಾಖ್ ಆಡಳಿತಕ್ಕಾಗಿ ಲಡಾಖ್ ಸ್ವಾಯತ್ತ ಗಿರಿ ಅಭಿವೃದ್ಧಿ ಮಂಡಳಿಗಳನ್ನು (ಲೇಹ್ ಮತ್ತು ಕಾರ್ಗಿಲ್‌ಗೆ) ರಚಿಸಲಾಗಿದೆ. ಇವು ಸ್ವಾಯತ್ತ ಸಂಸ್ಥೆಯಾಗಿದ್ದು, ಆಡಳಿತ, ಆರ್ಥಿಕ ಅಭಿವೃದ್ಧಿ, ಶಿಕ್ಷಣ, ಆರೋಗ್ಯ ಸೇರಿದಂತೆ ವಿವಿಧ ಕ್ಷೇತ್ರಗಳನ್ನು ನಿರ್ವಹಿಸಲು ಇವುಗಳಿಗೆ ಅಧಿಕಾರ ಇದೆ ಎಂಬುದು ಕೇಂದ್ರ ಸರ್ಕಾರದ ವಾದ.

ಆದರೆ, ಈ ಮಂಡಳಿಯ ಅಧಿಕಾರ ಸೀಮಿತವಾಗಿದೆ ಎಂಬುದು ಹೋರಾಟಗಾರರ ಹೇಳಿಕೆ

## ನಿರಾಸಕ್ತಿ ಏಕೆ?

ಲಡಾಖ್‌ನಲ್ಲಿ ಭಾರತ–ಚೀನಾ ಗಡಿ ಪ್ರದೇಶವಿದ್ದು, ಎರಡೂ ದೇಶಗಳ ನಡುವಿನ ಗಡಿ ಬಿಕ್ಕಟ್ಟು ಇನ್ನೂ ಬಗೆಹರಿದಿಲ್ಲ. ಆಗಾಗ ಘರ್ಷಣೆಯೂ ನಡೆಯುತ್ತಿರುತ್ತದೆ. ಅತ್ಯಂತ ಸೂಕ್ಷ್ಮವಾಗಿರುವ ಈ ಪ್ರದೇಶದ ಆಡಳಿತ ನೇರವಾಗಿ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬಂದರೆ ಗಡಿ ಭದ್ರತೆಯ ದೃಷ್ಟಿಯಿಂದ ಸಾಕಷ್ಟು ಅನುಕೂಲವಿದೆ ಎಂಬ ಕಾರಣಕ್ಕೆ ರಾಜ್ಯದ ಸ್ಥಾನಮಾನ ಅಥವಾ ಸಾಂವಿಧಾನಿಕವಾಗಿ ಇನ್ನಷ್ಟು ಸ್ವಾಯತ್ತೆ ನೀಡಲು ಕೇಂದ್ರ ಸರ್ಕಾರ ಆಸಕ್ತಿ ತೋರುತ್ತಿಲ್ಲ ಎಂದು ಹೇಳಲಾಗುತ್ತಿದೆ.

## ಪ್ರಮುಖ ಬೇಡಿಕೆಗಳು

- ರಾಜ್ಯದ ಸ್ಥಾನಮಾನ ನೀಡಬೇಕು
- ಲಡಾಖ್‌ನ ಸೂಕ್ಷ್ಮ ಪರಿಸರ, ಸಂಪನ್ಮೂಲಗಳು, ಜನರ ಭೂ ಒಡೆತನದ ಹಕ್ಕು ಮತ್ತು ಸಾಂಸ್ಕೃತಿಕ ಅನನ್ಯತೆಗೆ ಸಾಂವಿಧಾನಿಕ ರಕ್ಷಣೆ ಒದಗಿಸಬೇಕು (ಆರನೇ ಪರಿಚ್ಛೇದಕ್ಕೆ ಸೇರಿಸಬೇಕು)
- ಲೇಹ್ ಮತ್ತು ಕಾರ್ಗಿಲ್‌ಗೆ ಪ್ರತ್ಯೇಕ ಲೋಕಸಭಾ ಕ್ಷೇತ್ರ ಬೇಕು (ಸದ್ಯ ಲಡಾಖ್ ಒಂದೇ ಕ್ಷೇತ್ರ ಇದೆ)
- ಉದ್ಯೋಗದಲ್ಲಿ ಮೀಸಲಾತಿ ಸೌಲಭ್ಯ ಕಲ್ಪಿಸಬೇಕು

## ಏನಿದು 6ನೇ ಪರಿಚ್ಛೇದ?

ಸಂವಿಧಾನದ ವಿಧಿ 244(2) ಮತ್ತು ವಿಧಿ 275(1) ಅಡಿಯಲ್ಲಿ ಈ ಪರಿಚ್ಛೇದವನ್ನು ಸೇರ್ಪಡೆಗೊಳಿಸಲಾಗಿದೆ.

ಭಾರತದ ಈಶಾನ್ಯ ಭಾಗದಲ್ಲಿರುವ ಅಸ್ಸಾಂ, ಮೇಘಾಲಯ, ತ್ರಿಪುರಾ ಮತ್ತು ಮಿಜೋರಾಂ ರಾಜ್ಯಗಳ ಬುಡಕಟ್ಟು ಜನರು ವಾಸಿಸುವ ಪ್ರದೇಶಗಳಲ್ಲಿ ಆಡಳಿತ ನಿರ್ವಹಣೆಯ ಅವಕಾಶವನ್ನು ಈ ಪರಿಚ್ಛೇದ ನೀಡುತ್ತದೆ.

ಆದಿವಾಸಿಗಳು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ಪ್ರದೇಶದಲ್ಲಿ ಸ್ವಾಯತ್ತ ಜಿಲ್ಲಾ ಕೌನ್ಸಿಲ್‌ಗಳನ್ನು ಮತ್ತು ಪ್ರಾದೇಶಿಕ ಕೌನ್ಸಿಲ್‌ಗಳನ್ನು ಸ್ಥಾಪಿಸಬಹುದು ಎಂದು ಇದು ಹೇಳುತ್ತದೆ.

ಸ್ವಯಂ ಆಡಳಿತ ನಡೆಸಲು, ಈಶಾನ್ಯ ರಾಜ್ಯದ ಆದಿವಾಸಿ ಸಮುದಾಯಗಳ ಸಾಂಸ್ಕೃತಿಕ, ಸಾಮಾಜಿಕ ಮತ್ತು ಆರ್ಥಿಕ ಹಕ್ಕುಗಳನ್ನು ರಕ್ಷಿಸುವುದಕ್ಕಾಗಿ ಕೌನ್ಸಿಲ್‌ಗಳಿಗೆ ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗದ ಅಧಿಕಾರವನ್ನು ಈ ಪರಿಚ್ಛೇದ ನೀಡುತ್ತದೆ.

ಯಾವುದೇ ಜಿಲ್ಲೆಯ ಒಟ್ಟು ಜನಸಂಖ್ಯೆಯಲ್ಲಿ ಪರಿಶಿಷ್ಟ ಪಂಗಡಕ್ಕೆ ಮತ್ತು ಬುಡಕಟ್ಟು ಸಮುದಾಯಕ್ಕೆ ಸೇರಿದ ಜನರ ಪ್ರಮಾಣ ಶೇ 50ಕ್ಕಿಂತಲೂ ಹೆಚ್ಚು ಇದ್ದರೆ, ಆ ಪ್ರದೇಶವನ್ನು 6ನೇ ಪರಿಚ್ಛೇದಕ್ಕೆ ಸೇರಿಸಲು ಸಂವಿಧಾನದಲ್ಲಿ ಅವಕಾಶವಿದೆ.

ಕೇಂದ್ರದ ಅಂಕಿ ಅಂಶಗಳ ಪ್ರಕಾರ ಲಡಾಖ್‌ನಲ್ಲಿ ಬುಡಕಟ್ಟು ಸಮುದಾಯಗಳ ಜನಸಂಖ್ಯೆ ಶೇ 97ರಷ್ಟಿದೆ.

**ಆಯೋಗ ಶಿಫಾರಸು:** ಲಡಾಖ್‌ನಲ್ಲಿ ಬುಡಕಟ್ಟು ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ ಆ ಪ್ರದೇಶವನ್ನು ಸಂವಿಧಾನದ ಐದನೇ/ಆರನೇ ಪರಿಚ್ಛೇದಕ್ಕೆ ಸೇರ್ಪಡೆಗೊಳಿಸಬಹುದು ಎಂದು ಪರಿಶಿಷ್ಟ ಪಂಗಡಗಳ ರಾಷ್ಟ್ರೀಯ ಆಯೋಗ 2019ರ ಸೆಪ್ಟೆಂಬರ್‌ನಲ್ಲೇ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿತ್ತು.

## ❖ ‘ಪ್ಯಾಲೆಸ್ಟೀನ್: ಭಾರತ ನಾಯಕತ್ವ ಪ್ರದರ್ಶಿಸಬೇಕು’

ಸಂದರ್ಭ: ಪ್ಯಾಲೆಸ್ಟೀನ್ ವಿಚಾರದಲ್ಲಿ ಭಾರತವು ನಾಯಕತ್ವವನ್ನು ಪ್ರದರ್ಶಿಸಬೇಕಾದ ಅಗತ್ಯವಿದೆ ಎಂದು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಪ್ರತಿಪಾದಿಸಿದ್ದಾರೆ.

- **‘ಪ್ಯಾಲೆಸ್ಟೀನ್ ಅನ್ನು ದೇಶವೆಂದು ಗುರುತಿಸುವಲ್ಲಿ ಬ್ರಿಟನ್, ಕೆನಡಾ, ಪೋರ್ಚುಗಲ್, ಆಸ್ಟ್ರೇಲಿಯಾ ಜತೆಗೆ ಇದೀಗ ಫ್ರಾನ್ಸ್ ಸಹ ಸೇರಿಕೊಂಡಿದೆ**. ದೀರ್ಘ ಕಾಲದಿಂದ ಬಳಲಿರುವ ಪ್ಯಾಲೆಸ್ಟೀನ್ ಜನರ ಕಾನೂನುಬದ್ಧ ಆಕಾಂಕ್ಷೆಗಳನ್ನು ಈಡೇರಿಸಲು ಇದು ಮಹತ್ವದ ಹೆಜ್ಜೆಯಾಗಿದೆ’ ಎಂದು ವಿವರಿಸಿರುವ ಅವರು, ವಿಶ್ವಸಂಸ್ಥೆಯ 193 ದೇಶಗಳ ಪೈಕಿ 150ಕ್ಕೂ ಹೆಚ್ಚು ದೇಶಗಳು ಪ್ಯಾಲೆಸ್ಟೀನ್ ಅನ್ನು ಬೆಂಬಲಿಸಿವೆ ಎಂದೂ ಉಲ್ಲೇಖಿಸಿದ್ದಾರೆ.
- **ಭಾರತವು 1988ರ ನವೆಂಬರ್ 18ರಂದು ಪ್ಯಾಲೆಸ್ಟೀನ್ ಅನ್ನು ದೇಶವಾಗಿ ಗುರುತಿಸುವ ಮೂಲಕ ನಾಯಕತ್ವ ಪ್ರದರ್ಶಿಸಿತ್ತು.**
- ದಕ್ಷಿಣ ಆಫ್ರಿಕಾದಲ್ಲಿನ ವರ್ಣಭೇದ ನೀತಿಯನ್ನು ಸ್ವಾತಂತ್ರ್ಯ ಪೂರ್ವದಲ್ಲಿಯೇ ಭಾರತ ಪ್ರಶ್ನಿಸಿತ್ತು. ಅಲ್ಲದೆ 1954–62ರ ಅಲ್ಜೀರಿಯಾ ಸ್ವಾತಂತ್ರ್ಯ ಹೋರಾಟದ ವೇಳೆ ಭಾರತ ಅಲ್ಜೀರಿಯಾ ಪರ ಬಲವಾಗಿ ಧ್ವನಿಯೆತ್ತಿತ್ತು.
- ಪೂರ್ವ ಪಾಕಿಸ್ತಾನದಲ್ಲಿನ ನರಮೇಧವನ್ನು ತಡೆಯಲು ಭಾರತ ಮಧ್ಯ ಪ್ರವೇಶಿಸಿತ್ತು. ಆ ಬಳಿಕ 1971ರಲ್ಲಿ ಬಾಂಗ್ಲಾದೇಶ ಜನನವಾಯಿತು ಎಂಬ ಮಾಹಿತಿಯನ್ನು ಅವರು ಲೇಖನದಲ್ಲಿ ಉಲ್ಲೇಖಿಸಿದ್ದಾರೆ.
- ನ್ಯಾಯ, ಗುರುತು, ಘನತೆ ಮತ್ತು ಮಾನವ ಹಕ್ಕುಗಳಿಗಾಗಿ ನಡೆಯುತ್ತಿರುವ ಪ್ಯಾಲೆಸ್ಟೀನ್ ಹೋರಾಟದ ಬಗ್ಗೆ ಭಾರತ ನಾಯಕತ್ವವನ್ನು ಪ್ರದರ್ಶಿಸಬೇಕಿದೆ ಎಂದು ಅವರು ಆಗ್ರಹಿಸಿದ್ದಾರೆ.

## ❖ ತಿರುಮಲ: ಎ.ಐ ಕಮಾಂಡ್- ಕಂಟ್ರೋಲ್ ಕೇಂದ್ರ ಸ್ಥಾಪನೆ

ಸಂದರ್ಭ: ವಿಶ್ವದ ಅತೀ ಶ್ರೀಮಂತ ಹಿಂದೂ ದೇವಾಲಯವಾದ ತಿರುಮಲದ ತಿಮ್ಮಪ್ಪನ ಸನ್ನಿಧಾನದಲ್ಲಿ ದೇಶದಲ್ಲೇ ಮೊದಲ ಕೃತಕ ಬುದ್ಧಿಮತ್ತೆ (ಎ.ಐ) ಆಧಾರಿತ ಇಂಟಿಗ್ರೇಟೆಡ್ ಕಮಾಂಡ್ ಆ್ಯಂಡ್ ಕಂಟ್ರೋಲ್ ಸೆಂಟರ್ (ಐಸಿಸಿಸಿ)ಗೆ ಚಾಲನೆ ನೀಡಲಾಗಿದೆ.

- ಪ್ರತಿ ಗಂಟೆಗೆ 4,500 ಮಂದಿ ವೆಂಕಟೇಶ್ವರನ ದರ್ಶನ ಪಡೆಯುತ್ತಿದ್ದು, ಹೊಸ ಸೌಲಭ್ಯವು ಭಕ್ತಿ ಹಾಗೂ ಅತ್ಯಾಧುನಿಕ ತಂತ್ರಜ್ಞಾನದ ಸಮ್ಮಿಳಿತವಾಗಿದೆ.
- ಅನಿವಾಸಿ ಭಾರತೀಯರು ನೀಡಿದ ದಾನದಿಂದ ಹೊಸ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. 6 ಸಾವಿರ ಎ.ಐ ನಿಗಾ ಕ್ಯಾಮೆರಾಗಳು ಕಮಾಂಡ್ ಕೇಂದ್ರಗಳಿಗೆ ನಿರಂತರ ಲೈವ್ ವಿಡಿಯೊ ರವಾನಿಸಲಿವೆ. ಇದರಿಂದ, ದಟ್ಟಣೆ ವೇಳೆ ಸರತಿಯ ಸಾಲು ನಿರ್ವಹಣೆಯ ಜೊತೆಗೆ ಕ್ಷಿಪ್ರವಾಗಿ ಸ್ಪಂದಿಸಲು ನೆರವಾಗಲಿದೆ.

## ❖ ಗ್ರಾಮ ಸಹಾಯಕರಿಗೆ ಇಡುಗಂಟು

ಸಂದರ್ಭ: ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಸಹಾಯಕರು ಕೆಲಸದಿಂದ ನಿವೃತ್ತಿ ಹೊಂದಿದ ನಂತರ ಅಥವಾ ಕೆಲಸದಲ್ಲಿ ಇರುವಾಗಲೇ ಮೃತರಾದರೆ ₹10 ಲಕ್ಷಗಳ ಇಡುಗಂಟು ನೀಡಲು ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

- ಅಲ್ಲದೇ, ಈ ಕೆಲಸವನ್ನು ಗ್ರೂಪ್ ‘ಡಿ’ ಹುದ್ದೆಯಲ್ಲಿ ಸಕ್ರಮಗೊಳಿಸುವುದು ಅಥವಾ ಗೌರವ ಧನವನ್ನು ₹15,000 ದಿಂದ ₹27,000ಕ್ಕೆ ಹೆಚ್ಚಿಸುವುದು ಇವೆರಡಲ್ಲಿ ಒಂದು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲು ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದರು.
- ಬಾಡಿಗೆ ಮಸೂದೆಗೆ ಒಪ್ಪಿಗೆ: ಕೇಂದ್ರ ಸರ್ಕಾರವು ‘ಜನ ವಿಶ್ವಾಸ’ ಕಾಯ್ದೆಯನ್ನು ಜಾರಿಗೆ ತಂದಿದ್ದು, ಇದನ್ನು ರಾಜ್ಯದಲ್ಲಿ ಜಾರಿಗೆ ತರಲು ಕರ್ನಾಟಕ ಬಾಡಿಗೆ ಕಾಯ್ದೆ 1999ರ ವಿವಿಧ ಕಲಂಗಳ ಅಡಿಯಲ್ಲಿ ದಂಡ, ಅಪರಾಧ ನಿಬಂಧನೆ ಗಳಿಗೆ ತಿದ್ದುಪಡಿ ಮಾಡಲು ಸಂಪುಟ ಒಪ್ಪಿಗೆ ನೀಡಿದೆ.

- ಇದು ಕೈಗಾರಿಕಾ ಕಟ್ಟಡಗಳು, ಶೆಡ್‌ಗಳ ಬಾಡಿಗೆ ಸಂಬಂಧಿಸಿ ದ್ದಾಗಿದೆ. ಈ ತಿದ್ದುಪಡಿ ಮಸೂದೆಯನ್ನು ವಿಧಾನ ಮಂಡಲದ ಅಧಿವೇಶನ ದಲ್ಲಿ ಮಂಡಿಸ ಲಾಗುವುದು. ಈ ತಿದ್ದುಪಡಿ ಮೂಲಕ ದಂಡ ಪ್ರಮಾಣವನ್ನು ತರ್ಕಬದ್ಧ ಗೊಳಿಸಲಾಗುವುದು ಎಂದು ಪಾಟೀಲ ಹೇಳಿದರು.
- ಮುಖ್ಯವಾಗಿ ವಿವಿಧ ಅಪರಾಧದ ಪ್ರಕರಣಗಳನ್ನು ಅಪರಾಧವಲ್ಲ ಎಂದು ನಿರ್ಣಯಿಸುವುದು, ವಿವಿಧ ರೀತಿಯ ದಂಡಗಳನ್ನು ಪರಿಷ್ಕರಿಸುವುದು, ನ್ಯಾಯಾಂಗ ಅಧಿಕಾರಿ ಯನ್ನು ನೇಮಿಸುವುದು, ಮೇಲ್ಮನವಿ ಘಟಕದ ಸ್ಥಾಪನೆ ಮತ್ತು ದಂಡ ಪ್ರಮಾಣವನ್ನು ಕಾಲ ಕಾಲಕ್ಕೆ ಹೆಚ್ಚಿಸುವ ಅಂಶವನ್ನು ತಿದ್ದುಪಡಿ ಒಳಗೊಂಡಿದೆ ಎಂದರು.

## ❖ ವಿಪತ್ತು ಉಪಶಮನಕ್ಕೆ ₹1,005 ಕೋಟಿ

ಸಂದರ್ಭ: ರಾಜ್ಯದ ವಿಪತ್ತು ಉಪಶಮನ ನಿಧಿಯಡಿ ₹1,005 ಕೋಟಿ ವೆಚ್ಚದಲ್ಲಿ ವಿವಿಧ ಜಿಲ್ಲೆಗಳಲ್ಲಿ ಉಪಶಮನ ಕಾಮಗಾರಿಗಳನ್ನು ಕೈಗೊಳ್ಳಲು ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

- ಕರಾವಳಿ ಮತ್ತು ಮಲೆನಾಡಿನ ಜಿಲ್ಲೆಗಳಾದ ಚಿಕ್ಕಮಗಳೂರು, ದಕ್ಷಿಣ ಕನ್ನಡ, ಕೊಡಗು, ಶಿವಮೊಗ್ಗ, ಉತ್ತರ ಕನ್ನಡ ಮತ್ತು ಹಾಸನ ಜಿಲ್ಲೆಗಳಲ್ಲಿನ ಪುನರಾವರ್ತಿತ ಭೂಕುಸಿತವನ್ನು ತಡೆಗಟ್ಟಲು ₹466.93 ಕೋಟಿ ವೆಚ್ಚದಲ್ಲಿ 720 ಕಾಮಗಾರಿ ಕೈಗೊಳ್ಳಲು ಒಪ್ಪಿಗೆ ನೀಡಲಾಗಿದೆ ಎಂದರು.
- **ರೈತರು ತಮ್ಮ ಜಮೀನಿನಲ್ಲಿ ಬಿದ್ದ ಮಳೆಯ ನೀರನ್ನು ಹೊಂಡಗಳಲ್ಲಿ ಸಂಗ್ರಹಿಸಿ ಆಪತ್ಕಾಲದಲ್ಲಿ ಬೆಳೆಗಳಿಗೆ ಬಳಸಲು 'ಕೃಷಿ ಭಾಗ್ಯ' ಯೋಜನೆಯಡಿ ಹಣಕಾಸು ನೆರವು ಒದಗಿಸಲು ತೀರ್ಮಾನಿಸಲಾಗಿದೆ**. ಇದಕ್ಕಾಗಿ ₹200 ಕೋಟಿ ಅನುದಾನವನ್ನು ಕೃಷಿ ಇಲಾಖೆಗೆ ಬಿಡುಗಡೆ ಮಾಡಲು ಅನುಮೋದನೆ ನೀಡಲಾಗಿದೆ ಎಂದು ಹೇಳಿದರು.
- **ಸಣ್ಣ ನೀರಾವರಿ ಇಲಾಖೆ ವಿಶ್ವ ಬ್ಯಾಂಕ್‌ನಿಂದ ₹550 ಕೋಟಿ ಆರ್ಥಿಕ ನೆರವು ಪಡೆದುಕೊಂಡಿದೆ. ಇದರಲ್ಲಿ ₹300 ಕೋಟಿಯನ್ನು ಬೆಂಗಳೂರು ನಗರದ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ ನೀರನ್ನು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಪೂರೈಕೆ ಮಾಡಲು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ ಕೆರೆಗಳಿಗೆ ಲಿಫ್ಟ್-4 ವೃಷಭಾವತಿ ವ್ಯಾಲಿ ಯೋಜನೆ- ಹಂತ 2 ರ ಮೂಲಕ ನೀರನ್ನು ತುಂಬಿಸುವ ಯೋಜನೆಗೆ ಬಳಸಲು ಒಪ್ಪಿಗೆ ನೀಡಲಾಗಿದೆ** ಎಂದು ಅವರು ತಿಳಿಸಿದರು.

ಪ್ರಮುಖ ತೀರ್ಮಾನಗಳು:

- 15 ನೇ ಹಣಕಾಸು ಆಯೋಗದ ಯೋಜನೆಯಡಿ ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆ ವಿಸ್ತರಣೆ ಮತ್ತು ಆಧುನೀಕರಣಕ್ಕೆ ₹329 ಕೋಟಿ ಪರಿಷ್ಕೃತ ಅಂದಾಜಿಗೆ ಒಪ್ಪಿಗೆ
- ನವದೆಹಲಿ ಚಾಣಕ್ಯಪುರಿ ಸರ್ದಾರ್ ಪಟೇಲ್ ಮಾರ್ಗದಲ್ಲಿರುವ ಕರ್ನಾಟಕ ಭವನ-2(ಶರಾವತಿ) ಕಟ್ಟಡದ ನವೀಕರಣಕ್ಕೆ ₹16.30 ಕೋಟಿ
- ಪ್ರಾದೇಶಿಕ ಸಾರಿಗೆ ಕಚೇರಿಗಳಲ್ಲಿ 2019 ರ ಮಾರ್ಚ್ 31 ಕ್ಕೆ ಮೊದಲು ನೋಂದಣಿಯಾದ ವಾಹನಗಳ ದಾಖಲೆಗಳನ್ನು ಡಿಜಿಟಲೀಕರಣ ಗೊಳಿಸುವ ಯೋಜನೆಗೆ ₹40 ಕೋಟಿ
- ಕೆಎಸ್‌ಆರ್‌ಪಿ ಅಧೀನದಲ್ಲಿ ಹೊಸದಾಗಿ ಸ್ಥಾಪಿಸಿರುವ ಎರಡು ಐಆರ್‌ಬಿ ಪಡೆಗಳಿಗೆ ಅವಶ್ಯವಿರುವ ವಸತಿ ಮತ್ತು ವಸತಿಯೇತರ ಸೌಕರ್ಯಗಳನ್ನು ಕಲ್ಪಿಸಲು ₹60 ಕೋಟಿ
- ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ನಿರ್ವಹಣಾ ತಂತ್ರಾಂಶ 2 ನೇ ಆವೃತ್ತಿಯನ್ನು ₹40.29 ಕೋಟಿ ಅಂದಾಜು ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಸಮ್ಮತಿ

## ❖ ಕರ್ನಾಟಕ ಕೌಶಲ ಅಭಿವೃದ್ಧಿ ನೀತಿಗೆ ಅಸ್ತು

ಸಂದರ್ಭ: ಕರ್ನಾಟಕದ ಯುವ ಜನತೆ ಜಾಗತಿಕ ಮಟ್ಟದಲ್ಲಿ ಉದ್ಯೋಗ ಗಿಟ್ಟಿಸುವ ನಿಟ್ಟಿನಲ್ಲಿ ಕೌಶಲ ಸಾಮರ್ಥ್ಯವನ್ನು ಹೆಚ್ಚಿಸಲು 'ಕರ್ನಾಟಕ ಕೌಶಲ ಅಭಿವೃದ್ಧಿ ನೀತಿ 2025–2032' ಕ್ಕೆ ಸಂಪುಟ ಸಭೆ ಒಪ್ಪಿಗೆ ನೀಡಿದೆ.


Dr. Rajkumar IAS/KAS Academy

ಕೌಶಲ ನೀತಿ ಪ್ರಮುಖ ಅಂಶಗಳು:

- ಕಲಿಕೆ ಜೊತೆಗೆ ಕೌಶಲ, **'ನನ್ನ ವೃತ್ತಿ ನನ್ನ ಆಯ್ಕೆ' ಯೋಜನೆಗೆ** ಆದ್ಯತೆ. ಅಪ್ರೆಂಟಿಸ್‌ಶಿಪ್, ಐಟಿಐ ತರಬೇತಿ ಮೂಲಕ ವಿಶೇಷ ಸಹಯೋಗ. ತಾಂತ್ರಿಕ ಮತ್ತು ಕೈಗಾರಿಕಾ ಬದಲಾವಣೆಗಳಿಗೆ ತಕ್ಕಂತೆ ನಿರಂತರ ಕಲಿಕೆಗೆ ಒತ್ತು. ಮಹಿಳೆಯರು, ಅಂಗವಿಕಲರು, ನಗರ ಪ್ರದೇಶದ ಬಡವರು, ದಮನಿತ ಸಮುದಾಯಗಳಿಗೆ ತರಬೇತಿ. ಐಟಿಐಗಳ ಆಧುನೀಕರಣ, ಜಿಟಿಟಿಸಿ ವಿಸ್ತರಣೆ ಮತ್ತು ಗ್ರಾಮೀಣ ಮತ್ತು ನಗರ ಕೌಶಲ ಕೇಂದ್ರಗಳ ಸ್ಥಾಪನೆ ಮತ್ತು ಮೂಲಸೌಕರ್ಯ ಹೆಚ್ಚಳಕ್ಕೆ ಕ್ರಮ ತೆಗೆದುಕೊಳ್ಳಲಾಗುವುದು.

## ❖ 'ಬೆಂಗಳೂರು ಸಿಟಿ ದಿಶಾಂಕ್' ಬಿಡುಗಡೆ

ಸಂದರ್ಭ: ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ 5 ನಗರ ಪಾಲಿಕೆಗಳು ಸೇರಿದಂತೆ ಎಲ್ಲ ಮಾಹಿತಿಯನ್ನು ತಿಳಿಯಲು ಮೊಬೈಲ್ ತಂತ್ರಾಂಶ 'ಬೆಂಗಳೂರು ಸಿಟಿ ದಿಶಾಂಕ್' ಬಿಡುಗಡೆ ಮಾಡಲಾಗಿದೆ.




- ಇದು ಜಿಐಎಸ್ ಮೊಬೈಲ್ ಅಪ್ಲಿಕೇಶನ್ ಆಗಿದ್ದು, ಜಿಬಿಎ, 5 ನಗರ ಪಾಲಿಕೆಗಳು, ವಲಯ, ವಿಧಾನಸಭಾ ಕ್ಷೇತ್ರ ಹಾಗೂ ವಾರ್ಡ್‌ಗಳ (ಹಳೆಯ 198 ವಾರ್ಡ್) ಅಧಿಕೃತ ಗಡಿಗಳನ್ನು ವೀಕ್ಷಿಸಬಹುದು. ಮುಂದಿನ ದಿನಗಳಲ್ಲಿ ಮತ್ತಷ್ಟು ವಿವರಗಳಿರುವ ಜಿಐಎಸ್ ಮಾಹಿತಿ ಸೇರಿಸಲಾಗುವುದು.

## ❖ ಜೂನಿಯರ್ ಶೂಟಿಂಗ್: ಅನುಷ್ಕಾಗೆ ಚಿನ್ನದ ಪದಕ

ಸಂದರ್ಭ: ಭಾರತ ತಂಡವು, ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವಕಪ್‌ನಲ್ಲಿ ಭರ್ಜರಿ ಆರಂಭ ಮಾಡಿತು.



**ಅನುಷ್ಕಾ ತೋಕೂರು**

- ಮೊದಲ ದಿನವಾದ ಗುರುವಾರ 50 ಮೀ. ರೈಫಲ್ ಪ್ರೋನ್ ಸ್ಪರ್ಧೆಯಲ್ಲಿ ಮಹಿಳಾ ತಂಡ ಮೂರೂ ಪದಕ ಗೆದ್ದು ಕ್ಲೀನ್ ಸ್ವೀಪ್ ಮಾಡಿದರೆ, ಪುರುಷರ ತಂಡ ಬೆಳ್ಳಿ ಮತ್ತು ಕಂಚಿನ ಪದಕ ಗೆದ್ದುಕೊಂಡಿತು.
- ಕರ್ನಾಟಕದ ಅನುಷ್ಕಾ ತೋಕೂರು ಅವರು ಡಾ.ಕರ್ಣಿ ಸಿಂಗ್ ರೇಂಜ್‌ನಲ್ಲಿ ನಡೆದ ಸ್ಪರ್ಧೆಯಲ್ಲಿ 621.6 ಸ್ಕೋರ್‌ನೊಡನೆ ಚಿನ್ನ ಗೆದ್ದರು.
- 18 ವರ್ಷ ವಯಸ್ಸಿನ ಅನ್ವಿಕಾ (619.2) ಬೆಳ್ಳಿ ಗೆದ್ದರೆ, 20 ವರ್ಷ ವಯಸ್ಸಿನ ಆಧ್ಯಾ ಅಗರವಾಲ್ (615.9) ಕಂಚಿನ ಪದಕ ಗೆದ್ದರು.
- ಕಜಕಸ್ತಾನದಲ್ಲಿ ಇತ್ತೀಚೆಗೆ ನಡೆದ ಏಷ್ಯನ್ ಚಾಂಪಿಯನ್‌ಷಿಪ್‌ನಲ್ಲಿ ಅನುಷ್ಕಾ ಅವರು 50 ಮೀ. ರೈಫಲ್ 3 ಪೊಸಿಷನ್ ಸ್ಪರ್ಧೆಯಲ್ಲಿ ಚಿನ್ನಕ್ಕೆ ಗುರಿಯಿಡುವಲ್ಲಿ ಯಶಸ್ವಿ ಆಗಿದ್ದರು.
- ದೀಪೇಂದ್ರ ಸಿಂಗ್ ಶೆಖಾವತ್ ಮತ್ತು ರೋಹಿತ್ ಕನ್ಯಾನ ಅವರು ಪುರುಷರ ವಿಭಾಗದ 50 ಮೀ. ರೈಫಲ್ ಪ್ರೋನ್ ಸ್ಪರ್ಧೆಯಲ್ಲಿ ಕ್ರಮವಾಗಿ ಬೆಳ್ಳಿ ಮತ್ತು ಕಂಚು ಗೆದ್ದರು. ತಟಸ್ಥ ಅಥ್ಲೀಟ್ಸ್ ತಂಡದ ಕಮಿಲ್ ನುರಿಯಾಕ್‌ಮೆಟೋವ್ (618.9) ಚಿನ್ನ ಗೆದ್ದರು. ದೀಪೇಂದ್ರ 617.9 ಮತ್ತು ರೋಹಿತ್ 616.3 ಸ್ಕೋರ್

Dr. Rajkumar IAS Academy

## ❖ 24x7 ತ್ರಿವಳಿ ತಜ್ಞ ವೈದ್ಯರ ಲಭ್ಯತೆ

ಸಂದರ್ಭ: ತಾಯಿ ಮತ್ತು ನವಜಾತ ಶಿಶುಗಳ ಸಾವಿನ ಪ್ರಮಾಣವನ್ನು ತಗ್ಗಿಸಲು ತಾಲ್ಲೂಕು ಮಟ್ಟದ 148 ಆಸ್ಪತ್ರೆ ಗಳಲ್ಲಿ ದಿನದ 24 ಗಂಟೆಯೂ ತ್ರಿವಳಿ ತಜ್ಞರ ಲಭ್ಯತೆ ಸೇರಿ ವಿವಿಧ ಕ್ರಮಗಳನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪ್ರಕಟಿಸಿದರು.

- ತಾಯಿ ಮತ್ತು ಮಕ್ಕಳ ಆರೋಗ್ಯ ಸೇವೆಗಳ ಬಲವರ್ಧನೆಗೆ ತ್ರಿವಳಿ ತಜ್ಞರ ಸೇವೆ ತರ್ಕಬದ್ಧಗೊಳಿ ಸುವ ಪ್ರಸ್ತಾವಕ್ಕೆ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಸಿಕ್ಕಿದೆ. ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಅವರು ವಿವರ ನೀಡಿದರು.
- ತ್ರಿವಳಿ ತಜ್ಞರು ಎಂದರೆ ಸ್ತ್ರೀರೋಗ, ಅರಿವಳಿಕೆ ಮತ್ತು ಮಕ್ಕಳ ತಜ್ಞರು. ಈ ಮೂವರು ತಜ್ಞರು ಎಲ್ಲ ತಾಲ್ಲೂಕು ಆಸ್ಪತ್ರೆಗಳಲ್ಲಿ 24 ಗಂಟೆಯೂ ಪಾಳಿಗಳಲ್ಲಿ ಕಾರ್ಯನಿರ್ವಹಿಸುತ್ತಾರೆ. ಇದಕ್ಕಾಗಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಆಸ್ಪತ್ರೆಗಳಲ್ಲಿ ತಜ್ಞರ ಸಂಖ್ಯೆ ಹೆಚ್ಚಿಸುವುದರ ಜತೆಗೆ, ಯಾವುದೇ ಆಸ್ಪತ್ರೆಯಲ್ಲಿ ಅಗತ್ಯಕ್ಕಿಂತ ಹೆಚ್ಚು ತಜ್ಞರಿದ್ದರೆ, ತಜ್ಞರ ಕೊರತೆ ಇರುವ ಕಡೆಗೆ ನಿಯೋಜಿಸಲಾಗುವುದು.ತಜ್ಞ ವೈದ್ಯರು ಇಲ್ಲದೇ ಯಾವ ತಾಯಿಯೂ ಸಾವಿಗೀಡಾಗಬಾರದು ಎಂಬುದು ಸರ್ಕಾರದ ಆದ್ಯತೆ ಎಂದು ಹೇಳಿದರು.
- ‘ರಾಜ್ಯದಲ್ಲಿ ಈಗ ಪ್ರತಿ 1 ಲಕ್ಷಕ್ಕೆ 60 ಮಂದಿ ತಾಯಂದಿರ ಸಾವು ಸಂಭವಿಸುತ್ತಿದೆ. ನೆರೆಯ ರಾಜ್ಯಗಳಾದ ತಮಿಳುನಾಡು ಮತ್ತು ಕೇರಳಕ್ಕೆ ಹೋಲಿಸಿದರೆ, ನಮ್ಮ ರಾಜ್ಯದಲ್ಲಿ ಸಾವಿನ ಸಂಖ್ಯೆ ಹೆಚ್ಚು ಇದೆ. ಇದನ್ನು ಮೊದಲ ಹಂತದಲ್ಲಿ 40ಕ್ಕೆ ಇಳಿಸಿ, ಬಳಿಕ ಶೂನ್ಯಕ್ಕೆ ತರುವುದು ನಮ್ಮ ಉದ್ದೇಶ. ಇದಕ್ಕೆ ಪೂರಕವಾಗಿ ಸಾವಿನ ಆಡಿಟ್ ನಡೆಸಲಾಗಿದೆ. ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಲಭ್ಯತೆ ಸೇರಿ ವಿವಿಧ ಲೋಪಗಳನ್ನು ಸರಿಪಡಿಸಲಾಗಿದೆ’ ಎಂದು ದಿನೇಶ್ ತಿಳಿಸಿದರು.

## ❖ ಔಷಧಕ್ಕೂ ಶೇ 100 ಸುಂಕ ಹೇರಿದ ಟ್ರಂಪ್

ಸಂದರ್ಭ: ಅಮೆರಿಕವು ಆಮದು ಮಾಡಿಕೊಳ್ಳುವ ಔಷಧಗಳ ಮೇಲೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶೇ 100ರಷ್ಟು ಸುಂಕ ವಿಧಿಸಿದ್ದಾರೆ.

- ಪರಿಷ್ಕೃತ ತೆರಿಗೆ ದರವು ಅಕ್ಟೋಬರ್ 1ರಿಂದ ಜಾರಿಗೆ ಬರಲಿದೆ. ಔಷಧದ ಜತೆಗೆ, ಕಿಚನ್ ಕ್ಯಾಬಿನೆಟ್ ಮತ್ತು ಸ್ನಾನಗೃಹ ಉಪಕರಣಗಳ ಮೇಲೆ ಶೇ 50, ಮೆತ್ತನೆಯ ಹಾಸಿಗೆ, ಸೋಫಾಸೆಟ್, ಪೀಠೋಪಕರಣಗಳ ಮೇಲೆ ಶೇ 30 ಮತ್ತು ಭಾರಿ ಟ್ರಕ್‌ಗಳ ಮೇಲೆ ಶೇ 25ರಷ್ಟು ಆಮದು ಸುಂಕ ಹೇರುವುದಾಗಿ ಟ್ರಂಪ್ ಹೇಳಿದ್ದಾರೆ.
- ಆಮದು ತೆರಿಗೆ ಹೆಚ್ಚಳವು ಸರ್ಕಾರದ ಬಜೆಟ್ ಹೊರೆಯನ್ನು ತಗ್ಗಿಸಲಿದೆ ಮತ್ತು ದೇಶೀಯ ತಯಾರಿಕೆಯನ್ನು ಹೆಚ್ಚಿಸಲಿದೆ ಎಂದು ಟ್ರಂಪ್ ತಮ್ಮ ಸಾಮಾಜಿಕ ಜಾಲತಾಣ ‘ಟ್ರೂಥ್’ ನಲ್ಲಿ ಹೇಳಿದ್ದಾರೆ.
- ಸುಂಕ ಏರಿಕೆಗೆ ಟ್ರಂಪ್ ಕಾನೂನು ಸಮರ್ಥನೆಯನ್ನು ನೀಡಿಲ್ಲ. ಆದರೆ, ರಾಷ್ಟ್ರೀಯ ಭದ್ರತೆ ಮತ್ತಿತರ ಕಾರಣಗಳಿಗಾಗಿ ಸುಂಕ ಏರಿಕೆ ಮಾಡುತ್ತಿರುವುದಾಗಿ ಹೇಳಿದ್ದಾರೆ.

### ಆರ್ಥಿಕ ಅನಿಶ್ಚಿತತೆಯ ಸೂಚನೆ

- ಆಮದು ಸುಂಕ ಏರಿಕೆಯು ಅಮೆರಿಕದ ಆರ್ಥಿಕ ಅನಿಶ್ಚಿತತೆಯ ಮತ್ತೊಂದು ಸೂಚನೆಯಾಗಿದೆ. ಸುಭದ್ರವಾದ ಷೇರು ಮಾರುಕಟ್ಟೆ ಇದ್ದರೂ ಉದ್ಯೋಗ ಕಡಿತ ಮತ್ತು ಹಣದುಬ್ಬರ ಹೆಚ್ಚುತ್ತಿರುವುದು ಕಳವಳಕಾರಿಯಾಗಿದೆ. ಆಮದು ಸುಂಕದ ಹೊರೆಯನ್ನು ಗ್ರಾಹಕರಿಗೆ ವರ್ಗಾಯಿಸುವುದರಿಂದ ಪರಿಸ್ಥಿತಿ ಇನ್ನಷ್ಟು ಹದಗೆಡಬಹುದು ಎಂಬ ವಿಶ್ಲೇಷಣೆಗಳು ನಡೆಯುತ್ತಿವೆ.
- ‘ಸುಂಕ ಮತ್ತು ಸರಕುಗಳ ಬೆಲೆ ಏರಿಕೆಯಿಂದ ಇತ್ತೀಚಿನ ವರ್ಷಗಳಲ್ಲಿ ಹಣದುಬ್ಬರ ಹೆಚ್ಚುತ್ತಿರುವುದನ್ನು ನಾವು ಗಮನಿಸುತ್ತಿದ್ದೇವೆ’ ಎಂದು ಫೆಡರಲ್ ರಿಸರ್ವ್‌ನ ಅಧ್ಯಕ್ಷ ಜೆರೋಮ್ ಪೊವೆಲ್ ಇತ್ತೀಚೆಗೆ ಎಚ್ಚರಿಕೆ ನೀಡಿದ್ದರು. ಆದರೆ, ಟ್ರಂಪ್ ಅವರು ಪೊವೆಲ್ ಅವರ ರಾಜೀನಾಮೆಗೆ ಒತ್ತಡ ಹೇರಿದ್ದರು.

Dr. Rajkumar's KAS Academy

- 'ಅಮೆರಿಕದಲ್ಲಿ ಯಾವುದೇ ಹಣದುಬ್ಬರ ಇಲ್ಲ. ನಾವು ನಂಬಲಾಗದ ಯಶಸ್ಸನ್ನು ಕಂಡಿದ್ದೇವೆ' ಎಂದು ಟ್ರಂಪ್ ಹೇಳಿದ್ದಾರೆ.
- 1962ರ ವ್ಯಾಪಾರ ವಿಸ್ತರಣಾ ಕಾಯ್ದೆಯಡಿ ಅಮೆರಿಕವು, ಔಷಧ, ಭಾರಿ ಟ್ರಕ್, ಮರದ ದಿಮ್ಮಿಗಳು ಸೇರಿದಂತೆ ವಿವಿಧ ವಸ್ತುಗಳ ಆಮದಿನಿಂದ ರಾಷ್ಟ್ರೀಯ ಭದ್ರತೆ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆ ಇತ್ತೀಚೆಗೆ ತನಿಖೆ ನಡೆಸಿತ್ತು. ಈಗ ಔಷಧ, ಪೀಠೋಪಕರಣಗಳ ಮೇಲೆ ಆಮದು ಸುಂಕ ಹೆಚ್ಚಿಸಿರುವುದು ಇದೇ ಕಾರಣಕ್ಕಾಗಿಯೇ ಎನ್ನುವುದು ಇನ್ನೂ ಸ್ಪಷ್ಟವಾಗಿಲ್ಲ.
- ಶೇ 100ರಷ್ಟು ತೆರಿಗೆಯು ಅಮೆರಿಕದಲ್ಲಿ ಹೊಸದಾಗಿ ನಿರ್ಮಣವಾಗುವ ಮತ್ತು ನಿರ್ಮಾಣ ಹಂತದಲ್ಲಿರುವ ಔಷಧ ತಯಾರಿಕಾ ಘಟಕಗಳಿಗೆ ಅನ್ವಯಿಸುವುದಿಲ್ಲ ಎಂದು ಟ್ರಂಪ್ ಹೇಳಿದ್ದಾರೆ. ಆದರೆ, ಈಗಾಗಲೇ ಅಲ್ಲಿ ಔಷಧ ತಯಾರಿಸುತ್ತಿರುವ ಘಟಕಗಳಿಗೆ ಈ ತೆರಿಗೆ ಅನ್ವಯಿಸಲಿದೆಯೇ ಎನ್ನುವುದು ಸಷ್ಟಗೊಂಡಿಲ್ಲ.
- ಸುಂಕ ಬೆದರಿಕೆ ಬೆನ್ನಲ್ಲೇ, ಜಾನ್ಸನ್ ಆ್ಯಂಡ್ ಜಾನ್ಸನ್, ಅಸ್ಟ್ರಾ ಜೆನೆಕಾ, ರೋಚ್, ಬ್ರಿಸ್ಟೊಲ್, ಎಲಿ ಲಿಲ್ಲಿ ಸೇರಿದಂತೆ ಹಲವು ಔಷಧ ತಯಾರಿಕಾ ಕಂಪನಿಗಳು ಅಮೆರಿದಲ್ಲಿ ಹೂಡಿಕೆ ಮಾಡುವುದಾಗಿ ಹೇಳಿವೆ.

## ❖ ಆಹಾರ ಸಂಸ್ಕರಣೆ ಉದ್ದಿಮೆಗಳಿಗೆ ಸಹಾಯಧನ ಬಿಡುಗಡೆ

ಸಂದರ್ಭ: ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ (ಪಿಎಂಎಫ್ಎಂಇ) ಯೋಜನೆಯಡಿ ಶೇ 35ರಷ್ಟು ಸಹಾಯಧನ ಅಂದರೆ ₹60.90 ಕೋಟಿ ಬಿಡುಗಡೆ ಮಾಡಲಾಗಿದೆ.

- ಸೆ.28ರವರೆಗೆ ನವದೆಹಲಿಯಲ್ಲಿ ನಡೆಯಲಿರುವ ವರ್ಲ್ಡ್ ಫುಡ್ ಇಂಡಿಯಾ 2025 ವ್ಯಾಪಾರ ಮೇಳದ ಭಾಗವಾಗಿ ಸಹಾಯಧನವನ್ನು 1,642 ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗಿದೆ.
- ಇದರಲ್ಲಿ ಕೇಂದ್ರದ ಪಾಲು ₹ 36.54 ಕೋಟಿ ಹಾಗೂ ರಾಜ್ಯದ ಪಾಲು ₹ 24.36 ಕೋಟಿ ಆಗಿರಲಿದೆ. ಹಾಗೆಯೇ ರಾಜ್ಯ ಸರ್ಕಾರದಿಂದ ₹ 27.17 ಕೋಟಿ ಹೆಚ್ಚುವರಿ ಟಾಪ್-ಅಪ್ ಅನುದಾನವನ್ನು ಫಲಾನುಭವಿಗಳಿಗೆ ಶೀಘ್ರ ಬಿಡುಗಡೆ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ(ಕೆಪೆಕ್) ಅಧ್ಯಕ್ಷ ಬಿ.ಎಚ್. ಹರೀಶ್ ತಿಳಿಸಿದ್ದಾರೆ.
- ಈ ಅನುದಾನ ಆಹಾರ ಸಂಸ್ಕರಣಾ ಕ್ಷೇತ್ರ ಉತ್ತೇಜಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರ ಕೈಗೊಂಡಿರುವ ಮಹತ್ವದ ಹೆಜ್ಜೆಯಾಗಿದೆ ಎಂದು ತಿಳಿಸಿದ್ದಾರೆ.

## ❖ ನಾಪತ್ತೆ ಪ್ರಕರಣ: ಆಧಾರ್ ಮಾಹಿತಿ ಒದಗಿಸಲು ನಿರ್ದೇಶನ

ಸಂದರ್ಭ: 'ನನ್ನ ಮಗ ನಾಪತ್ತೆ ಆಗಿದ್ದು ಆತ ಆಧಾರ್ ಬಳಕೆ ಮಾಡಿದ್ದ ಸ್ಥಳದ ವಿವರಗಳನ್ನು ಒದಗಿಸಲು ನಿರ್ದೇಶಿಸಬೇಕು' ಎಂಬ ತಂದೆಯೊಬ್ಬರ ಮನವಿಯನ್ನು ಪುರಸ್ಕರಿಸಿರುವ ಹೈಕೋರ್ಟ್, ಮಾಹಿತಿ ಒದಗಿಸುವಂತೆ ವಿಶಿಷ್ಟ ಗುರುತಿನ ಚೀಟಿ ಪ್ರಾಧಿಕಾರಕ್ಕೆ (ಯುಐಎಡಿಐ) ನಿರ್ದೇಶಿಸಿದೆ.

- ಈ ಸಂಬಂಧ ಹುಬ್ಬಳ್ಳಿಯ ರಾಮಲಿಂಗೇಶ್ವರ ನಗರದ ಕೃಷ್ಣಮೂರ್ತಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ (ಧಾರವಾಡ) ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಕುರಿತಂತೆ ಆದೇಶಿಸಿದೆ.
- 'ತನಿಖೆಯ ವೇಳೆ ಪೊಲೀಸರಾಗಲಿ ಅಥವಾ ಇತರೆ ಯಾವುದೇ ಸಂಸ್ಥೆಯಾ ಗಲಿ ದೃಢೀಕರಣ ಸೇರಿದಂತೆ ಆಧಾರ್ ಅನ್ನು ಬಳಕೆ ಮಾಡಬೇಕಾಗಿ ಬಂದರೆ ಅಂತಹ ಸಂದರ್ಭಗಳಲ್ಲಿ ಆಧಾರ್ ಕಾಯ್ದೆ-2016ರ ಕಲಂ 33ರ ಅನ್ವಯ ಹೈಕೋರ್ಟ್ ಮುಂದೆ ಅರ್ಜಿ ಸಲ್ಲಿಸಬೇಕು.
- ಹೈಕೋರ್ಟ್ ಯುಐಡಿಎಐಗೆ ಆಧಾರ್ ವಿವರಗಳನ್ನು ಬಳಸಿಕೊಳ್ಳಲು ಮತ್ತು ಅದನ್ನು ಕೊನೆಯದಾಗಿ ಯಾವ ಸ್ಥಳದಲ್ಲಿ ಬಳಕೆ ಮಾಡಲಾಗಿದೆ ಎಂಬ ವಿವರ ಒದಗಿಸಲು ಸೂಕ್ತ ಆದೇಶಗಳನ್ನು ಹೊರಡಿಸಲು

ಸಮಯ ಮತ್ತು ಅವಕಾಶ ನೀಡುವ ಮೂಲಕ ಆದೇಶಗಳನ್ನು ನೀಡಲಿದೆ' ಎಂದು ನ್ಯಾಯಪೀಠ ತಿಳಿಸಿದೆ.

- 'ಆಧಾರ್ ಕಾಯ್ದೆಯ ಕಲಂ 29ರ ಅಡಿಯಲ್ಲಿ ಮಾಹಿತಿ ನೀಡಲು ನಿರ್ಬಂಧವಿದೆ. ಆದರೆ, ಆ ನಿರ್ಬಂಧ ಮೂಲ ಬಯೋಮೆಟ್ರಿಕ್ ಮಾಹಿತಿಗಷ್ಟೇ ಸೀಮಿತವಾಗಿದೆ. ಆದರೆ, ಯಾರಾದರೂ ನಿರ್ದಿಷ್ಟವಾಗಿ ಅರ್ಜಿ ಸಲ್ಲಿಸಿದಾಗ ಆಧಾರ್ ಸಂಖ್ಯೆ, ಬಯೋಮೆಟ್ರಿಕ್ ಮಾಹಿತಿ ಮತ್ತು ಡೆಮೋಗ್ರಾಫಿಕ್ ಮಾಹಿತಿಯನ್ನು ಒದಗಿಸಬೇಕಾಗುತ್ತದೆ. ಕೆಲವೊಂದು ಸಂದರ್ಭಗಳಲ್ಲಿ ತನಿಖೆಯ ಉದ್ದೇಶಕ್ಕೆ ಅಗತ್ಯ ಮಾಹಿತಿಯನ್ನು ಒದಗಿಸುವಂತೆ ಯುಐಡಿಎಐಗೆ ನ್ಯಾಯಾಲಯಗಳು ಸೂಕ್ತ ನಿರ್ದೇಶನ ನೀಡಬಹುದಾಗಿದೆ' ಎಂದು ನ್ಯಾಯಪೀಠ ವಿವರಿಸಿದೆ.
- 'ನನ್ನ ಮಗ 2019ರಿಂದ ಕಾಣೆ ಆಗಿದ್ದಾನೆ. ಈವರೆಗೂ ಪತ್ತೆಯಾಗಿಲ್ಲ. ಆದರೆ, 2023ರ ಜೂನ್ 20ರಂದು ಆತನ ಆಧಾರ್ ಬಳಕೆ ದೃಢೀಕರಣವಾಗಿರುವ ಮಾಹಿತಿ ಇದೆ. ಹಾಗಾಗಿ, ಆ ವಿವರ ಒದಗಿಸಲು ನಿರ್ದೇಶಿಸಬೇಕು' ಎಂದು ಅರ್ಜಿದಾರರು ಕೋರಿದ್ದರು.

## ❖ ಬ್ಯಾಡ್ಮಿಂಟನ್: ಭಾರತಕ್ಕೆ 4 ಪದಕ

ಸಂದರ್ಭ: ಭಾರತ ತಂಡದ ಸ್ಪರ್ಧಿಗಳು, ಕ್ವಾಲಾಲಂಪುರದಲ್ಲಿ ಸೆ. 16 ರಿಂದ 20ರವರೆಗೆ ನಡೆದ ವಿಶೇಷ ಒಲಿಂಪಿಕ್ಸ್ ಏಷ್ಯಾ ಪೆಸಿಫಿಕ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಒಂದು ಚಿನ್ನ, ಮೂರು ಬೆಳ್ಳಿ ಪದಕಗಳನ್ನು ಗೆದ್ದುಕೊಂಡಿದ್ದಾರೆ.

- ಚಾನ್ವಿ ಶರ್ಮಾ ಮಹಿಳೆಯರ ಸಿಂಗಲ್ಸ್‌ನಲ್ಲಿ ಚಿನ್ನ ಗೆದ್ದರು. ನಂತರ ಸುಜಿತಾ ಸುಕುಮಾರನ್ ಜೊತೆಗೂಡಿ ಡಬಲ್ಸ್‌ನಲ್ಲಿ ಬೆಳ್ಳಿ ಜಯಿಸಿದರು ಎಂದು ಸ್ಪೆಷಲ್ ಒಲಿಂಪಿಕ್ಸ್ ಭಾರತ್ ಪ್ರಕಟಣೆ ತಿಳಿಸಿದೆ.
- ಅಂಕಿತ್ ದಲಾಲ್ ಪುರುಷರ ಸಿಂಗಲ್ಸ್‌ನಲ್ಲಿ ಬೆಳ್ಳಿ ಜಯಿಸಿದರಲ್ಲದೇ, ನಂತರ ಡಬಲ್ಸ್‌ನಲ್ಲಿ ಅಮಲ್ ಬಿಜು ಜೊತೆಗೂಡಿ ಇನ್ನೊಂದು ಬೆಳ್ಳಿ ಪದಕವನ್ನೂ ಗೆದ್ದರು.

## ❖ ಜೂನಿಯರ್ ಶೂಟಿಂಗ್: ಜೊನಾಥನ್‌ಗೆ ಸ್ವರ್ಣ

ಸಂದರ್ಭ: ಭಾರತದ ಉದಯೋನ್ಮುಖ ಶೂಟರ್ ಜೊನಾಥನ್ ಗ್ಯಾವಿನ್ ಆ್ಯಂಟನಿ ಅವರು ಇಲ್ಲಿ ನಡೆಯುತ್ತಿರುವ ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವಕಪ್ ಟೂರ್ನಿಯ 10 ಮೀ. ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಚಿನ್ನಕ್ಕೆ ಗುರಿ ಇಟ್ಟರು.

ಟೂರ್ನಿಯ ಎರಡನೇ ದಿನವಾದ ಶುಕ್ರವಾರ ನಡೆದ ಫೈನಲ್ ಸುತ್ತಿನಲ್ಲಿ ಜೊನಾಥನ್ ಅವರು 244.8 ಪಾಯಿಂಟ್ಸ್ ಸಂಪಾದಿಸಿದರು. ಇಟಲಿಯ ಲ್ಯೂಕಾ ಅರಿಘಿ (236.3) ಹಾಗೂ ಸ್ಪೇನ್‌ನ ಲ್ಯೂಕಾಸ್ ಸ್ಯಾಂಚೆಝ್ ಟೋಮ್ (215.1) ಅವರು ಕ್ರಮವಾಗಿ ಬೆಳ್ಳಿ ಹಾಗೂ ಕಂಚಿನ ಪದಕ ಗೆದ್ದರು.



ರಶ್ಮಿಕಾ ಸಹಗಲ್

- ಕ್ವಾಲಿಫಿಕೇಶನ್ ಸುತ್ತಿನಲ್ಲಿ ಎರಡನೇ ಸ್ಥಾನ ಪಡೆದಿದ್ದ ಭಾರತದ ಚಿರಾಗ್ ಶರ್ಮಾ ಅವರು, ಫೈನಲ್ ಹಣಾಹಣಿಯಲ್ಲಿ ನೀರಸ ಪ್ರದರ್ಶನದೊಂದಿಗೆ (115.6) ಎಂಟನೇ ಹಾಗೂ ಕೊನೆಯ ಸ್ಥಾನ ಪಡೆದರು.
- **<u>ರಜತ ಗೆದ್ದ ರಶ್ಮಿಕಾ</u>**: ಜೂನಿಯರ್ ಮಹಿಳೆಯರ 10 ಮೀ. ಏರ್ ರೈಫಲ್ ಸ್ಪರ್ಧೆಯಲ್ಲಿ ಭಾರತದ ರಶ್ಮಿಕಾ ಸಹಗಲ್ ಅವರು 236.1 ಪಾಯಿಂಟ್ಸ್‌ಗಳೊಡನೆ ಬೆಳ್ಳಿ ಪದಕಕ್ಕೆ ಕೊರಳೊಡ್ಡಿದರು. ಸ್ವತಂತ್ರ ತಟಸ್ಥ ಸ್ಪರ್ಧಿ (ಎಐಎ) ಎವಿಲಿನಾ ಶೀನಾ (240.9) ಸ್ವರ್ಣ ಗೆದ್ದರೆ, ಇರಾನ್‌ನ ಫಾತಿಮಾ ಶೆಕರಿ (213.8) ಕಂಚಿನ ಪದಕ ತಮ್ಮದಾಗಿಸಿಕೊಂಡರು.



ಜೂನಿಯರ್ ಪುರುಷರ 10 ಮೀ. ಏರ್ ರೈಫಲ್ ಸ್ಪರ್ಧೆಯಲ್ಲಿ ಚಿನ್ನ ಗೆದ್ದ ಜೊನಾಥನ್ ಗ್ಯಾವಿನ್ ಆ್ಯಂಟನಿ (ಮಧ್ಯ), ಬೆಳ್ಳಿ ಗೆದ್ದ ಇಟಲಿಯ ಲ್ಯೂಕಾ ಆರಿಘಿ (ಎಡ) ಹಾಗೂ ಕಂಚಿನ ಪದಕ ಗೆದ್ದ ಸ್ಪೇನ್‌ನ ಲ್ಯೂಕಾಸ್ ಸ್ಯಾಂಚೆಝ್ ಟೋಮ್

- ಆದರೆ, ಕ್ವಾಲಿಫಿಕೇಶನ್ ಸ್ಪರ್ಧೆಯಲ್ಲಿ ಕ್ರಮವಾಗಿ ಮೊದಲೆರಡು ಸ್ಥಾನ ಪಡೆದಿದ್ದ ವಂಶಿಕಾ ಚೌಧರಿ ಹಾಗೂ ಮೋಹಿನಿ ಸಿಂಗ್ ಅವರು ಪ್ರಶಸ್ತಿ ಸುತ್ತಿನಲ್ಲಿ ನಿರಾಸೆ ಅನುಭವಿಸಿದರು.

ವಂಶಿಕಾ (174.2) ಅವರು 5ನೇ ಸ್ಥಾನ ಪಡೆದರೆ, ಮೋಹಿನಿ (153.2) ಅವರು 6ನೇ ಸ್ಥಾನ ಪಡೆಯಲಷ್ಟೇ ಶಕ್ತರಾದರು.

--------------------------------------------------ಶುಭವಂದನೆಗಳು --------------------------------------------

IAS/KAS Academy

